ಸಂಪುಟ: 04 ಸಂಚಿಕೆ: 236 ಪುಟಗಳು: 08 ಶನಿವಾರ 09 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸ್ವರ್ಗ ಎಂದರೆ ಮತ್ತೇನೂ ಅಲ್ಲ... ಯಾವಾಗಲೂ ಸಂತೋಷವಾಗಿ ಇರುವವರ ಮನಸ್ಸೇ

ಉದಯ ವಾಹಿನಿ

**ವರದಿಗಾರರು ಬೇಕಾಗಿದ್ದಾರೆ**


ಎಂಎ., ಜರ್ನಲಿಸಂ ಮಾಡಿರುವಂತಹ ಉತ್ಸಾಹಿ ಯುವಕ ಯುವತಿಯರು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟಗಳಲ್ಲಿ ಕೆಲಸ ಮಾಡುವಂತಹ

**ರಾಜ್ಯದಾದ್ಯಂತ ವರದಿಗಾರರು ಬೇಕಾಗಿದ್ದಾರೆ**

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
9448225696
+91 8035841833

#: 1230 'JAYAMAHAL 13th cross, 2nd phase, Girinagar, Bangalore-560085. (Near to Bangalore one park, opposite mandya medical)
udayavahininews@gmail.com

# ಕಾಂಗ್ರೆಸ್ ವಕ್ಫ್ ಜಿಹಾದ್ ಆಟ ಕಮಲ ಮಾಡುವುದೇ ಧೂಳೀಪಟ




**ಅಲ್ಲಾ ಯಾವಾಗ ಭಾರತಕ್ಕೆ ಬಂದ?**

## ಕಾಂಗ್ರೆಸ್ ವಿರುದ್ಧ ಪ್ರಲ್ಹಾದ್ ಜೋಶಿ ಗಂಭೀರ ಆರೋಪ | ಕಾಂಗ್ರೆಸ್ಸಿಗರನ್ನು ಹುಂಬರು, ತಿಳಿವಳಿಕೆ ಇಲ್ಲದವರು ಎಂದು ಕರೆಯಲು ನಾನು ತಯಾರಿಲ್ಲ

**ಇದು ಸಾಬರ ಸರ್ಕಾರ**

ಇದು ಸಾಬರ ಸರ್ಕಾರ, ಹಿಂದೂಗಳದ್ದಲ್ಲ. ಆದಿಲ್ ಶಾಹಿ, ನವಾಬರು ಇದ್ದ ಕಡೆ ಬಹುತೇಕ ಇದೇ ಆಗಿದೆ. ಬೀದರ್ ನಲ್ಲಿ ನಿಜಾಮ್ ಇದ್ದಾಗ ಏ ಸಬ್ ತುಮಾರಾ ಅಂತ ಹೇಳಿದ್ನಂತೆ. ಅದಕ್ಕೆ ಜಾಗ ಕೇಳ್ತಿದಾರೆ. ಅವರಿಗೆ ಕೋರ್ಟ್ ಇಲ್ಲ. ಡಿಸಿ, ಎಸಿ ಸಿವಿಲ್ ಯಾವ ಕೋರ್ಟ್ ಇಲ್ಲ. ಅವರದೇ ಟ್ರಿಬ್ಯುನಲ್ ಇದೆ. ಅಲ್ಲಿ ಜಡ್ಜ್ ಕೂಡಾ ಸಾಬನೇ. ಅವರೇ ನಿರ್ಣಯ ಮಾಡೋರು. ಇದು ಅಲ್ಲಾನ ಜಾಗ ಅಂತ ಜಮೀರ್ ಹೇಳ್ತಾನೆ. ಅಲ್ಲಾ ಯಾವಾಗ ಭಾರತಕ್ಕೆ ಬಂದ? ಚೆನ್ನಕೇಶವ, ಸೋಮೇಶ್ವರ ದೇವಾಲಯ ಅವರದಾ? ಕಾಗಿನೆಲೆ ಊರೇ ವಕ್ಫ್ ಮಾಡಿದ್ದಾರೆ. ಕಡಕೋಳ ಮೂರು ದೇವಸ್ಥಾನ ವಕ್ಫ್ ಅಂತಿದ್ದಾರೆ. ಇವರಿಗೆ ಅಲ್ಲಾ ಯಾವಾಗ ಕೊಟ್ಟ? ಎಂದು ಯತ್ನಾಳ್ ಪ್ರಶ್ನಿಸಿದರು.



• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತ ವಕ್ಫ್ ಮೂಲಕ ಹೊಸ ಜಿಹಾದ್ ನಡೆದಿದೆ. ಸಿದ್ದರಾಮಯ್ಯನವರು ಮತ್ತು ಕಾಂಗ್ರೆಸ್ಸಿಗರ ನಡೆನುಡಿ ನೋಡಿದರೆ, ಇವರ ದುರುಳತನ ಅರ್ಥವಾಗುತ್ತದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ತಿಳಿಸಿದರು.

ಮಾಧ್ಯಮ ಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, ಕಾಂಗ್ರೆಸ್ಸಿಗರನ್ನು ಹುಂಬರು, ತಿಳಿವಳಿಕೆ ಇಲ್ಲದವರು ಎಂದು ಕರೆಯಲು ನಾನು ತಯಾರಿಲ್ಲ. ಅವರೇನು ಮಾತನಾಡುತ್ತಾರೆಂದು ಅವರಿಗೆ ಗೊತ್ತಿದೆ ಎಂದು ತಿಳಿಸಿದರು. ವಕ್ಫ್ ಆಸ್ತಿ ಸಂರಕ್ಷಿಸುವುದಾಗಿ ಬಿಜೆಪಿ ಪ್ರಣಾಳಿಕೆಯಲ್ಲಿ ಹೇಳಿದ್ದಾಗಿ ತಿಳಿಸಿದ್ದಾರೆ. ಇದ್ದ ವಕ್ಫ್ ಆಸ್ತಿಯನ್ನು ಕಾಂಗ್ರೆಸ್ಸಿನ ಹಿರಿಯ ನಾಯಕರು ಲೂಟಿ ಮಾಡಿದ್ದರು. ಬಾಡಿಗೆ, ಲೀಸ್ ಮೂಲಕ ಸಾವಿರಾರು ಕೋಟಿ ಹಣ ಪಡೆಯುತ್ತಿದ್ದರು.

ಇರುವ ವಕ್ಫ್ ಆಸ್ತಿ ಸಂರಕ್ಷಿಸುವುದಾಗಿ ನಾವು ಹೇಳಿದ್ದೆವು. ಈಗ ವಕ್ಫ್ ಭೂ ಬಿಟ್ಟಿದ್ದಾರೆ; ನೂರಾರು ವರ್ಷಗಳ ಮಂದಿರ, ಮಠ ಹೊಡೆಯಲು ಮುಂದಾಗಿದ್ದಾರೆ. ವಿಜಯಪುರ ಜಿಲ್ಲೆಯ ಪಡಗಾನೂರು ಗ್ರಾಮದಲ್ಲಿ ಚಾಲುಕ್ಯರು ಕಟ್ಟಿದ 1500 ವರ್ಷಗಳ ಹಿಂದಿನ ದೇವಸ್ಥಾನ ವಕ್ಫ್ ಎಂದು ಘೋಷಿಸಿದ್ದಾರೆ ಎಂದು ಆರೋಪಿಸಿದರು.

ಕೇವಲ ಕಾಲಂ ನಂಬರ್ 11ರಲ್ಲಿ ದಾಖಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದರು. ಕೇಳಿದರೆ ಸಮರ್ಪಕ ಉತ್ತರ ಸಿಗಲಿಲ್ಲ ಎಂದು ಆಕ್ಷೇಪಿಸಿದರು.

ಸೇಲ್ ಡೀಡ್ ಇಲ್ಲದೆ ವಕ್ಫ್ ಷಡ್ಯಂತ್ರ ನಡೆಸುತ್ತಿದೆ. ಕಾಂಗ್ರೆಸ್ ಪಕ್ಷ ಭಯೋತ್ಪಾದಕರ ಬಗ್ಗೆ ಮೃದು ಧೋರಣೆ ಹೊಂದಿದೆ. ಫಾರೂಕ್ ಅಬ್ದುಲ್ಲ ಭಯೋತ್ಪಾದಕರನ್ನು ಕೊಲ್ಲಬಾರದು ಎನ್ನುತ್ತಿದ್ದಾರೆ. ಪಾಕ್ ಜೊತೆ ಮಾತುಕತೆ ಮಾಡಲು ಕೋರುತ್ತಾರೆ. ಅವರ ಜೊತೆ ಇಂಡಿ ಒಕ್ಕೂಟ ಇದೆ. ಕಾಂಗ್ರೆಸ್ ಪಕ್ಷಕ್ಕೆ ಬುದ್ಧಿ ಭ್ರಮಣೆ ಆಗಿದೆಯೇ ಎಂದು ಪ್ರಶ್ನೆಯನ್ನು ಮುಂದಿಟ್ಟರು. ತುಷ್ಟೀಕರಣದ ಈ ನೀತಿಯನ್ನು ವಿರೋಧಿಸುತ್ತೇನೆ; ಕಾಂಗ್ರೆಸ್ ಇಲ್ಲಿ ಗೆದ್ದರೆ ನಿಮ್ಮ ಮನೆಗಳನ್ನೂ ವಕ್ಫ್ ಆಸ್ತಿ ಎನ್ನಬಹುದು ಎಂದು ಎಚ್ಚರಿಸಿದರು.

1. ಕಾಂಗ್ರೆಸ್ ಪಕ್ಷವು ಅಲ್ಪಸಂಖ್ಯಾತರು ಅರ್ಥಾತ್ ಮುಸಲ್ಮಾನರ ತುಷ್ಟೀಕರಣವನ್ನೇ ಧ್ಯೇಯವನ್ನಾಗಿ ಮಾಡಿಕೊಂಡಿದೆ
2. ಮಣ್ಣು ಮಾಡಲು, ನಮಾಜ್ ಮಾಡಲು ಜಾಗ ಕೊಟ್ಟರೆ ಇಡೀ ಸರ್ವೆ ನಂಬರ್ ನಮ್ಮದು ಅಂತಾರೆ
3. ಜೆಪಿಸಿ ಅಧ್ಯಕ್ಷ ಜಗದಂಬಿಕಾ ಪಾಲ್ ಅವರ ವಿಜಯಪುರ ಭೇಟಿ ಕಾನೂನುಬಾಹಿರ

**ಮುಸಲ್ಮಾನರ ತುಷ್ಟೀಕರಣವೇ ಧ್ಯೇಯ**

ಕಾಂಗ್ರೆಸ್ ಪಕ್ಷವು ಅಲ್ಪಸಂಖ್ಯಾತರು ಅರ್ಥಾತ್ ಮುಸಲ್ಮಾನರ ತುಷ್ಟೀಕರಣವನ್ನೇ ಧ್ಯೇಯವನ್ನಾಗಿ ಮಾಡಿಕೊಂಡಿದೆ ಎಂದು ಆಕ್ಷೇಪಿಸಿದರು. ಸಿದ್ದರಾಮಯ್ಯನವರು ಮೊದಲನೇ ಅವಧಿಯಲ್ಲಿ 2013-18ರಲ್ಲಿ ನಿರ್ಬಂಧಿತ ಪಿಎಫ್ಐ, ಎಸ್‌ಡಿಪಿಐ, ಕೆಎಫ್‌ಡಿ ಸಿಮಿಯ ಪೂರ್ವಾವತಾರವಾದ 175 ಕೇಸುಗಳನ್ನು ವಾಪಸ್ ಪಡೆದಿದ್ದರು. ಬಳಿಕ ಈಚೆಗೆ ಅನೇಕ ಬಾರಿ ಹಿಂದೂ ಸಂಘಟನೆಗಳು, ಮಂದಿರಗಳ ಮೇಲೆ ದಾಳಿ ಆಗಿದೆ. ಆದರೆ, ಕಾಂಗ್ರೆಸ್ಸಿಗರಿಗೆ ಏನೂ ಅನಿಸುತ್ತಿಲ್ಲ. ಸೌಮ್ಯವಾಗಿ ಅವರನ್ನು ನೋಡಿಕೊಂಡಿದ್ದರು ಎಂದು ಪ್ರಲ್ಹಾದ್ ಜೋಶಿ ಅವರು ಟೀಕಿಸಿದರು.



**ಸಿದ್ದರಾಮಯ್ಯ ಅರೆಹುಚ್ಚ ಜಮೀರ್‌ಗೆ ಹೇಳಿದರು**

ಮಣ್ಣು ಮಾಡಲು, ನಮಾಜ್ ಮಾಡಲು ಜಾಗ ಕೊಟ್ಟರೆ ಇಡೀ ಸರ್ವೆ ನಂಬರ್ ನಮ್ಮದು ಅಂತಾರೆ. ಸಣ್ಣ ಕಲ್ಲು ಇದ್ದರೂ ಸುಣ್ಣ ಹೊಡೆದು ಆ ಜಾಗಕ್ಕೆ ಚಾದರ ಹಾಕಿ ನಮ್ಮದು ಅಂತಾರೆ. ಬೊಮ್ಮಾಯಿ ಕಾಲದಲ್ಲಿ ಇದಕ್ಕೆ ಅವಕಾಶ ಇರಲಿಲ್ಲ. ಸಿದ್ದರಾಮಯ್ಯ ಅರೆಹುಚ್ಚ ಜಮೀರ್ ಗೆ ಹೇಳಿದರು. ಅದಕ್ಕೆ ಜಿಲ್ಲೆಗಳಿಗೆ ಹೋಗಿ ಅಧಿಕಾರಿಗಳಿಗೆ ಜಮೀರ್ ಏಕ ವಚನದಲ್ಲಿ ಆರ್ಡರ್ ಮಾಡಿದಾರೆ. ಕೇಂದ್ರದ ಅಧಿವೇಶನದಲ್ಲಿ ವಕ್ಫ್ ತಿದ್ದುಪಡಿ ಕಾನೂನಿಗೆ ವಿರೋದ ಮಾಡಿದರೆ ಓಡಾಡೋಕೆ ಬಿಡಲ್ಲ ಅಂತ ಕಾಂಗ್ರೆಸ್ ಎಂಪಿಗಳಿಗೆ ಹೇಳಿ. ಕಾಂಗ್ರೆಸ್ ಎಂಪಿಗಳ ಮನೆ ಮುಂದೆ ಧರಣಿ ಮಾಡಿ ಎಂದು ಯತ್ನಾಳ್ ಕರೆ ನೀಡಿದರು.



**ಹಿಂದುತ್ವದ ಪ್ರಯೋಗಶಾಲೆ ಮಾಡುವ ಸಂಚು**

ಜೆಪಿಸಿ ಅಧ್ಯಕ್ಷ ಜಗದಂಬಿಕಾ ಪಾಲ್ ಅವರ ವಿಜಯಪುರ ಭೇಟಿ ಕಾನೂನುಬಾಹಿರ. ಇದರ ಜತೆಗೆ ಯತ್ನಾಳ ಮತ್ತು ಕರಂದ್ಲಾಜೆ ಹೋರಾಟ ಕೆಲವೇ ಗಂಟೆಗಳಲ್ಲಿ ಮುಗಿದಿದೆ ಎಂದು ಸಚಿವ ಎಂಬಿ ಪಾಟೀಲ ವ್ಯಂಗ್ಯವಾಡಿದರು. ನಾನು, ಕಂದಾಯ ಸಚಿವ ಕೃಷ್ಣ ಭೈರೇಗೌಡ ಮತ್ತು ವಕ್ಫ್ ಸಚಿವ ಜಮೀರ ಅಹ್ಮದ್ ಖಾನ್ ಕೂಡ ಈ ಬಗ್ಗೆ ಸ್ಪಷ್ಟನೆ ಕೊಟ್ಟಿದ್ದೇವೆ. 2023ರ ಜೂನ್ 1ರಿಂದ 2024ರ ಅ.31ರವರೆಗೆ ರಾಜ್ಯದಲ್ಲಿ ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದಂತೆ ನೋಟಿಸ್ ಜಾರಿ ಮತ್ತು ತಪ್ಪು ಸರಿಪಡಿಸಲು ಕೈಗೊಳ್ಳಲಾಗಿರುವ ಕ್ರಮಗಳ ಬಗ್ಗೆ ಮಾಹಿತಿಯನ್ನು ಸಾರ್ವಜನಿಕ ಬಹಿರಂಗ ಪಡಿಸಿದ್ದೇವೆ. ಕಳೆದ ಹತ್ತು ವರ್ಷಗಳಿಂದ ರಾಜ್ಯ ಮತ್ತು ಕೇಂದ್ರದಲ್ಲಿ ಅಧಿಕಾರದಲ್ಲಿ ಇದ್ದಾಗ ವಕ್ಫ್ ಆಸ್ತಿ ರಕ್ಷಣೆ ಕುರಿತು ಅಪಾರ ಕಾಳಜಿ ತೋರಿದ ಬಿಜೆಪಿ ಈಗ ವಿಜಯಪುರವನ್ನು ಹಿಂದುತ್ವದ ಪ್ರಯೋಗ ಶಾಲೆಯನ್ನಾಗಿ ಮಾಡಲು ಹೊರಟಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಆರೋಪಿಸಿದ್ದಾರೆ.

## ರಾಜ್ಯದ ಬಹುತೇಕ ಉದ್ಯಮಗಳು ಗುಜರಾತ್ ರಾಜ್ಯಕ್ಕೆ ಹೋಗುತ್ತಿವೆ

• ಉದಯವಾಹಿನಿ, ರಾಮನಗರ

ರಾಜ್ಯದಲ್ಲಿ ಉದ್ಯೋಗ ಸೃಷ್ಟಿಸುತ್ತೇವೆ ಎಂದು ಎಚ್ ಡಿ ಕುಮಾರಸ್ವಾಮಿ ಹೇಳಿಕೆಯ ವಿಚಾರವಾಗಿ ಸಚಿವ ದಿನೇಶ್ ಗುಂಡೂರಾವ್, ರಾಜ್ಯದ ಬಹುತೇಕ ಉದ್ಯಮಗಳು ಗುಜರಾತ್ ರಾಜ್ಯಕ್ಕೆ ಹೋಗುತ್ತಿವೆ. ಹಲವು ಉದ್ಯಮಗಳು ನಮ್ಮ ಕರ್ನಾಟಕಕ್ಕೆ ಬರಲು ತಯಾರಿದ್ದವು. ಆದರೆ ಕೇಂದ್ರ ಸರ್ಕಾರ ಅಡ್ಡ ಬರುತಿದೆ. ಗುಜರಾತ್ ಗೆ ಹೋಗಲು ಒತ್ತಡ ಹಾಕುತ್ತಿದ್ದಾರೆ. ಎಚ್ ಡಿ ಕುಮಾರಸ್ವಾಮಿ ಅದನ್ನು ತಡೆಯಲಿ. ಚುನಾವಣೆ ಗೆಲ್ಲುವುದಕ್ಕೆ ಮಾತ್ರ ಕಣ್ಣೀರು ಹಾಕುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು. ಉಪಚುನಾವಣೆಯಲ್ಲಿ ಎಚ್ ಡಿ ದೇವೇಗೌಡ ಅಗ್ರಸಿವ್ ಆಗಿ ಮಾತನಾಡುತ್ತಿದ್ದಾರೆ. ಮುತ್ಸದ್ದಿ ವ್ಯಕ್ತಿಗಳು ಹೀಗೆ ಮಾತನಾಡಬಾರದು.ಎನ್ ಡಿ ಎ ನಾಯಕರಿಗೆ ಈಗ ಮೇಕೆದಾಟು ವಿಚಾರ ನೆನಪಾಗಿದೆ.ಪ್ರಧಾನಿ ಮೋದಿ ಬಳಿ ನೀವು ಹೋಗುವಾಗ ನಮ್ಮನ್ನು ಕರೆಯಬೇಕಿತ್ತು. ಅದನ್ನು ಬಿಟ್ಟು ಈಗ ದೇವೇಗೌಡರು ಉಪಚುನಾವಣೆಗೆ ಬಂದಿದ್ದಾರೆ. ಮಾಜಿ ಪ್ರಧಾನ ಮಂತ್ರಿ ದೇವೇಗೌಡರಿಗೆ ಈ ಗತಿ ಬರಬಾರದಿತ್ತು ಎಂದರು. ಇವರದ್ದು ಸ್ವಾರ್ಥದ ಕಣ್ಣೀರು ಅನ್ಯಾಯ ಮಾಡಿದ್ದಾರೆ ಎಂದು ಹೇಳುತ್ತಾರೆ. ಇವರಿಗೆ ಯಾರು ಅನ್ಯಾಯ ಮಾಡಿದ್ದಾರೆ. ಇವರದ್ದು ಬರೀ ಡ್ರಾಮಾ. ಚನ್ನಪಟ್ಟಣ ಕ್ಷೇತ್ರದಲ್ಲಿ ಕೆರೆಗಳನ್ನು ಯಾರು ತುಂಬಿಸಿದ್ದು ಅಂತ ಕೇಳಿ. ದಾರಿಯಲ್ಲಿ ಹೋಗುವವನು ಕೂಡ ಯೋಗೇಶ್ವರ್ ಅಂತ ಹೇಳುತ್ತಾನೆ.ರಾಮನಗರ ಜಿಲ್ಲೆಯ ಚನ್ನಪಟ್ಟಣ ಕ್ಷೇತ್ರದ ಮೈಲನಾಯಕನ ಹೊಸಹಳ್ಳಿಯಲ್ಲಿ ಸಚಿವ ದಿನೇಶ್ ಗುಂಡೂರಾವ್ ಹೇಳಿಕೆ ನೀಡಿದರು

## ಕೇಂದ್ರ ಸಚಿವೆ ಮುಂದೆ ವ್ಯಕ್ತಿ ಆಕ್ರೋಶ, ತಬ್ಬಿಬ್ಬಾದ ನಿರ್ಮಲಾ

• ಉದಯವಾಹಿನಿ, ಮೈಸೂರು

ಸಚಿವೆ ನಿರ್ಮಲಾ ಸೀತಾರಾಮನ್ ಅವರ ಮುಂದೆಯೇ ವ್ಯಕ್ತಿಯೊಬ್ಬರು ಗ್ಯಾರಂಟಿಯಿಂದ ಕರ್ನಾಟಕದಲ್ಲಿ ಲೂಟಿಯಾಗಿದೆ. ಮಹಾರಾಷ್ಟ್ರದಲ್ಲಿ ಘೋಷಿಸಬೇಡಿ ಎಂಬುದಾಗಿ ಹೇಳಿದರು. ಈ ಮಾತು ಕೇಳಿದಂತ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ತಬ್ಬಿಬ್ಬಾದಂತ ಘಟನೆ ನಡೆದಿದೆ. ಮೈಸೂರು ನಗರದಲ್ಲಿ ಸಂಗೀತ ಉತ್ಸವದಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಭಾಗಿಯಾಗಿದ್ದರು. ಈ ಕಾರ್ಯಕ್ರಮದಲ್ಲಿ ದಿಢೀರ್ ಎದ್ದಂತ ವ್ಯಕ್ತಿಯೊಬ್ಬರು ಮೇಡಂ ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಯಿಂದ ಲೂಟಿಯಾಗುತ್ತಿದೆ. ದಯವಿಟ್ಟು ಮಹಾರಾಷ್ಟ್ರದಲ್ಲಿ ಗ್ಯಾರಂಟಿ ಯೋಜನೆಗಳನ್ನು ಘೋಷಿಸಬೇಡಿ ಎಂಬುದಾಗಿ ಆಗ್ರಹಿಸಿದರು.ವ್ಯಕ್ತಿಯ ಈ ಮಾತು ಕೇಳಿದಂತ ನಿರ್ಮಲಾ ಸೀತಾರಾಮನ್ ಕೆಲ ಕಾಲ ತಬ್ಬಿಬ್ಬಾದರು. ಕೂಡಲೇ ಸ್ಥಳದಲ್ಲಿದ್ದಂತ ಪೊಲೀಸರು ಆ ವ್ಯಕ್ತಿಯನ್ನು ಕಾರ್ಯಕ್ರಮದಿಂದ ಹೊರ ಕಳುಹಿಸಿದರು.

## ಜೆಪಿಸಿ ಬಗ್ಗೆ ಆರೋಪ ಮಾಡುವವರಿಗೆ ಸಂವಿಧಾನದ ಬಗ್ಗೆ ಗೌರವ ಇಲ್ಲ

• ಉದಯವಾಹಿನಿ, ಹುಬ್ಬಳ್ಳಿ

ವಕ್ಫ್ ಕಾಯ್ದೆ ತಿದ್ದುಪಡಿಗೆ ಸಂವಿಧಾನ ಬದ್ಧವಾಗಿ ಸಂಸತ್ತಿನ ಜಂಟಿ ಸದನ ಸಮಿತಿ ರಚನೆಯಾಗಿದ್ದು, ಸಮಿತಿ ಬಗ್ಗೆ ಆರೋಪ ಮಾಡುವವರಿಗೆ ಸಂವಿಧಾನದ ಬಗ್ಗೆ ಗೌರವ ಇಲ್ಲ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ವಕ್ಫ್ ಸಂಸದೀಯ ಮಂಡಳಿ ಕರ್ನಾಟಕಕ್ಕೆ ಭೇಟಿ ನೀಡಿರುವುದಕ್ಕೆ ಅದೊಂದು ಯಾವುದೇ ಆಧಾರ ಹಿತವಾದ ಸಮಿತಿ ಎಂದು ಕಾಂಗ್ರೆಸ್ ನವರು ಮಾಡಿರುವ ಆರೋಪಕ್ಕೆ ಉತ್ತರ ಕೊಟ್ಟ ಅವರು, ಇದೊಂದು ಪಾರ್ಲಿಮೆಂಟ್ ಮಾಡಿದ ಸಮಿತಿ. ಉಭಯ ಸದನಗಳಿಂದ ರಚನೆಯಾದ ಸಮಿತಿ, ಪಾರ್ಲಿಮೆಂಟ್ ಜಂಟಿ ಸದನ ಮಾಡಿದ ಸಮಿತಿಗೆ ತನ್ನದೇ ಆದ ಗೌರವ ಇದೆ. ಕರ್ನಾಟಕದಲ್ಲಿ ಸಮಸ್ಯೆ ಇದೆ ಅಂತ ಅವರು ಇಲ್ಲಿಗೆ ಬಂದಿದ್ದರು. ಯಾವುದೇ ರೀತಿಯ ರಾಜಕೀಯ ಇಲ್ಲ. ಸಮಿತಿಯವರು ರೈತರ ಸಮಸ್ಯೆ ಆಲಿಸಿದ್ದಾರೆ ಎಂದರು.

## ಬಿಜೆಪಿಯವರು 'ರಕ್ತ ಪಿಪಾಸುಗಳು'

### ಬಿಜೆಪಿ ನಾಯಕರ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಭಾರತೀಯ ಜನತಾ ಪಕ್ಷದವರು ರಕ್ತ ಪಿಪಾಸುಗಳು. ಬಿಜೆಪಿಯವರು ಅಮಾಯಕರ ಹೆಸರಲ್ಲಿ ರಾಜಕೀಯ ಲಾಭ ಪಡೆಯುವವರು. ಮಾಧ್ಯಮಗಳ ಮುಂದೆ ಹಾಗಾಗಿದೆ ಹೀಗಾಗಿದೆ ಎಂದು ಹೇಳಿಕೆ ಕೊಡುತ್ತಾರೆ. ನಿಮ್ಮಿಂದ ತಪ್ಪಾದಾಗಲೂ ಹಾಗೆ ಮಾತನಾಡಬೇಕಲ್ವಾ? ಇಂದು ನವೆಂಬರ್ 8 ನೋಟು ಅಮಾನೀಕರಣ ವರ್ಷಾಚರಣೆ.

ಬಿಜೆಪಿಯವರು ಇದರ ಸಂಭ್ರಮಾಚರಣೆ ಮಾಡಿದ್ದೀರಾ? ಇಲ್ಲ ಎಂದು ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದರು.

ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ಕಪ್ಪು ಹಣ ವಾಪಸ್ ತರುವ ನೋಟು ಅಮಾನೀಕರಣ ಎಂದು ಹೇಳಿದ್ದರು. ಕಪ್ಪು ಹಣ ವಾಪಸ್ ಬಂತಾ? ಬ್ಯಾಂಕ್ ಎಟಿಎಂ ಮುಂದೆ ಸರತಿ ಸಾಲಿನಲ್ಲಿ ನಿಂತವರು ಎಷ್ಟು ಜನ ಹೇಳಿ?




ನರೇಂದ್ರ ಮೋದಿ ಅವರಷ್ಟು ದೊಡ್ಡ ಸುಳ್ಳುಗಾರ ಮತ್ತೊಬ್ಬರಿಲ್ಲ. ನರೇಂದ್ರ ಮೋದಿ ಬಿಜೆಪಿಯವರು ಸುಳಿನ ಫ್ಯಾಕ್ಟರಿ ಇಟ್ಟುಕೊಂಡಿದ್ದಾರೆ ಎಂದು ಕಿಡಿಕಾರಿದರು. 2022 ರಲ್ಲಿ ಹಾವೇರಿಯ ರೈತ ಆತ್ಮಹತ್ಯೆಗೆ ಶರಣಾಗಿದ್ದರು.ಆಗ ಬಿಜೆಪಿ ಅಧಿಕಾರದಲ್ಲಿ ಇತ್ತು. ಬಸವರಾಜ ಬೊಮ್ಮಾಯಿ ಸಿಎಂ ಆಗಿದ್ದರು. ಅಂದು ಸಿಎಂ ಆಗಿದ್ದ ಬೊಮ್ಮಾಯಿ ತವರು ಜಿಲ್ಲೆಯಲ್ಲಿ ರೈತ ಆತ್ಮಹತ್ಯೆ ಮಾಡಿಕೊಂಡಿದ್ದ.


ಸಿಎಂ ತವರು ಜಿಲ್ಲೆಯಲ್ಲಿ ರೈತ ಆತ್ಮಹತ್ಯೆ ಆದಾಗ ಬಿಜೆಪಿ ಏನು ಮಾಡುತ್ತಿತ್ತು? ಬಿಜೆಪಿಯವರು ಕುರ್ಚಿಗಾಗಿ ಮುಸ್ಲಿಮರನ್ನು ಅಷ್ಟೇ ಬಲಿ ಕೊಡುವುದಿಲ್ಲ ಬೇರೆ ಸಮುದಾಯದವರನ್ನು ಕೂಡ ತಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತಾರೆ ಎಂದರು.

ರಾಜ್ಯದಲ್ಲಿ ನಾವು ವಕ್ಫ್ ಆಸ್ತಿ ಪತ್ತೆ ಹಚ್ಚಿ ರಕ್ಷಣೆ ಮಾಡುತ್ತೇವೆ. ಜಿಪಿಎಸ್ ಮಾದರಿಯಲ್ಲಿ ವಕ್ಫ್ ಆಸ್ತಿಯನ್ನು ಪತ್ತೆ ಹಚ್ಚುತ್ತೇವೆ ವಕ್ಫ್ ಆಸ್ತಿ ಒತ್ತುವರಿ ಮಾಡುವುದಾಗಿ ನಿಮ್ಮ ಸರ್ಕಾರ ಹೇಳಿತ್ತು. ಜಂಟಿ ಸದನ ಸಮಿತಿಯ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಅದು ಜಂಟಿ ಸದನ ಸಮಿತಿ ಅಲ್ಲ. ಬಿಜೆಪಿ ಸಮಿತಿ. ಅವರೊಬ್ಬರೇ ಹೇಗೆ ಬಂದರು?ಸಮಿತಿ ಸದಸ್ಯರು ಯಾಕೆ ಬರಲಿಲ್ಲ ಜಂಟಿ ಸಮಿತಿ ಸದನ ಸಮಿತಿಯ ರಾಜಕೀಯ ಪ್ರೇರಿತವಾಗಿದೆ. ಉಪಚುನಾವಣೆಯ ಸಂದರ್ಭದಲ್ಲಿ ಜೆಪಿಸಿ ಅಧ್ಯಕ್ಷರು ಬಂದಿದ್ದು ಹೇಗೆ? ಎಂದು ರಾಜ್ಯಕ್ಕೆ ಜೆಪಿಸಿ ಅಧ್ಯಕ್ಷ ಜಗದಾಂಬಿಕ ಪಾಲ್ ಬಂದಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿದರು.

## ಹಿಂದೂ ವಿರೋಧಿ ಧೋರಣೆ ಕಾಂಗ್ರೆಸ್‌ಗೆ ಶಾಪ

• ಉದಯವಾಹಿನಿ, ಬೆಂಗಳೂರು

ವಕ್ಫ್ ವಿಚಾರ, ರೈತ ಹಾಗೂ ಹಿಂದೂ ವಿರೋಧಿ ಧೋರಣೆ ಕಾಂಗ್ರೆಸ್‌ಗೆ ಶಾಪವಾಗಲಿದೆ. ಮೂರೂ ಕ್ಷೇತ್ರಗಳಲ್ಲಿ ತಮ್ಮ ಪಕ್ಷದ ಅಭ್ಯರ್ಥಿಗಳು ಗೆಲ್ಲಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.



ಶಿಗ್ಗಾವಿಯಲ್ಲಿ ಬಿಜೆಪಿ ಗೆದ್ದಾಗಿದೆ ಎನ್ನುವ ವಾತಾವರಣ ಸೃಷ್ಟಿಯಾಗಿದೆ. ಚನ್ನಪಟ್ಟಣ, ಸಂಡೂರಿನಲ್ಲಿ ಕಾಂಗ್ರೆಸ್ ಗೆದ್ದೇ ಗೆಲ್ಲುವ ವಿಶ್ವಾಸದಲ್ಲಿ ಸಿಎಂ ಇದ್ದರು. ಆದರೆ ಈಗ ಚನ್ನಪಟ್ಟಣ ಕೈಜಾರಿ ಹೋಗುತ್ತಿದೆ ಎಂಬುದು ಕಾಂಗ್ರೆಸ್‌ನವರಿಗೆ ಗೊತ್ತಾಗಿದೆ. ಸಂಡೂರು, ಚನ್ನಪಟ್ಟಣದಲ್ಲಿ ಬಿಜೆಪಿ ಕೈ ಮೇಲಾಗುತ್ತಿರುವುದು ಗೊತ್ತಾಗಿಯೇ ಖುದ್ದು ಸಿಎಂ ಸಿದ್ದರಾಮಯ್ಯ ಸಂಡೂರು ಕಡೆ ಗಮನ ಕೊಟ್ಟಿದ್ದಾರೆ ಎಂದು ಟಾಂಗ್ ಕೊಟ್ಟರು.

ನಾನೇ ಸಿಎಂ ಆಗಿ ಮುಂದುವರೆಯುತ್ತೇನೆ ಎಂಬ ಸಿದ್ದರಾಮಯ್ಯ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ಆರೋಪಿ ಸ್ಥಾನದಲ್ಲಿರುವ ಸಿಎಂ ತಮ್ಮ ಬೆನ್ನು ತಾವೇ ತಟ್ಟಿಕೊಳ್ಳುತ್ತಿದ್ದಾರೆ. ತಾವೇ ಸಿಎಂ ಆಗಿರುತ್ತೇನೆ ಎಂದು ಹೇಳುವ ಶಾಸಕರಿಗೆ ವಿಶ್ವಾಸ ತುಂಬಲು ಪ್ರಯತ್ನ ನಡೆಸುತ್ತಿದ್ದಾರೆ. ಆದರೆ ಸತ್ಯ ಏನು ಎಂಬುದು ಸಿಎಂಗೆ ಗೊತ್ತಿದೆ. ಅವರು ಯಾವಾಗ ರಾಜೀನಾಮೆ ಕೊಡುತ್ತಾರೆ ಎಂಬುದು ಡಿಕೆಶಿ, ಖರ್ಗೆಯವರಿಗೆ ಗೊತ್ತಿದೆ. ಮುಖ್ಯಮಂತ್ರಿಗಳ ರಾಜೀನಾಮೆ ಈಗಾಗಲೇ ನಿಶ್ಚಯ ಆಗಿದೆ. ಹಾಗಾಗಿ ಕೆಲ ಸಮುದಾಯಗಳ ಮತ ಕೀಳಲು ಪ್ರಯತ್ನ ನಡೆಸಿದ್ದಾರೆ ಎಂದು ಟೀಕಿಸಿದರು.

ತಗ್ಗಿ ಬಗ್ಗಿ ನಡೆಯಬೇಕು ಎನ್ನುವ ಡಿಕೆಶಿ ಹೇಳಿಕೆಗೆ ತಿರುಗೇಟು ನೀಡಿದ ವಿಜಯೇಂದ್ರ, ಅಧಿಕಾರದ ದರ್ಪ ಅವರಿಗೆ ಈ ರೀತಿ ಮಾತಾಡಿಸಿದೆ. ಜಯನಗರದ ಜನ ಏನು ತಪ್ಪು ಮಾಡಿದ್ದಾರೆ? ಅಲ್ಲಿ ನಮ್ಮ ಶಾಸಕರು ಇದ್ದಾರೆ ಎನ್ನುವ ಕಾರಣಕ್ಕೆ ತಗ್ಗಿ ಬಗ್ಗಿ ನಡೀಬೇಕಾ? ನಾವೇನು ಪ್ರಜಾಪ್ರಭುತ್ವದಲ್ಲಿ ಇದ್ದೀವೋ? ಸರ್ವಾಧಿಕಾರಿ ಆಡಳಿತದಲ್ಲಿ ಇದ್ದೀವೋ? ಶಾಸಕರಿಗಷ್ಟೇ ಅಲ್ಲ ಕ್ಷೇತ್ರದ ಮತದಾರರಿಗೂ ಡಿಕೆಶಿ ಅವಮಾನ ಮಾಡಿದ್ದಾರೆ ಎಂದರು.

# ತನಿಖೆ ನಡೆಸದೇ ಎಫ್ಐಆರ್ ದಾಖಲಿಸಿದ ಲೋಕಾಯುಕ್ತ ಎಸ್‌ಪಿ ವಿರುದ್ಧ ಕಿಡಿ

■ ಲೋಕಾಯುಕ್ತ ಪೊಲೀಸರು ಹೊಸ ಕಾನೂನು ಜಾರಿ ಮಾಡುವಲ್ಲಿ ಸಂಪೂರ್ಣ ವಿಫಲ ■ ಕಾನೂನು ವಿಭಾಗದ ಮುಖ್ಯಸ್ಥರನ್ನು ಪ್ರಾಸಿಕ್ಯೂಷನ್‌ಗೆ ಒಳಪಡಿಸಬೇಕು

• ಉದಯವಾಹಿನಿ, ಬೆಂಗಳೂರು

**ಸೂಕ್ತ ತನಿಖಾ ವಿಧಾನಗಳನ್ನು ಅನುಸರಿಸಿಲ್ಲ**



ಮೈಸೂರಿನ ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತವರ ಕುಟುಂಬದ ವಿರುದ್ಧ ನಡೆಯುತ್ತಿರುವ ತನಿಖೆಯಲ್ಲಿ ಮೈಸೂರು ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿಗಳು ದೇಶದಲ್ಲಿ ಜಾರಿಗೆ ಬಂದಿರುವ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ - ಎನ್.ಬಿ.ಎಸ್.ಎಸ್ ನಡಿ ಸೂಕ್ತ ತನಿಖಾ ವಿಧಾನಗಳನ್ನು ಅನುಸರಿಸಿಲ್ಲ.

ಲೋಕಾಯುಕ್ತ ಪೊಲೀಸರು ಹೊಸ ಕಾನೂನು ಜಾರಿ ಮಾಡುವಲ್ಲಿ ಸಂಪೂರ್ಣವಾಗಿ ವಿಫಲರಾಗಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತ ಮತ್ತು ದಿ ಹೆಲ್ಪಿಂಗ್ ಸಿಟಿಜನ್ ಅಂಡ್ ಪೀಪಲ್ಸ್ ಕೋರ್ಟ್ ನ ಸಂಸ್ಥಾಪಕರಾದ ಎ. ಆಲಂ ಪಾಷ ಆರೋಪಿಸಿದ್ದಾರೆ.

ಈ ಕುರಿತಂತೆ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವಂತ ಅವರು, ಆಡಳಿತ ವ್ಯವಸ್ಥೆಗೆ ಸೂಕ್ತ ರೀತಿಯಲ್ಲಿ ಮಾರ್ಗದರ್ಶನ, ಸಲಹೆ, ಸೂಚನೆಗಳನ್ನು ನೀಡಬೇಕಾದ ಅಡ್ವೋಕೇಟ್ ಜನರಲ್, ಕಾನೂನು ಸಲಹೆಗಾರರು ಸಹ ತನ್ನ ಕರ್ತವ್ಯ ನಿರ್ಹಣೆಯಲ್ಲಿ ವಿಫಲರಾಗಿದ್ದಾರೆ. ಕಾನೂನು ವಿಭಾಗದ ಮುಖ್ಯಸ್ಥರನ್ನು ಪ್ರಾಸಿಕ್ಯೂಷನ್ ಗೆ ಒಳಪಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಈ ಕುರಿತು ಲೋಕಾಯುಕ್ತ ಎಡಿಜಿಪಿ ಅವರಿಗೆ ದೂರು ಸಲ್ಲಿಸಿದ್ದು, ಕಾನೂನು ವೈಫಲ್ಯಕ್ಕೆ ಕಾರಣದಾದವರ ಮೇಲೂ ಕ್ರಮ ತೆಗೆದುಕೊಳ್ಳಬೇಕು ಎಂದು ಮನವಿ ಸಲ್ಲಿಸಿರುವುದಾಗಿ ಹೇಳಿದ್ದಾರೆ. ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, 2023 ದೇಶಾದ್ಯಂತ ಜಾರಿಯಾಗಿದ್ದು, ಮುಖ್ಯಮಂತ್ರಿ ಒಳಗೊಂಡಂತೆ ಪ್ರತಿಯೊಬ್ಬರಿಗೂ ಈ ಕಾನೂನು ಅನ್ವಯವಾಗುತ್ತದೆ. ಜೊತೆಗೆ ಭ್ರಷ್ಟಾಚಾರ ಪ್ರಕರಣದಲ್ಲಿ 14 ದಿನಗಳ ಒಳಗಾಗಿ ಪ್ರಾಥಮಿಕ ತನಿಖೆ ನಡೆಸಬೇಕು ಎಂಬ ನಿಯಮವಿದ್ದು, ಮೈಸೂರು ಲೋಕಾಯುಕ್ತ ಪೊಲೀಸರು ಪ್ರಾಥಮಿಕ ತನಿಖೆಯನ್ನೇ ನಡೆಸುವ ಗೊಡವೆಗೆ ಹೋಗಿಲ್ಲ. ಅವರು ಬಿಎನ್‌ಎನ್‌ಎಸ್ ಕಾನೂನನ್ನು ಸಂಪೂರ್ಣವಾಗಿ ಬದಿಗೆ ಸರಿಸಿದ್ದಾರೆ. ಲೋಕಾಯುಕ್ತ ಎಡಿಜಿಪಿ ಅವರನ್ನು ಭೇಟಿ ಮಾಡಿ ಈ ಎಲ್ಲಾ ಲೋಪಗಳ ಕುರಿತು ಲಿಖಿತವಾಗಿ ದೂರು ನೀಡಲಾಗಿದೆ. ದೇಶದ ಪ್ರತಿಯೊಬ್ಬ ಪೊಲೀಸರು ಬಿಎನ್‌ಎಸ್‌ಎಸ್ ಕಾನೂನಿನ ನಿಯಮಗಳನ್ನು ಅನುಸರಿಸಲೇಬೇಕು ಎಂದು ಪ್ರತಿಪಾದಿಸಿದ್ದಾರೆ.

ಮೈಸೂರು ಲೋಕಾಯುಕ್ತ ಪೊಲೀಸರು ಬಿಎನ್‌ಎಸ್‌ಎಸ್ ಕಾನೂನು ಉಲ್ಲಂಘಿಸಿ ಕೆಟ್ಟ ಸಂಪ್ರದಾಯಕ್ಕೆ ನಾಂದಿ ಹಾಡಿದ್ದು, ಭವಿಷ್ಯದಲ್ಲಿ ಕಾನೂನು ವಿಧಿ ವಿಧಾನಗಳ ಅನುಸರಣೆಯು ಹಾದಿ ತಪ್ಪುವ ಆತಂಕವಿದೆ. ಮುಡಾ ವಶಪಡಿಸಿಕೊಂಡಿರುವ ಕೆಸರೆ ಗ್ರಾಮದ 413 ಸರ್ವೆ ನಂಬರ್ ಪೋಡಿಯಾಗಿಲ್ಲ, ಹಿಸ್ಸಾ ಸಂಖ್ಯೆ ಕೊಡಲಾಗಿದೆಯೇ ಎಂಬೆಲ್ಲಾ ಮಾಹಿತಿ ಕಲೆ ಹಾಕಿ ಪ್ರಾಥಮಿಕ ತನಿಖೆ ಪೂರ್ಣಗೊಳಿಸಬೇಕಾಗಿತ್ತು. ಆದರೆ ಲೋಕಾಯುಕ್ತ ಪೊಲೀಸರು ಇದ್ಯಾವುದನ್ನೂ ಪರಿಗಣನೆಗೆ ತೆಗೆದುಕೊಂಡಿಲ್ಲ. ಇಷ್ಟೆಲ್ಲಾ ಲೋಪಗಳಿಗೆ ಲೋಕಾಯುಕ್ತ ಎಡಿಜಿಪಿ ಅವರೇ ಹೊಣೆಯಾಗಿದ್ದು, ತಪ್ಪಿತಸ್ಥರ ಮೇಲೆ ಆಡಳಿತ ವೈಫಲ್ಯದ ಪ್ರಕರಣ ದಾಖಲಿಸಿ ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

**ಪ್ರಕರಣಗಳು ಎದುರಾದಲ್ಲಿ ಹೇಗೆ ನಿಭಾಯಿಸಬಹುದು ಎನ್ನುವ ಆತಂಕ**

ನೂತನ ಬಿಎನ್‌ಎಸ್‌ಎಸ್ ಕಾನೂನಿನ ಬಗ್ಗೆ ಕನಿಷ್ಟ ತಿಳಿವಳಿಕೆ ಇಲ್ಲದ ರಾಜ್ಯದ ಅಡ್ವೋಕೇಟ್, ಹೆಚ್ಚುವರಿ ಅಡ್ವೋಕೇಟ್ ಜನರಲ್. ಎಸ್.ಪಿ.ಪಿ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರನ್ನು ಪ್ರಾಸಿಕ್ಯೂಷನ್ ಗೆ ಒಳಪಡಿಸಬೇಕು. ಭವಿಷ್ಯದಲ್ಲಿ ಇಂತಹ ಸೂಕ್ಷ್ಮ ಪ್ರಕರಣಗಳು ಎದುರಾದಲ್ಲಿ ಹೇಗೆ ನಿಭಾಯಿಸಬಹುದು ಎನ್ನುವ ಆತಂಕವಿದೆ. ಸರ್ಕಾರದಿಂದ ವೇತನ, ಭತ್ಯ ಪಡೆಯುವ ಕಾನೂನು ವಿಭಾಗ ತನ್ನ ಕರ್ತವ್ಯ ನಿರ್ವಹಣೆಯಲ್ಲಿ ವಿಫಲವಾಗಿದೆ. ಇವರ ವೈಫಲ್ಯದ ವಿರುದ್ಧ ಕಾನೂನು ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ. ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿರುವುದು, ಇದಕ್ಕೆ ಅನುಮತಿ ನೀಡಿದ್ದು, ನ್ಯಾಯಾಲಯ ಮುಖ್ಯಮಂತ್ರಿ ಅವರ ಅರ್ಜಿಯನ್ನು ವಜಾ ಮಾಡಿದ್ದು ಸರಿಯಾಗಿದೆ. ರಾಜ್ಯಪಾಲರು ತನಿಖೆಗೆ ಅನುಮತಿ ಕೊಟ್ಟ ನಂತರ ಪೊಲೀಸರು 14 ದಿನಗಳ ಒಳಗಾಗಿ ಪ್ರಾಥಮಿಕ ತನಿಖೆ ನಡೆಸಿ, ಆ ನಂತರ ಎಫ್.ಐ.ಆರ್ ಹಾಕಬೇಕಿತ್ತು. ಎಲ್ಲಾದಕ್ಕೂ ಮುನ್ನ ಎಫ್ .ಐ.ಆರ್ ಹಾಕಿದ್ದು ತಪ್ಪು ಎಂದು ಆಲಂ ಪಾಷ ಹೇಳಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,947/Gram24ct ₹7,285/Gram22ct ಬೆಳ್ಳಿ: ₹94.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

# ಇದಂ ಶಾಸ್ತ್ರಮಧೀಯಾನೋ..

ಮನುಸ್ಮೃತಿಯ ಪ್ರಥಮಾಧ್ಯಾಯದ ಶ್ಲೋಕ. ಮೂರು ವೇದಗಳನ್ನು, ಧರ್ಮಶಾಸ್ತ್ರವನ್ನು ಓದುವ ಶ್ರೇಷ್ಠ ಆಚರಣೆಯ ಬ್ರಾಹ್ಮಣನು ಮನಸ್ಸು ಮಾತು ದೇಹಗಳಿಂದ ತಪ್ಪೆಸಗಿದರೂ ದೋಷ ಅಂಟದು. ಈತನು ತನ್ನ ಹಿಂದಿನ ಹಾಗೂ ಮುಂದಿನ ಏಳೇಳು ತಲೆಮಾರುಗಳನ್ನು, ಈ ಸಮಗ್ರ ಭೋಮಂಡಲವನ್ನೇ ಪಾವನಗೊಳಿಸುತ್ತಾನೆ. ಆತನು ಒಬ್ಬನೇ ಆಗಿದ್ದರೂ ಈ ಅದ್ಭುತವನ್ನು ಸಾಧಿಸಬಲ್ಲ. ಸ್ವರ್ಗ ಸುಖ ಬೇಕೆನ್ನುವ ಬ್ರಾಹ್ಮಣನು ನಿರಂತರವಾಗಿ ಅಧ್ಯಯನ ಮಾಡಬೇಕು. ಅಧ್ಯಯನವೇ ಸರ್ವಸ್ವ. ಜಾತಿ ಬ್ರಾಹ್ಮಣ್ಯವನ್ನು ಹೊರತುಪಡಿಸಿ ಇಲ್ಲಿನ ಬಹುತೇಕ ಅಭಿಪ್ರಾಯ ಒಪ್ಪುವಂಥದ್ದು. ಅಧ್ಯಯನ ಜ್ಞಾನಕ್ಕೆ ಇಂಥ ಮಹತ್ತ್ವ ಕಟ್ಟುಪಾಡುಗಳನ್ನು ವಿಧಿಸಿದ್ದರಿಂದ, ಏಕೆನ್ನದೇ ಲೌಕಿಕ ಪ್ರಯೋಜನವನ್ನು ಅಷ್ಟಾಗಿ ಮುಖ್ಯವೆಂದು ಪರಿಗಣಿಸದೇ ಏಕಂ ಜನ್ಮ ಏಕಂ ಶಾಸ್ತ್ರಂ = ಒಂದು ಜನ್ಮ ಒಂದು ಶಾಸ್ತ್ರಕ್ಕೆ ಮೀಸಲು ಎಂಬ ನಿಲುವು ತಾಳಿ ತಲೆ ಬೋಳಿಸಿಕೊಂಡು ಉಪ್ಪು ಖಾರ ರುಚಿ ಬಿಟ್ಟು ಗುರುಕುಲದಲ್ಲಿದ್ದು ಕಠಿಣ ಸೇವೆ ಮಾಡಿ ವೇದಶಾಸ್ತ್ರಗಳನ್ನು ಅಧ್ಯಯನ ಮಾಡಿ ಇಂದಿಗೂ ಉಳಿಸಿಕೊಂಡು ಬಂದ ಶ್ರೇಯಸ್ಸು ಬ್ರಾಹ್ಮಣರಿಗೆ ಸಲ್ಲುತ್ತದೆ. ಏಳೇಳು ತಲೆಮಾರು ಪಾವನ ಎಂಬ ಮಾತು ಜ್ಞಾನ ಪ್ರಚೋದಕ. ತಪ್ಪೆಸಗಿದರೂ ದೋಷ ಅಂಟದೆಂಬುದು ತಿಳಿದವನು ತಪ್ಪು ಮಾಡಲಾರ, ಆಕಸ್ಮಿಕವಾಗಿ ಕೈಮೀರಿ ತಪ್ಪೆಸಗಿದರೆ ಚಿಂತಿಸಬೇಕಿಲ್ಲ ಎಂಬ ಧೈರ್ಯ ನೀಡಿಕೆಯ ಮಾತು.

# ಸಮಾಜ ಕಲ್ಯಾಣ ಇಲಾಖೆ ಎಡಿ ರವಿಕುಮಾರ್ ಅಮಾನತು

## ಚಿಕ್ಕೋಡಿ ತಾಲ್ಲೂಕು ಸಹಾಯಕ ನಿರ್ದೇಶಕ ಗ್ರೇಡ್-1 ರವಿಕುಮಾರ್ ಅಮಾನತುಗೊಳಿಸಿ ರಾಜ್ಯ ಸರ್ಕಾರ ಆದೇಶ

• ಉದಯವಾಹಿನಿ, ಬೆಂಗಳೂರು

ಗುತ್ತಿಗೆದಾರರಿಂದ ಲಂಚಕ್ಕೆ ಬೇಡಿಕೆ



ಉದಯವಾಹಿನಿ ಚಿತ್ರ

ಚಿಕ್ಕೋಡಿ ತಾಲ್ಲೂಕಿನ ಗ್ರಾಮವೊಂದರಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಯ ಗುತ್ತಿಗೆ ನೀಡಲು ಲಂಚಕ್ಕೆ ಚಿಕ್ಕೋಡಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್-1 ರವಿಕುಮಾರ್ ಬೇಡಿಕೆ ಇಟ್ಟಿದ್ದರು. ಮುಂಗಡವಾಗಿ ಲಂಚದ ಹಣ ಪಡೆಯುತ್ತಿದ್ದಾಲೇ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದು, ವೀಡಿಯೋ ಕೂಡ ವೈರಲ್ ಆಗಿತ್ತು.ಈ ಹಿನ್ನಲೆಯಲ್ಲಿ ಚಿಕ್ಕೋಡಿ ತಾಲ್ಲೂಕು ಸಹಾಯಕ ನಿರ್ದೇಶಕ ಗ್ರೇಡ್-1 ರವಿಕುಮಾರ್ ಅಮಾನತುಗೊಳಿಸಿ ರಾಜ್ಯ ಸರ್ಕಾರ ಆದೇಶಿಸಿದೆ.

ಈ ಸಂಬಂಧ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ-1 ನಡವಳಿಯನ್ನು ಹೊರಡಿಸಿದ್ದು, ದಿನಾಂಕ: 07.11.2024ರಂದು ಮಾಧ್ಯಮಗಳಲ್ಲಿ ಪ್ರಸಾರಗೊಂಡಿರುವ ದೃಶ್ಯವಳಿಗಳಲ್ಲಿ ರವಿಕುಮಾರ್, ಸಹಾಯಕ ನಿರ್ದೇಶಕರು ಗ್ರೇಡ್-1, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಲೋಕೋಪಯೋಗಿ ಇಲಾಖೆ, ಚಿಕ್ಕೋಡಿ ತಾಲ್ಲೂಕು ಇವರಿಗೆ ವಹಿಸಿರುವ 2020-21 ನೇ ಸಾಲಿನಲ್ಲಿ ಪರಿಶಿಷ್ಟ ತಾಲ್ಲೂಕಿನ ಅಕ್ಕೋಳ ಗ್ರಾಮದಲ್ಲಿ ಕಾಲೋನಿಯಲ್ಲಿ ರೂ. 20.00 ಲಕ್ಷಗಳ ವೆಚ್ಚದಲ್ಲಿ ಸುದಾಯ ಭವನ ನಿರ್ಮಾಣ ಕಾಮಗಾರಿಯ ಜಂಟಿ ಪರಿಶೀಲನಾ ವರದಿಯನ್ನು ನೀಡಲು ಗುತ್ತಿಗೆದಾರರಿಂದ ಲಂಚಕ್ಕೆ ಬೇಡಿಕೆ ಇಟ್ಟು, ಗುತ್ತಿಗೆದಾರರು ರೂ.10,000/- ನೀಡಲಾಗಿ, ರೂ.20,000/- ಕ್ಕೆ ಬೇಡಿಕೆ ಇಟ್ಟು, ಬಾರ್‌ನಲ್ಲಿ ಮಧ್ಯ ಸೇವನೆ ಮಾಡುವಾಗ ಲಂಚದ ಹಣ ಪಡೆಯುತ್ತಿರುವುದು ಹಾಗೂ ಸದರಿ ಕಛೇರಿಯ ಕಿರಣ್, ಕಂಪ್ಯೂಟರ್ ಆಪರೇಟರ್ (ಹೊರ ಸಂಪನ್ಮೂಲ ಸಿಬ್ಬಂದಿ) ಕಛೇರಿ ಕೆಲಸ ಮಾಡಿಕೊಡಲು ರೂ.500/-ಗಳನ್ನು ಕಛೇರಿಯಲ್ಲಿ ಪಡೆಯುತ್ತಿರುವುದು ದೃಶ್ಯವಳಿಗಳಲ್ಲಿ ಕಂಡುಬರುತ್ತದೆ ಎಂದಿದ್ದಾರೆ.

ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಳಗಾವಿ ಜಿಲ್ಲೆ ಇವರ ಪತ್ರದಲ್ಲಿ ರವಿಕುಮಾರ್, ಸಹಾಯಕ ನಿರ್ದೇಶಕರು ಜವಾಬ್ದಾರಿಯುತ ತಾಲ್ಲೂಕು ಗ್ರೇಡ್-1, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಮಟ್ಟದ ಅಧಿಕಾರಿಯಾಗಿ ಈ ರೀತಿ ಬಾರ್ ನಲ್ಲಿ ಮಧ್ಯ ಸೇವನೆ ಮಾಡುವಾಗ ಲಂಚದ ಹಣ ಸ್ವೀಕರಿಸುತ್ತಿರುವುದು ಮೇಲ್ನೋಟಕ್ಕೆ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆಯ ಉಲ್ಲಂಘಿಸುವುದರ ಜೊತೆಗೆ ಸಾರ್ವಜನಿಕರಲ್ಲಿ ಇಲಾಖೆಯ ಮೇಲೆ ಇಟ್ಟ, ವಿಶ್ವಾಸಕ್ಕೆ ದಕ್ಕೆ ತಂದಿರುವುದರಿಂದ ಸದರಿ ಅಧಿಕಾರಿಯ ಮೇಲೆ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರನ್ನು ಕೋರಿರುತ್ತಾರೆ ಎಂದು ತಿಳಿಸಿದ್ದಾರೆ.

**ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಂತೆ ರವಿಕುಮಾರ್, ಸಹಾಯಕ ನಿರ್ದೇಶಕರು ಗ್ರೇಡ್-1, ಸಮಾಜ ಕಲ್ಯಾಣ ಇಲಾಖೆ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ಗಂಭೀರ ಸ್ವರೂಪದ ಕರ್ತವ್ಯ ಲೋಪದ ಕಾರಣಕ್ಕಾಗಿ ಇಲಾಖೆ ವಿಚಾರಣೆಯನ್ನು ಕಾಯ್ದಿರಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-10(1)(ಡಿ) ರನ್ವಯ ಪುದತ್ತವಾದ ಸೇವೆಯಿಂದ ಅಧಿಕಾರವನ್ನು ಚಲಾಯಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತುಗೊಳಿಸಿ ಆದೇಶಿಸಿದ್ದಾರೆ.**


ದೃಶ್ಯ ಮಾಧ್ಯಮದ ಸದರಿ ಅಂಶಗಳನ್ನು ಹಾಗೂ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರದಲ್ಲಿನ ಅಂಶಗಳನ್ನು ಪರಿಶೀಲಿಸಲಾಗಿ ರವಿಕುಮಾರ್ ಇವರು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ, 1988 ರನ್ವಯ ಹಾಗೂ ಕರ್ನಾಟಕ ನಾಗರಿಕ ಸೇವೆಗಳ (ನಡತೆ) ನಿಯಮಗಳು, 2021ರ ನಿಯಮ 3(1)ನ್ನು ಉಲ್ಲಂಘಿಸಿರುವುದು ಸ್ಪಷ್ಟವಾಗಿ ಕಂಡು ಬರುತ್ತದೆ ಎಂದು ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ಇವರ ಮೇಲಿನ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಕರ್ನಾಟಕ ನಾಗರೀಕ ಸೇವಾ (ವಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು ನಿಯಮ-10(1)ರನ್ವಯ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ 19570 ಸದರಿರವರನ್ನು ಅಮಾನತ್ತುಗೊಳಿಸಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದ್ದಾರೆ.

**ಸದರಿ ಅಧಿಕಾರಿಯು ಅಮಾನತ್ತಿನ ಅವಧಿಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ-98ರನ್ವಯ ನಿಯಮ-98ರನ್ವಯ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. ಸದರಿ ಅಧಿಕಾರಿಯು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮತಿಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದಲ್ಲ ಎಂದು ತಿಳಿಸಿದ್ದಾರೆ.**

## ಖ್ಯಾತ ನಟ ಹರೀಶ್ ರಾಯ್ ಆರೋಗ್ಯದಲ್ಲಿ ಏರುಪೇರು: ಆಸ್ಪತ್ರೆಗೆ ದಾಖಲು

• ಉದಯವಾಹಿನಿ, ಬೆಂಗಳೂರು



ಕನ್ನಡ ಪ್ರಸಿದ್ಧ ಚಲನಚಿತ್ರ, ಕೆಜಿಎಫ್‌ನಲ್ಲಿ ಚಾಚಾ ಎಂಬುದಾಗಿಯೇ ಗುರುತಿಸಿಕೊಂಡು, ನಟಿಸಿ, ಕೀರ್ತಿ ಗಳಿಸಿದ್ದಂತ ನಟ ಹರೀಶ್ ರಾಯ್. ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಾಗಿರುವುದಾಗಿ ತಿಳಿದು ಬಂದಿದೆ. ಸ್ಯಾಂಡಲ್ ವುಡ್ ಖ್ಯಾತ ಪೋಷಕ ನಟ ಹರೀಶ್ ರಾಯ್ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಕೂಡಲೇ ಅವರನ್ನು ಸಮೀಪದ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲು ಮಾಡಲಾಗಿದೆ. ಕ್ಯಾನ್ಸರ್ ನಿಂದ ಬಳಲುತ್ತಿರುವಂತ ಅವರ ಆರೋಗ್ಯದಲ್ಲಿ ಏರುಪೇರಾದ ಕಾರಣ ಆಸ್ಪತ್ರೆಗೆ ದಾಖಲಿಸಲಾಗಿದೆ. ಥೈರಾಯ್ಡ್ ಕ್ಯಾನ್ಸರ್ ಗೆ ಈಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ವಕ್ಫ್ ಆಸ್ತಿ ಒತ್ತುವರಿ ಮಾಡಿರುವ ಕಾಂಗ್ರೆಸ್ ನಾಯಕರಿಗೆ ಯಾಕೆ ನೋಟಿಸ್ ನೀಡಿಲ್ಲ?

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ವಕ್ಫ್ ಆಸ್ತಿ ಒತ್ತುವರಿ ಮಾಡಿಕೊಂಡಿರುವಂತ ಬಡವರಿಗೆ ನೋಟಿಸ್ ನೀಡ್ತೀರಿ. ಅದೇ ಸಚಿವ ಜಮೀರ್ ಅಹ್ಮದ್ ಖಾನ್, ಕಾಂಗ್ರೆಸ್ ಪಕ್ಷದ ಪ್ರಭಾವಿ ಶಾಸಕರು, ಪರಿಷತ್ ಸದಸ್ಯರು, ಸಂಸದರಿಗೆ ಯಾಕೆ ನೋಟಿಸ್ ನೀಡಿಲ್ಲ ಎಂಬುದಾಗಿ ಸಾಮಾಜಿಕ ಕಾರ್ಯಕರ್ತ ಆಲಂ ಪಾಷಾ ಪ್ರಶ್ನಿಸಿದ್ದಾರೆ.

ಸಾಮಾಜಿಕ ಕಾರ್ಯಕರ್ತ ಆಲಂ ಪಾಷಾ ಪ್ರಶ್ನೆ

ಈ ಬಗ್ಗೆ ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದಂತ ಅವರು, ಕಾಂಗ್ರೆಸ್ ನಾಯಕರಾದಂತ ಮಲ್ಲಿಕಾರ್ಜುನ ಖರ್ಗೆ, ಧರ್ಮಸಿಂಗ್, ಸಿ.ಕೆ ಜಾಫರ್ ಶರೀಫ್, ಕನೀಝ್ ಫಾತಿಮಾ ಸೇರಿದಂತೆ ಇನ್ನಿತರರ ವಿರುದ್ಧವೂ ವಕ್ಫ್ ಆಸ್ತಿ ಒತ್ತುವರಿಯ ಆರೋಪಗಳಿದ್ದಾವೆ. ಅವರಿಗೆ ಯಾಕೆ ರಾಜ್ಯ ಸರ್ಕಾರ ನೋಟಿಸ್ ನೀಡಿಲ್ಲ ಎಂದು ಕೇಳಿದರು.

ಬೆಂಗಳೂರಿನ ಸ್ಯಾಂಕಿ ರಸ್ತೆಯಲ್ಲಿರುವಂತ ವಿಂಡ್ಸರ್ ಮ್ಯಾನರ್ ಹೋಟೆಲ್ ವಕ್ಫ್ ಆಸ್ತಿಯಾಗಿದ್ದು, ಅದನ್ನು ರಾಜ್ಯ ಸರ್ಕಾರ ವಾಪಾಸು ಪಡೆದುಕೊಳ್ಳುವಲ್ಲಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ವಕ್ಫ್ ಮಂಡಳಿಗೆ ಕೊಡಿಸುವಲ್ಲಿ ವಿಫಲವಾಗಿದೆ ಎಂಬುದಾಗಿ ಕಿಡಿಕಾರಿದರು. ಯಲಹಂಕದ ವಡೆಪುರ ಗ್ರಾಮದ ವಿವಿಧ ಸರ್ವೆ ನಂಬರ್ ಗಳಲ್ಲಿ ವಕ್ಫ್ ಭೂಮಿಯನ್ನು ವಕ್ಫ್ ಬೋರ್ಡ್ ತನ್ನ ಸುಪರ್ದಿಗೆ ತಗೆದುಕೊಂಡಿಲ್ಲ. ಅದನ್ನು



ಶಾಸಕ ಎನ್.ಎ.ಹ್ಯಾರಿಸ್ ತಮ್ಮ ಕುಟುಂಬದ ಸದಸ್ಯರ ಹೆಸರಿಗೆ ನೋಂದಣಿ ಮಾಡಿಸಿಕೊಂಡು, ಅಭಿವೃದ್ಧಿ ಪಡಿಸಿದ್ದಾರೆ ಎಂಬುದಾಗಿ ಗಂಭೀರ ಆರೋಪ ಮಾಡಿದರು.

ರಾಜ್ಯದಲ್ಲಿ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ 1973ರಲ್ಲಿನ ಸರ್ಕಾರಿ ಆದೇಶವನ್ನು ಮುಂದಿಟ್ಟುಕೊಂಡು ಬಿಜೆಪಿ ನಾಯಕರು ಹೋರಾಟ ಮಾಡುತ್ತಿದ್ದಾರೆ. ಆದರೇ ಇದೇ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಆ ಸರ್ಕಾರಿ ಆದೇಶವನ್ನು ಯಾಕೆ ಹಿಂಪಡೆಯಲಿಲ್ಲ ಎಂದು ಕೇಳಿದರು.ವಕ್ಫ್ ಆಸ್ತಿಗಳನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಕಾಂಗ್ರೆಸ್ ನಾಯಕರ ವಿರುದ್ಧವೂ ಸರ್ಕಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂಬುದಾಗಿ ಇದೇ ಸಂದರ್ಭದಲ್ಲಿ ಆಗ್ರಹಿಸಿದರು.

## ಬಿಬಿಎಂಪಿಗೆ ಸಂಚಾರ ಪೊಲೀಸರ ಅನುಮೋದನೆ

• ಉದಯವಾಹಿನಿ, ಬೆಂಗಳೂರು

ಸಂಚಾರ ಪೊಲೀಸ್, ಬಿಡಬ್ಲ್ಯೂಎಸ್‌ಎಸ್ಬಿ, ಕೆಪಿಟಿಸಿಎಲ್ ಮತ್ತು ಇತರ ಸರ್ಕಾರಿ ಸಂಸ್ಥೆಗಳಿಂದ ಅನುಮೋದನೆ ಪಡೆದ ನಂತರ ಬಿಬಿಎಂಪಿ 18 ರಸ್ತೆಗಳನ್ನು ವೈಟ್ ಟಾಪಿಂಗ್ (ಕಾಂಕ್ರೀಟ್) ಮಾಡಲು ಸಜ್ಜಾಗಿದೆ.

ವೈಟ್ ಟಾಪಿಂಗ್‌ಗಾಗಿ ಸಂಚಾರ ಪೊಲೀಸರು ಒಟ್ಟು 48 ರಸ್ತೆಗಳನ್ನು ತೆರವುಗೊಳಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಕಳೆದ ವರ್ಷ ಬೆಂಗಳೂರಿನ 1,600 ಕೋಟಿ ರೂ.ಗಳ ವೆಚ್ಚದಲ್ಲಿ ನಗರದ 138 ಕಿ.ಮೀ ರಸ್ತೆಗಳನ್ನು ವೈಟ್ ಟಾಪ್ ಮಾಡಲು ಐದು ಖಾಸಗಿ ಏಜೆನ್ಸಿಗಳನ್ನು ನೇಮಿಸಲಾಗಿತ್ತು.

ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಮಾತನಾಡಿ, ಸಂಚಾರ ಪೊಲೀಸರು 48 ರಸ್ತೆಗಳಿಗೆ ಅನುಮೋದನೆ ನೀಡಿದ ನಂತರ, ನಾಗರಿಕ ಸಂಸ್ಥೆ ಬಿಡಬ್ಲ್ಯೂಎಸ್‌ಎಸ್ಬಿಗೆ ಪಟ್ಟಿಯನ್ನು ಸಲ್ಲಿಸಿದೆ.

ಬಿಡಬ್ಲ್ಯೂಎಸ್‌ಎಸ್ಬಿ 18 ರಸ್ತೆಗಳಲ್ಲಿ ಕೆಲಸವನ್ನು





ಉದಯವಾಹಿನಿ ಚಿತ್ರ

ಪ್ರಾರಂಭಿಸುತ್ತಿರುವುದರಿಂದ, ನಾವು ಮೊದಲು ಅವುಗಳನ್ನು ವೈಟ್ ಟಾಪಿಂಗ್ ಮಾಡಲು ಮುಂದುವರಿಯುತ್ತೇವೆ. ಹೊಸದಾಗಿ ಹಾಕಲಾದ ರಸ್ತೆಗಳನ್ನು ಭವಿಷ್ಯದಲ್ಲಿ ಅಗೆಯುವುದನ್ನು ತಡೆಯಲು ನಾವು ಇತರ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುತ್ತೇವೆ ಎಂದು ಅವರು ಹೇಳಿದರು.

ಪರ್ಯಾಯ ಮಾರ್ಗಗಳನ್ನು ದುರಸ್ತಿ ಮಾಡುವ ಮೂಲಕ ಸಾರ್ವಜನಿಕರಿಗೆ ಅನಾನುಕೂಲತೆಯನ್ನು ಕಡಿಮೆ ಮಾಡಲು ಬಿಬಿಎಂಪಿ ಸಂಚಾರ ಪೊಲೀಸರೊಂದಿಗೆ ನಿಕಟವಾಗಿ ಕೆಲಸ ಮಾಡುತ್ತದೆ ಎಂದು ಅವರು ಹೇಳಿದರು.

## ನೆಹರು ಜನ್ಮದಿನಾಚರಣೆ ಹಿನ್ನೆಲೆ ಮಕ್ಕಳಿಗೆ ವಿವಿಧ ಚಟುವಟಿಕೆಗಳ ಆಯೋಜನೆ!

• ಉದಯವಾಹಿನಿ, ಬೆಂಗಳೂರು


ನವೆಂಬರ್ 14 ಜವಾಹರ್ ಲಾಲ್ ನೆಹರು ಜನ್ಮ ದಿನದ ಅಂಗವಾಗಿ ಮಕ್ಕಳ ದಿನಾಚರಣೆ ನವೆಂಬರ್ 20 ರಂದು 'ಅಂತಾರಾಷ್ಟ್ರೀಯ ಮಕ್ಕಳ ದಿನಾಚರಣೆ' ಅಂಗವಾಗಿ ಅರಿವು ಕೇಂದ್ರಗಳಲ್ಲಿ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲು ಸೂಚಿಸಲಾಗಿದೆ. ಗ್ರಾಮೀಣ ಮಕ್ಕಳನ್ನು ಓದುವುದರಲ್ಲಿ ಮತ್ತು ಕಲಿಕೆಯಲ್ಲಿ ತೊಡಗಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಆರಂಭಿಸಿರುವ 'ಓದುವ ಬೆಳಕು' ಕಾರ್ಯಕ್ರಮದಡಿ ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ ಹಲವಾರು ಅಭಿಯಾನಗಳ ಮೂಲಕ ಪ್ರತಿ ತಿಂಗಳು ಉಪಯುಕ್ತ ಚಟುವಟಿಕೆಯನ್ನು ಆಯೋಜಿಸಲಾಗಿದೆ. ಮಕ್ಕಳ ಸೃಜನಶೀಲತೆ ಮತ್ತು ಗ್ರಹಿಸುವಿಕೆ ಸಾಮರ್ಥ್ಯವನ್ನು ವೃದ್ಧಿಸಲು ಈ ತಿಂಗಳು ಕಡಲತೀರದ ದೃಶ್ಯ, ಮಾರುಕಟ್ಟೆ, ಜಾತ್ರೆ, ಆಟದ ಮೈದಾನ ಮತ್ತು ಮಕ್ಕಳು ಆನಂದಿಸುವ ಇತರ ಸ್ಥಳಗಳಂತಹ ವರ್ಣರಂಜಿತ ಚಿತ್ರಗಳನ್ನು ರಚಿಸಿ, ವಿವರಿಸಲು ಮಕ್ಕಳಿಗೆ ಸೂಚಿಸಲಾಗಿದೆ.ಮಕ್ಕಳು ಇಂತಹ ಚಿತ್ರಗಳ ಬಗ್ಗೆ ತಮ್ಮ ಸ್ನೇಹಿತರಿಗೆ ವಿವರಿಸಲು ಅಥವಾ ಚರ್ಚೆ ನಡೆಸಲು ಹಾಗೂ ಈ ವಸ್ತುವನ್ನು ಇರಿಸಿಕೊಂಡು ಕಥೆಯನ್ನು ರಚಿಸಲು ಉತ್ತೇಜನ ನೀಡಲಾಗುವುದು.

## ಗ್ಯಾರಂಟಿ ಯೋಜನೆಗಳ ಬಗ್ಗೆ ಶ್ವೇತಪತ್ರ ಹೊರಡಿಸಲಿ: ಕೇಂದ್ರ ಸಚಿವ ಜೋಶಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ನಾಯಕರು ಅಷ್ಟು ಸತ್ಯವಂತರಾಗಿದ್ದರೆ ಗ್ಯಾರಂಟಿ ಯೋಜನೆಗಳ ಬಗ್ಗೆ ರಾಜ್ಯ ಸರ್ಕಾರ ಶ್ವೇತ ಪತ್ರ ಹೊರಡಿಸಲಿ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆಗ್ರಹಿಸಿದ್ದಾರೆ. ಸಂಡೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಪ್ರಹ್ಲಾದ್ ಜೋಶಿ, ರಾಜ್ಯ ಸರ್ಕಾರದ್ದು ಎಲ್ಲಾ ಬೋಗಸ್ ಗ್ಯಾರೆಂಟಿಗಳು.ಈ ಸರ್ಕಾರ ಒಂದೆಡೆ ಕೊಟ್ಟು, ಮತ್ತೊಂದಲ್ಲಿ ಅದರ ಹತ್ತರಷ್ಟು ಕಿತ್ತುಕೊಳ್ಳುತ್ತಿದೆ. ಪೆಟ್ರೋಲ್, ಡೀಸೆಲ್, ಬಸ್ ಪ್ರಯಾಣ ದರ, ವಿದ್ಯುತ್ ದರ, ಹಾಲಿನ ದರ, ಮುದ್ರಾಂಕ ಶುಲ್ಕ, ನೋಂದಣಿ ಶುಲ್ಕ, ರೈತರ ಪಹಣಿ ಶುಲ್ಕ ಹೀಗೆ ಎಲ್ಲದರಲ್ಲೂ ಬೆಲೆ ಏರಿಕೆ ಹೊರೆ ಹೊರಿಸಿದೆ ಎಂದು ಕಿಡಿಕಾರಿದರು.ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಎಷ್ಟು ಜನರಿಗೆ ತಲುಪಿವೆ? ಅದರ ಆದಾಯದ ಮೂಲ, ವೆಚ್ಚ ಸಮಗ್ರ ಮಾಹಿತಿಯುಳ್ಳ ಶ್ವೇತ ಪತ್ರ ಹೊರಡಿಸಲಿ ಎಂದರು.

ಗೃಹಲಕ್ಷ್ಮಿ ಹಣ ಎಷ್ಟು ಜನರಿಗೆ ತಲುಪಿದೆ? ಇದರಲ್ಲಿ ತಾರತಮ್ಯ ಮಾಡಲಾಗುತ್ತಿದೆ. ಶಕ್ತಿ ಯೋಜನೆ



ಕೊಟ್ಟರೆ ಪೆಟ್ರೋಲ್, ಡೀಸೆಲ್, ಪ್ರಯಾಣ ದರ ಹೆಚ್ಚಿಸಿದ್ದಾರೆ. ಫ್ರೀ ವಿದ್ಯುತ್ ಘೋಷಿಸಿದಂತೆ ಇಲ್ಲ. ಅಲ್ಲದೇ, 3 ರೂ. ಯುನಿಟ್ ಇದ್ದ ವಿದ್ಯುತ್ ಶುಲ್ಕ ಈಗ 7.50 ರೂ.ಗೆ ಹೆಚ್ಚಿಸಿದ್ದಾರೆ. ಯುವನಿಧಿ ಒಬ್ಬರಿಗೂ ಇಲ್ಲ, ಹತ್ತರಲ್ಲೊಬ್ಬರಿಗೂ ತಲುಪಿಲ್ಲ. 2023-24ರ ಎಷ್ಟು ಪದವೀಧರರಿಗೆ ಯುವ ನಿಧಿ ಕೊಟ್ಟಿದ್ದೀರಿ? ಎಂದು ಪ್ರಶ್ನಿಸಿದರು.

**ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ಒಂದೂವರೆ ವರ್ಷದಲ್ಲಿ 70-80 ಸಾವಿರ ಕೋಟಿ ರೂಪಾಯಿ ಸಾಲದ ಹೊರೆ ಹೊತ್ತಿದೆ. ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ಮೂಲಕ ಅದನ್ನು ಸರಿದೂಗಿಸಲು ಹೆಣಗಾಡುತ್ತಿದೆ ಎಂದು ಆರೋಪಿಸಿದರು.17 ಬಾರಿ ಬಜೆಟ್ ಮಂಡಿಸಿದ್ದಾಗಿ ಹೇಳಿಕೊಳ್ಳುವ ಸಿಎಂ ದೇಶದ ಆರ್ಥಿಕತೆ ಬಗ್ಗೆ ಹುಂಬತನದಿಂದ ಮಾತನಾಡುತ್ತಾರೆ ಎಂದು ಟೀಕಿಸಿದರು. ಜಗತ್ತಿನಲ್ಲೇ ಭಾರತದ ಆರ್ಥಿಕತೆ ಅತ್ಯಂತ ಸುಸ್ಥಿರವಾಗಿದೆ. ಕೋವಿಡ್ ಬಳಿಕ ಎಲ್ಲಾ ದೇಶಗಳು ಆರ್ಥಿಕ ಜರ್ಝರಿತ ಕಂಡರೆ ಭಾರತ ಶಕ್ತಿಶಾಲಿ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದರು.**

## ಕಾಣೆಯಾಗಿದ್ದ ಎರಡೂವರೆ ವರ್ಷದ ಮಗು ಮಹಿಳೆ ಜೊತೆಗೆ ಪತ್ತೆ!

• ಉದಯವಾಹಿನಿ, ಬೆಂಗಳೂರು


ಬೆಂಗಳೂರಿನಲ್ಲಿ ಕಾಣೆಯಾಗಿದ್ದ ಎರಡೂವರೆ ವರ್ಷದ ಮಗು ಪತ್ತೆಯಾಗಿದೆ. ಮಗು ನವ್ಯಾ ಮಿಸ್ಸಿಂಗ್ ಪ್ರಕರಣ ಸುಖಾಂತ್ಯಗೊಂಡಿದೆ ಬೆಂಗಳೂರಿನ ವೈಯಾಲಿಕಾವಲ್ ನ ಪಾರ್ಕ್‌ನಲ್ಲಿ ಮಹಿಳೆಯ ಜೊತೆಗೆ ಎರಡೂ ವರ್ಷದ ಮುಗ ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಮಗು ಪತ್ತೆಯಾದ ಬಳಿಕ ಪೋಷಕರು ಆತಂಕಗೊಂಡಿದ್ದರು. ಇದೀಗ ಎರಡೂವರೆ ವರ್ಷದ ಮಗು ನವ್ಯಾ ಮಿಸ್ಸಿಂಗ್ ಪ್ರಕರಣ ಸುಖಾಂತ್ಯಗೊಂಡಿದೆ.ವೈಯಾಲಿಕಾವಲ್ ನ ದೇವಯ್ಯ ಪಾರ್ಕ್ ಬಳಿ ಮಗು ನವ್ಯಾ ಪತ್ತೆಯಾಗಿದೆ.

## ಮುಡಾ ಸಂಕಷ್ಟ: ಇಡಿಯಿಂದ ನೋಟಿಸ್ ಸಾಧ್ಯತೆ!

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ-ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿನ್ನೆಯಷ್ಟೇ ಲೋಕಾಯುಕ್ತ ತನಿಖೆ ಎದುರಿಸಿದ್ದು, ಇದೀಗ ಇಡಿ ಆತಂಕ ಎದುರಾಗಿದೆ.

ಲೋಕಾಯುಕ್ತ ವಿಚಾರಣೆ ಬೆನ್ನಲ್ಲೇ ಇಡಿ ಅಧಿಕಾರಿಗಳು ನೋಟಿಸ್ ನೀಡಿ ಅವರನ್ನು ವಿಚಾರಣೆಗೆ ಕರೆಸುವ ಸಾಧ್ಯತೆ ಇದೆ ಎನ್ನಲಾಗಿದೆ. ಇಡಿ ಮುಡಾ ಅಧಿಕಾರಿ, ತಾಲ್ಲೂಕು ಕಚೇರಿ ಮೇಲೆ ದಾಳಿ ನಡೆಸಿದ ಇಡಿ ಅಧಿಕಾರಿಗಳು ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದುಕೊಂಡಿದ್ದರು. ಈ ಹಿನ್ನೆಲೆ ಪ್ರಕರಣದ ಬಗ್ಗೆ ಹೆಚ್ಚಿನ ಮಾಹಿತಿ ಕಲೆಹಾಕಲು ಸಿಎಂ ಸಿದ್ದರಾಮಯ್ಯಗೆ ಇಡಿ ನೋಟಿಸ್ ನೀಡುವ ಸಾಧ್ಯತೆಯಿದೆ ಎನ್ನಲಾಗಿದೆ. ಮುಡಾ ಹಗರಣ



ಸಂಬಂಧ ಸಿಎಂ ಸಿದ್ದರಾಮಯ್ಯ ಅವರನ್ನು ಸಾಮಾನ್ಯರಂತೆ ಲೋಕಾಯುಕ್ತ ಎಸ್ ಪಿ ಉದೇಶ್ ಅವರು ವಿಚಾರಣೆ ನಡೆಸಿದ್ದು, ಲೋಕಾಯುಕ್ತ ವಿಚಾರಣೆ ಬಳಿಕ ಸಿಎಂ ಸಿದ್ದರಾಂಯ್ಯಗೆ ಮತ್ತೊಂದು ನೋಟಿಸ್ ನೀಡಲಾಗಿದ್ದು, ವಿಚಾರಣೆಗೆ ಕರೆದಾಗ ಮತ್ತೆ ಬರಬೇಕು ಎಂದು ಎಸ್ ಪಿ ಉದೇಶ್ ಅವರು ಸಿಎಂ ಸಿದ್ದರಾಮಯ್ಯಗೆ ನೋಟಿಸ್ ನೀಡಿದ್ದಾರೆ.

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಎ1 ಆರೋಪಿಯಾಗಿರುವ ಸಿಎಂ ಸಿದ್ದರಾಮಯ್ಯ ಅವರಿಗೆ ಮೈಸೂರು ಲೋಕಾಯುಕ್ತ ಅಧಿಕಾರಿಗಳು ನೋಟಿಸ್ ಜಾರಿ ಮಾಡಿದ್ದು, ನವೆಂಬರ್ 6ರಂದು ಬೆಳಿಗ್ಗೆ 10 ಗಂಟೆಗೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದರು.

ಈಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಲೋಕಾಯುಕ್ತ ವಿಚಾರಣೆಗೆ ಹಾಜರಾಗಿದ್ದರು. ನಿನ್ನೆ ವಿಚಾರಣೆಗೆ ಸಿಎಂ ಸಿದ್ದರಾಮಯ್ಯ ಹಾಜರಾಗಿದ್ದರು.

## ಸರ್ಕಾರಿ ಕಚೇರಿಗಳಲ್ಲಿ ಧೂಮಪಾನ, ತಂಬಾಕು ಸೇವಿಸಿದರೆ ಶಿಸ್ತು ಕ್ರಮ

• ಉದಯವಾಹಿನಿ, ಬೆಂಗಳೂರು

ಸಾಮಾನ್ಯವಾಗಿ ಸರ್ಕಾರಿ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳು ಆಗಾಗ ಬಿಡುವು ಮಾಡಿಕೊಂಡು ಚಹಾ ಹಾಗೂ ಸಿಗರೇಟ್, ತಂಬಾಕು ಉತ್ಪನ್ನಗಳ ಸೇವಿಸಿ ಬರುತ್ತಾರೆ.

ಇದೀಗ ರಾಜ್ಯ ಸರ್ಕಾರ ಅದಕ್ಕೆಲ್ಲ ಬ್ರೇಕ್ ಹಾಕಿದ್ದು, ಸರ್ಕಾರಿ ಕಚೇರಿ ಆವರಣದಲ್ಲಿ ಸಿಗರೇಟು ತಂಬಾಕು ಉತ್ಪನ್ನಗಳನ್ನು ಸೇವಿಸಿದರೆ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರ ಮಹತ್ವದ ಆದೇಶ

ಹೌದು ಸಿಬ್ಬಂದಿ ಹಾಗೂ ಆಡಳಿತ ಸುಧಾರಣೆ ಇಲಾಖೆ ಈ ಸಂಬಂಧ ಆದೇಶ ಹೊರಡಿಸಿದೆ. ಯಾವುದೇ ಸರ್ಕಾರಿ ನೌಕರನು ಸರ್ಕಾರಿ ಕಚೇರಿಗಳಲ್ಲಿ ಹಾಗೂ ಕಚೇರಿ ಆವರಣದಲ್ಲಿ ಧೂಮಪಾನ ಸೇರಿದಂತೆ ಯಾವುದೇ ತಂಬಾಕು ಉತ್ಪನ್ನಗಳ ಸೇವನೆ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.



ಈ ಸಂಬಂಧ ಎಚ್ಚರಿಕೆಯ ಫಲಕವನ್ನು ಕಚೇರಿಯ ಸೂಕ್ತ ಸ್ಥಳಗಳಲ್ಲಿ ಪ್ರದರ್ಶಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021ರ ನಿಯಮ-31ರಲ್ಲಿ ಸಾರ್ವಜನಿಕ ಸ್ಥಳದಲ್ಲಿ ಯಾವುದೇ ಮಾದಕ ಪಾನೀಯ ಅಥವಾ ಮಾದಕ ವಸ್ತುವನ್ನು ಸೇವಿಸುವುದನ್ನು ಕೂಡ ನಿಷೇಧಿಸಲಾಗಿದೆ. ಶಾಸನತ್ಮಾಕ ಎಚ್ಚರಿಕೆಗಳ ಹೊರತಾಗಿಯೂ ಸರ್ಕಾರಿ ಕಚೇರಿಗಳಲ್ಲಿ ಹಾಗೂ ಕಚೇರಿಯ ಆವರಣದಲ್ಲಿ ತಂಬಾಕು ಉತ್ಪನ್ನಗಳ ಸೇವನೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಸಿಬ್ಬಂದಿಯ ಆರೋಗ್ಯದ ಹಿತದೃಷ್ಟಿಯಿಂದ ಹಾಗೂ ಪರೋಕ್ಷ ಧೂಮಪಾನದಿಂದ ಸಾರ್ವಜನಿಕರನ್ನು ಹಾಗೂ ಸರ್ಕಾರಿ ಸಿಬ್ಬಂದಿಯನ್ನು ರಕ್ಷಿಸುವ ಉದ್ದೇಶದಿಂದ ಯಾವುದೇ ಸರ್ಕಾರಿ ನೌಕರನು ಸರ್ಕಾರಿ ಕಚೇರಿಗಳಲ್ಲಿ ಹಾಗೂ ಕಚೇರಿ ಆವರಣದಲ್ಲಿ ಧೂಮಪಾನ ಸೇರಿದಂತೆ ಯಾವುದೇ ತಂಬಾಕು ಉತ್ಪನ್ನಗಳ ಸೇವನೆ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಈ ಸಂಬಂಧ ಎಚ್ಚರಿಕೆಯ ಫಲಕವನ್ನು ಕಚೇರಿಯ ಸೂಕ್ತ ಸ್ಥಳಗಳಲ್ಲಿ ಪ್ರದರ್ಶಿಸತಕ್ಕದ್ದು ಎಂದು ಸೂಚಿಸಲಾಗಿದೆ.

## ಬಂಗಾಳ ಕೊಲ್ಲಿಯಲ್ಲಿ ಸುಳಿಗಾಳಿ ಎಫೆಕ್ಟ್ ರಾಜ್ಯದಲ್ಲಿ ಮತ್ತೆ 2 ದಿನ ಭಾರೀ ಮಳೆ!

• ಉದಯವಾಹಿನಿ, ಬೆಂಗಳೂರು

ಬಂಗಾಳ ಕೊಲ್ಲಿಯಲ್ಲಿ ಮೇಲ್ಮೈ ಸುಳಿಗಾಳಿಯ ಪರಿಣಾಮ ರಾಜ್ಯದ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಎರಡು ದಿನ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಸೇರಿದಂತೆ ದಕ್ಷಿಣ ಒಳನಾಡಿನಲ್ಲಿ ಕಳೆದ ಎರಡು ದಿನಗಳಿಂದ ಮೋಡ ಕವಿದ ವಾತಾವರಣ ಜೊತೆಗೆ ಅಲ್ಲಲ್ಲಿ ಸಾಧಾರಣ ಮಳೆಯಾಗಿದೆ.ಈ ಪ್ರದೇಶಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಹಾಸನ, ಚಿಕ್ಕಮಗಳೂರು, ಕೊಡಗು, ಮಂಡ್ಯ, ಕೋಲಾರ, ರಾಮನಗರ ಹಾಗೂ ಮೈಸೂರು ಜಿಲ್ಲೆಗಳಲ್ಲಿ ಎರಡು ದಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

## ವಿಧಾನಸೌಧದ ಗಾರ್ಡನ್‌ನಲ್ಲಿ ಬಿಯರ್ ಬಾಟಲ್‌ಗಳು ಪತ್ತೆ!

• ಉದಯವಾಹಿನಿ, ಬೆಂಗಳೂರು

ವಿಧಾನಸೌಧದ ಆವರಣದಲ್ಲಿರುವ ಗಾರ್ಡನ್ ನಲ್ಲಿಯೇ ಬಿಯರ್ ಬಾಟಲ್‌ಗಳು ಪತ್ತೆಯಾಗಿದ್ದು, ಭದ್ರತಾ ವೈಫಲ್ಯಕ್ಕೆ ಸಾಕ್ಷಿಯಾಗಿದೆ.ರಾಜ್ಯ ಸರ್ಕಾರ ನಿನ್ನೆಯಷ್ಟೇ ಸರ್ಕಾರಿ ಕಚೇರಿ ಆವರಣ, ಸುತ್ತಮುತ್ತ ಯಾವುದೇ ಮಾದಕ ವಸ್ತುಗಳು, ಮದ್ಯ ಕೊಂಡೊಯ್ಯಬಾರದು ಎಂದು ಆದೇಶ ಹೊರಡಿಸಿದ್ದ ಒಂದು ದಿನದ ಅಂತರದಲ್ಲೇ ರಾಜ್ಯದ ಶಕ್ತಿಸೌಧ ವಿಧಾನಸೌಧದ ಗಾರ್ಡನ್ ನಲ್ಲಿಯೇ ಬಿಯರ್ ಬಾಟಲ್‌ಗಳು ಪತ್ತೆಯಾಗಿವೆ. ಇದು ಭದ್ರತಾ ವೈಫಲ್ಯವೋ ಅಥವಾ ದುರುದ್ದೇಶಪೂರ್ವಕವೋ ಎಂಬುದು ಇನ್ನಷ್ಟ ತಿಳಿಯಬೇಕಿದೆ. ಯಾರೋ ಪೊಲೀಸರು ಹಾಗೂ ಭದ್ರತಾ ಸಿಬ್ಬಂದಿಗಳ ಕಣ್ತಪ್ಪಿಸಿ ಬಿಯರ್ ತಂದು ಸೇವಿಸಿ, ಬಾಟಲ್‌ಗಳನ್ನು ಎಸೆದು ಹೋಗಿರುವ ಶಂಕೆ ವ್ಯಕ್ತವಾಗಿದೆ. ವಿಧಾನಸೌಧದ ಪಶ್ಚಿಮ ಭಾಗದ ಗಾರ್ಡನ್ ನಲ್ಲಿ ಬಿಯರ್ ಬಾಟಲ್ ಗಳು ಬಿದ್ದಿರುವುದು ಪತ್ತೆಯಾಗಿವೆ.

# ಕಸದ ಸಮಸ್ಯೆಗೆ ಸಿಗದ ಪರಿಹಾರ: ಉದ್ಘಾಟನೆಗೆ ಕಾದಿರುವ ಸಂಗ್ರಹ ಘಟಕ

## ಕಸದ ವಾಹನ ವಿಲೇವಾರಿಗೆ ಸೂಕ್ತ ಸ್ಥಳವಿಲ್ಲದ ಕಾರಣ ದಿನ ಪೂರ್ತಿ ನಗರದಲ್ಲಿರುವ ನಗರಸಭೆ ಕಚೇರಿಯ ಆವರಣ

• ಉದಯವಾಹಿನಿ, ಹೊಸಕೋಟೆ

ದಿನೇದಿನೇ ಹೆಚ್ಚಾಗುತ್ತಿರುವ ಜನದಟ್ಟಣೆಯಿಂದ ಹೊಸಕೋಟೆ ನಗರದಲ್ಲಿ ಕಸದ ಪ್ರಮಾಣವೂ ಹೆಚ್ಚಾಗುತ್ತಿದೆ. ಅವೈಜ್ಞಾನಿಕ ಕಸ ವಿಲೇವಾರಿಯಿಂದ ನಗರದಲ್ಲಿ ಕಸದ ಸಮಸ್ಯೆ ಹೆಚ್ಚಾಗುತ್ತಿದೆ.31 ವಾರ್ಡ್‌ಗಳನ್ನು ಹೊಂದಿರುವ ಹೊಸಕೋಟೆ ನಗರಸಭೆಗೆ ಕಸದ ಸಮಸ್ಯೆ, ಚರಂಡಿ ಸಮಸ್ಯೆ, ಟ್ರಾಫಿಕ್ ಸಮಸ್ಯೆಗಳು ಹೆಚ್ಚಾಗುತ್ತಿವೆ.

ವಾರ್ಡ್‌ಗಳಲ್ಲಿ ಸಂಗ್ರಹಿಸುವ ಕಸವನ್ನು ತುಂಬಿಕೊಂಡ ಕಸದ ವಾಹನ ವಿಲೇವಾರಿಗೆ ಸೂಕ್ತ ಸ್ಥಳವಿಲ್ಲದ ಕಾರಣ ದಿನ ಪೂರ್ತಿ ನಗರದಲ್ಲಿರುವ ನಗರಸಭೆ ಕಚೇರಿಯ ಆವರಣದಲ್ಲಿ ನಿಲ್ಲುತ್ತವೆ.

ಕಸ ಸಂಗ್ರಹಣ ಘಟಕ ನಿರ್ಮಾಣ

ಅಧಿಕಾರಿಗಳು ಮತ್ತು ಸ್ಥಳೀಯ ಜನ ಪ್ರತಿನಿಧಿಗಳು ಈ ಸಮಸ್ಯೆ ಪರಿಹಾರಕ್ಕೆ ಮುಂದಾಗದಿರುವುದು ವಿಪರ್ಯಾಸ.

ನಗರಸಭೆಗೆ ಬರುವ ಸಾರ್ವಜನಿಕರು ಕಸದ ವಾಸನೆಗೆ ಮೂಗು ಮುಚ್ಚಿಕ್ಕೊಂಡು ನಿಲ್ಲಬೇಕಿದೆ. ಈ ವಾಸನೆಯಲ್ಲಿಯೇ ಕೆಲಸ ಮಾಡಬೇಕಾದ ಸ್ಥಿತಿಯಲ್ಲಿ ನಗರಸಭೆ ಅಧಿಕಾರಿಗಳು ಇದ್ದಾರೆ. ಕಸದಿಂದ ಒಸರುವ ನೀರು



ಉದಯವಾಹಿನಿ ಚಿತ್ರ

ರಸ್ತೆಯುದ್ದಕ್ಕೂ ಹರಿಯುತ್ತದೆ.

**ರೂ.9 ಕೋಟಿ ವೆಚ್ಚದಲ್ಲಿ ಕಸ ಸಂಗ್ರಹಣ ಘಟಕ ನಿರ್ಮಾಣ:** ತಾಲ್ಲೂಕಿನ ಕುಂಬಳಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಲ್ಲಹಳ್ಳಿ ಗ್ರಾಮದ ಬಳಿಯಲ್ಲಿ ಸುಮಾರು 12 ಎಕರೆ ವ್ಯಾಪ್ತಿಯಲ್ಲಿ ನಗರದ ಕಸವನ್ನು ಸಂಗ್ರಹಿಸಿ, ವಿಂಗಡಿಸಿ ವೈಜ್ಞಾನಿಕ ವಿಲೇವಾರಿ ಮಾಡಲು ಘಟಕವನ್ನು ನಿರ್ಮಾಣ ಮಾಡಲಾಗಿದೆ. ಸುಮಾರು ರೂ.9.50 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿರುವ ಘಟಕವು ಅಂತಿಮ ಹಂತಕ್ಕೆ ಬಂದಿದ್ದರೂ ಅದು ಇನ್ನೂ ಬಳಕೆಗೆ ಬರುತ್ತಿಲ್ಲ.

ಹೊಸಕೋಟೆ ನಗರದಲ್ಲಿ ದಿನಕ್ಕೆ 25 ಟನ್ ಕಸ ಉತ್ಪತ್ತಿಯಾಗುತ್ತಿದೆ. ಅದನ್ನು ಸೂಕ್ತವಾಗಿ ವಿಲೇವಾರಿ ಮಾಡಲು ಬೇಕಾದ ಸೌಲಭ್ಯಗಳು ನಗರಸಭೆಯಲ್ಲಿ ಇಲ್ಲದಂತಾಗಿದೆ. ಇತ್ತೀಚೆಗೆ ನಗರಸಭೆಯಲ್ಲಿ ಕಸ ಸಂಗ್ರಹಿಸುವ ವಾಹನಗಳ ಪ್ರಮಾಣ ಕಡಿಮೆಯಾಗಿದ್ದು, ಎರಡು ದಿನಕ್ಕೊಮ್ಮೆ ಕಸದ ವಾಹನ ಸಂಚರಿಸುತ್ತಿದೆ. ನಗರದಲ್ಲಿ ದಿನ ಕಳೆದಂತೆ ಕಸದ ಸಮಸ್ಯೆ ದೊಡ್ಡ ಮಟ್ಟದಲ್ಲಿ ಶುರುವಾಗಿದೆ. ನಗರದಲ್ಲಿ ಈವರೆಗೂ ಕಸದ ವೈಜ್ಞಾನಿಕ ವಿಲೇವಾರಿಗೆ ಬೇಕಾದ ಕಸ ಸಂಗ್ರಹಣಾ ಘಟಕ ಸ್ಥಾಪನೆ ಮಾಡದಿರುವುದು ಶೋಚನೀಯ. ಇಚ್ಛಾಶಕ್ತಿ ಕೊರತೆ ಕಾರಣದಿಂದ ಕಸದ ಸಮಸ್ಯೆ ಗಂಭೀರವಾಗುತ್ತಾ ಹೋಗುತ್ತಿದೆ. ಕಲ್ಲಹಳ್ಳಿಯ ಕಸ ಸಂಗ್ರಹಣ ಘಟಕವನ್ನು ತೆರೆದು ಸಮಸ್ಯೆಗೆ ಮುಕ್ತಿ ದೊರಕಿಸುವ ಕೆಲಸವಾಗಬೇಕು ಎಂದು ಸಾಮಾಜಿಕ ಕಾರ್ಯಕರ್ತ ವರದಾಪುರ ನಾಗರಾಜ್ ಒತ್ತಾಯಿಸಿದರು.

ಕಲ್ಲಹಳ್ಳಿ ಬಳಿ ನಿರ್ಮಾಣವಾಗುತ್ತಿರುವ ಕಸ ಸಂಗ್ರಹಣಾ ಘಟಕವನ್ನು ಪರಿಶೀಲಿಸುತ್ತಿರುವ ನಗರಸಭೆಯ ಅಧಿಕಾರಿಗಳು.

### ಜಿಲ್ಲಾಧಿಕಾರಿ ಜೊತೆ ಚರ್ಚೆ

**ಹೊಸಕೋಟೆ ಬೆಳೆಯುತ್ತಿದೆ. ಅದಕ್ಕೆ ತಕ್ಕದಾಗಿ ಕಸದ ಸಮಸ್ಯೆಯೂ ಹೆಚ್ಚಾಗಿದೆ. ಹೊಸಕೋಟೆ ನಗರದ ಕಸದೊಂದಿಗೆ ಹೊರಗಿನವರೂ ಕಸ ತಂದು ನಗರದಲ್ಲಿ ಸುರಿಯುತ್ತಿದ್ದಾರೆ. ಕಲ್ಲಹಳ್ಳಿ ಗ್ರಾಮದ ಬಳಿಯ ಕಸ ಸಂಗ್ರಹಣಾ ಘಟಕಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಜೊತೆ ಚರ್ಚಿಸಲಾಗಿದೆ. ಆದಷ್ಟು ಬೇಗ ಸೂಕ್ತ ಪರಿಹಾರ ಕಂಡುಕೊಳ್ಳಲಾಗುವುದು.**

**ಕಲ್ಲಹಳ್ಳಿ ಬಳಿಯಲ್ಲಿ ಸ್ಥಾಪನೆಯಾಗುತ್ತಿರುವ ಕಸ ಸಂಗ್ರಹಣಾ ಘಟಕವು ಅಂತಿಮ ಹಂತಕ್ಕೆ ಬಂದಿದೆ. ಕೆಲವೊಂದು ಯಂತ್ರೋಪಕರಣ ಅಗತ್ಯವಿದ್ದು, ಈ ಕುರಿತು ಮುಂದಿನ ಸಭೆಯಲ್ಲಿ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.**

-ಅಧ್ಯಕ್ಷೆ ನಗರಸಭೆ ಆಶಾ ರಾಜಶೇಖರ್

# ಕೊನೆ ಉಸಿರು ಎಳೆಯುವ ಮುನ್ನ ಮೇಕೆದಾಟು ಯೋಜನೆಗೆ ಒಪ್ಪಿಗೆ ಕೊಡಿಸುವೆ

## • ಮೇಕೆದಾಟು ಯೋಜನೆ ಆಗುತ್ತೆ ಎಂದರೆ ಅದು ಮೋದಿ ಅವರಿಂದ ಮಾತ್ರ ಸಾಧ್ಯ: ಎಚ್.ಡಿ.ದೇವೇಗೌಡ

• ಉದಯವಾಹಿನಿ, ಚನ್ನಪಟ್ಟಣ

ನನ್ನ ಕೊನೆ ಉಸಿರು ಎಳೆಯುವ ಮುನ್ನ ಮೇಕೆದಾಟು ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಒಪ್ಪಿಗೆ ಕೊಡಿಸುತ್ತೇನೆ' ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಘೋಷಣೆ ಮಾಡಿದರು.

ತಾಲ್ಲೂಕಿನ ಹೊಡಿಕೆಹೊಸಹಳ್ಳಿಯಲ್ಲಿ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಮತಯಾಚಿಸಿ ಮಾತನಾಡಿದರು.


**ಮೇಕೆದಾಟು ಯೋಜನೆ ಆಗುತ್ತೆ**

'ಮೇಕೆದಾಟು ಯೋಜನೆ ಆಗುತ್ತೆ ಎಂದರೆ ಅದು ಮೋದಿ ಅವರಿಂದ ಮಾತ್ರ ಸಾಧ್ಯ. ಇದರಲ್ಲಿ ಎರಡು ಮಾತಿಲ್ಲ. ಆದರೆ, ತಮಿಳುನಾಡಿನವರು ನಮ್ಮ ಕುತ್ತಿಗೆ ಹಿಡಿದಿದ್ದಾರೆ. ನಾನು ಅವರಿಗೆ ಮನವಿ ಮಾಡುತ್ತೇನೆ. ವಾಸ್ತವ ಸ್ಥಿತಿ ಮನವರಿಕೆ ಮಾಡಿ ಕೊಡುತ್ತೇನೆ. ಈಗಾಗಲೇ ಹಲವು ಸಲ ಅವರು ನನ್ನ ಮನವಿ ಆಲಿಸಿದ್ದಾರೆ' ಎಂದರು.

ಜೆಡಿಎಸ್ ಮತ್ತು ಬಿಜೆಪಿ ನಾಯಕರು ಪ್ರಚಾರ ಸಭೆಯುದ್ದಕ್ಕೂ ರಾಜ್ಯ ಸರ್ಕಾರ, ಯೋಗೇಶ್ವರ್ ಹಾಗೂ ಡಿ.ಕೆ. ಸಹೋದರರನ್ನು ತರಾಟೆಗೆ ತೆಗೆದುಕೊಂಡರು. ಪ್ರತಿಯಾಗಿ ಕಾಂಗ್ರೆಸ್‌ನವರು ಸಹ ಪಟ್ಟಣ ಪ್ರದೇಶದಲ್ಲಿ ಬಿರುಸಿನ ಪ್ರಚಾರ ನಡೆಸಿದರು.

**ಜೆಡಿಎಸ್ ಹಣದ ಹೊಳೆ ಕೆಲಸ ಮಾಡಲ್ಲ:** ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದಾಗ ಅವರ ಪುತ್ರ ನಿಖಿಲ್ ಮಂಡ್ಯ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದರು. ಆಗ ಜಿಲ್ಲೆಯಲ್ಲಿ ಅವರ ಪಕ್ಷದ 7 ಶಾಸಕರಿದ್ದರು. ಆಗಲೂ ಅವರು ಹಣದ ಹೊಳೆ ಹರಿಸಿ, ಅಧಿಕಾರದ ಪ್ರಭಾವ ಬೀರಿದರೂ ಮಗನನ್ನು ಗೆಲ್ಲಿಸಿಕೊಳ್ಳಲು ಸಾಧ್ಯವಾಗಲಿಲ್ಲ' ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಪ್ರಚಾರ ಸಭೆಯಲ್ಲಿ ವ್ಯಂಗ್ಯವಾಡಿದರು.

**ಸರ್ಕಾರ ಕಿತ್ತೊಗೆಯುವುದೇ ಎಚ್‌ಡಿಕೆ ಗುರಿ:** ಕೇಂದ್ರ ಸಚಿವರಾಗಿರುವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಅಭಿವೃದ್ಧಿ ಬದಲು ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಕಿತ್ತೊಗೆಯುವುದೇ ಗುರಿಯಾಗಿದೆ' ಎಂದು ಸಚಿವ ಕೃಷ್ಣ ಬೈರೇಗೌಡ ವಾಗ್ದಾಳಿ ನಡೆಸಿದರು.


ಉದಯವಾಹಿನಿ ಚಿತ್ರ

**ರೈತರ ಜಮೀನಿನ ಪಹಣಿಯಲ್ಲಿ ವಕ್ಫ್ ದರ್ಗಾ ಆಸ್ತಿ ಎಂದು ಬರುತ್ತಿದೆ' ಎಂದು ಬಿಜೆಪಿ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹುಣಸನಹಳ್ಳಿಯಲ್ಲಿ ನಿಖಿಲ್ ಪರ ನಡೆದ ಪ್ರಚಾರಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು -ಆರ್.ಅಶೋಕ**

ಚನ್ನಪಟ್ಟಣದಲ್ಲಿ ಪ್ರಚಾರ ನಡೆಸಿದ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಮಾಜಿ ಸಂಸದ ಡಿ.ಕೆ.ಸುರೇಶ್ ಅವರಿಗೆ ಪಕ್ಷದ ಕಾರ್ಯಕರ್ತರು ಹೂಮಳೆಗರೆದು ಅಭಿಮಾನ ಮೆರೆದರು.

### ನಿಖಿಲ್ ಶಾಸಕನಾಗುವುದು ಖಚಿತ

**ಕುಮಾರಸ್ವಾಮಿ ಸವಾಲು 'ಕುಮಾರಸ್ವಾಮಿ ಅವರ ಗುರಿ ಅಭಿವೃದ್ಧಿಯಲ್ಲ ಬದಲಿಗೆ ಸರ್ಕಾರ ಬೀಳಿಸೋದು' ಎಂಬ ಸಚಿವ ಕೃಷ್ಣ ಬೈರೇಗೌಡ ಹೇಳಿಕೆಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಕುಮಾರಸ್ವಾಮಿ 'ಜನರ ಆಶೀರ್ವಾದದಿಂದ ನಿಖಿಲ್ ಶಾಸಕನಾಗುವುದು ಖಚಿತ. ವಿಧಾನಸಭೆಯಲ್ಲಿ ಅಭಿವೃದ್ಧಿ ಎಂದರೇನು ಎಂದು ನಿಖಿಲ್ ಅವರೇ ಕಲಾಪದಲ್ಲಿ ರೂಲ್- 69ರ ಅಡಿಯಲ್ಲಿ ಚರ್ಚಿಸುತ್ತಾರೆ. ಇವರ ಎಲ್ಲಾ ಟೀಕೆಗೂ ನಿಖಿಲ್ ಉತ್ತರ ಕೊಡುತ್ತಾರೆ' ಎಂದು ಸವಾಲು ಹಾಕಿದರು.**

ಚನ್ನಪಟ್ಟಣ ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಮೊಮ್ಮಗ ನಿಖಿಲ್ ಕುಮಾರಸ್ವಾಮಿ ಪರ ಪ್ರಚಾರ ನಡೆಸಿದ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡ ಅವರು ಕಾರ್ಯಕರ್ತರಿಗೆ ನಮಸ್ಕರಿಸಿದರು ಎಚ್.ಡಿ. ಕುಮಾರಸ್ವಾಮಿ ಕೇಂದ್ರ ಸಚಿವಚುನಾವಣೆಗೆ ಮೊದಲು ಡಿ.ಕೆ ಸಹೋದರರು ಹಾಗೂ ಕಾಂಗ್ರೆಸ್ ಅಭ್ಯರ್ಥಿ ಹಾದಿಬೀದಿಯಲ್ಲಿ ಬೈದಾಡಿಕೊಂಡಿದ್ದರು. ಈಗ ಪರಸ್ಪರ ಅಪ್ಪಿಕೊಂಡು ನಾಟಕ ಮಾಡುತ್ತಿದ್ದಾರೆ. ಇವರ ನಾಟಕ ಎಷ್ಟು ದಿನ ನಡೆಯುತ್ತದೆ ಎಂದು ನಾನೂ ನೋಡುತ್ತೇನೆ.

ಸಿ.ಪಿ ಯೋಗೇಶ್ವರ್ ಯಾರ ಯಾರಿಗೆ ಟೋಪಿ ಹಾಕನ್ವೇ ಬಿಡದಿಯಲ್ಲಿ ಹೋಗಿ ಕೇಳಿದ್ರೆ ಎಲ್ಲಾ ಹೇಳ್ತಾರೆ. ಮೆಗಾ ಸಿಟಿ ಮಾಡ್ತಿನಿ ಅಂತ ಟೋಪಿ ಹಾಕಿದ್ನಲ್ಲಾ ಮರೆತೋಗಿದ್ದಾನಾ? ಎಂಬ ಆಡಿಯೊ ಕೇಳಿಸಿದ ಅವರು ಇವರ ಅಸಲಿ ಬಂಡವಾಳ ಎಲ್ಲರಿಗೂ ಗೊತ್ತಿದೆ. ಅದಕ್ಕೆ ಚನ್ನಪಟ್ಟಣ ಜನರೇ ಉತ್ತರ ಕೊಡುತ್ತಾರೆ' ಎಂದು ವಾಗ್ದಾಳಿ ನಡೆಸಿದರು.

ಕರ್ನಾಟಕ ಭಾರತದಲ್ಲಿದೆಯಾ ಅಥವಾ ಪಾಕಿಸ್ತಾನದಲ್ಲಿದೆಯಾ? ರಾಜ್ಯದ ಕಾಂಗ್ರೆಸ್ ಸರ್ಕಾರ ಒಂದು ಸಮುದಾಯಕ್ಕೆ ಒಂದು ಕಾನೂನು ಹಿಂದೂ ಸಮಾಜಕ್ಕೆ ಇನ್ನೊಂದು ಕಾನೂನು ಎಂಬಂತೆ ವರ್ತಿಸುತ್ತಿದೆ. ದೇವಾಲಯಗಳು ಹಾಗೂ ಮಠಗಳ ಜಮೀನನ್ನು ವಕ್ಫ್ ಆಸ್ತಿ ಎಂದು ತೋರಿಸಲಾಗುತ್ತಿದೆ.

# ಯರಗೋಳ್ ಜಲಾಶಯ, ಕಂದುಬಣ್ಣಕ್ಕೆ ತಿರುಗಿದ ನೀರು; ಜನರಲ್ಲಿ ಆತಂಕ

• ಉದಯವಾಹಿನಿ, ಬಂಗಾರಪೇಟೆ

ಬಂಗಾರಪೇಟೆ ಸೇರಿದಂತೆ ಮೂರು ತಾಲ್ಲೂಕುಗಳಿಗೆ ಕುಡಿಯುವ ನೀರು ಪೂರೈಸುವ ಮಹತ್ವಾಕಾಂಕ್ಷೆಯ 'ಯರಗೋಳ್ ಜಲಾಶಯ'ದಿಂದ ಸರಬರಾಜು ಆಗುತ್ತಿರುವ ನೀರು ತಳದಲ್ಲಿ ಕಂದು ಬಣ್ಣಕ್ಕೆ ತಿರುಗಿದ್ದು, ನಾಗರಿಕರು ಆತಂಕಕ್ಕೆ ಸಿಲುಕಿದ್ದಾರೆ.ತಾಲ್ಲೂಕಿನಲ್ಲಿ ಯರಗೋಳ್ ಡ್ಯಾಂ ಕುಡಿಯುವ ನೀರಿನ ಯೋಜನೆಗೆ ಕಳೆದ ವರ್ಷ ನವೆಂಬರ್ ತಿಂಗಳಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ್ದರು.

ಅಂದಿನಿಂದ ಈ ಜಲಾಶಯದ ನೀರನ್ನು ಪುರಸಭೆಯ ವತಿಯಿಂದ ಶುದ್ಧೀಕರಿಸಿ ಜನರಿಗೆ ಸರಬರಾಜು ಮಾಡಲಾಗುತ್ತಿದೆ. ಇದರಿಂದಾಗಿ ಪಟ್ಟಣದಲ್ಲಿ ಕುಡಿಯುವ ನೀರಿನ ಬವಣೆ ನೀಗಿದೆ. ಯರಗೋಳ್ ನೀರು ನೋಡಲು ಯಾವುದೇ ಕಲುಷಿತವಾಗಿರದಂತೆ ಕಾಣುತ್ತದೆ. ಆದರೆ ಬಕೆಟ್ ಅಥವಾ ಬಿಂದಿಗೆಗಳಲ್ಲಿ ಸಂಗ್ರಹಿಸಿದಾಗ ತಳದಲ್ಲಿ ನೀರು ಕಂದು ಬಣ್ಣಕ್ಕೆ ತಿರುಗಿದಂತೆ ಕಂಡುಬರುತ್ತಿದೆ. ಇದನ್ನು ಕಂಡು ನಾಗರಿಕರು ಗಾಬರಿಯಾಗಿದ್ದಾರೆ.

ಅಲ್ಲದೆ, ಈ ನೀರನ್ನು ಸಂಗ್ರಹಿಸಲಾದ ಸಂಪ್, ಸಿಂಟೆಕ್ಸ್ ಸಹ ತಳದಲ್ಲಿ ಕಂದುಬಣ್ಣ ಕಂಡುಬರುತ್ತಿದೆ.


ಉದಯವಾಹಿನಿ ಚಿತ್ರ

ಜೊತೆಗೆ ಈ ನೀರು ಪೂರೈಕೆಯಾದ ಅವಧಿಯಿಂದ ಈವರೆಗೆ ಎರಡು ತಿಂಗಳಿಗೊಮ್ಮೆ ಮನೆಯಲ್ಲಿರುವ ನೀರಿನ ಶುದ್ಧೀಕರಣಗಳು ಹಾನಿಗೀಡಾಗುತ್ತಿವೆ ಎಂದು ನಾಗರಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪುರಸಭೆ ಅಧಿಕಾರಿಗಳನ್ನು ನಾಗರಿಕರು ಪ್ರಶ್ನಿಸಿದ್ದಾರೆ. ಇದಕ್ಕೆ ಈ ನೀರಿನಿಂದ ಯಾವುದೇ ಸಮಸ್ಯೆ ಇಲ್ಲ. ಪ್ರಾರಂಭದಲ್ಲಿ ನೀರು ಹಾಗೆ ಇರುತ್ತದೆ. ನಂತರದ ದಿನಗಳಲ್ಲಿ ನೀರು ತಿಳಿಯಾಗಲಿದೆ ಎಂದು ಅಧಿಕಾರಿಗಳು ಸಮಜಾಯಿಷಿ ನೀಡಿದ್ದರು ಎಂದು ಗೊತ್ತಾಗಿದೆ.

ಯರಗೋಳ್ ಮತ್ತು ಬೋರ್‌ವೆಲ್ ನೀರನ್ನು ಮಿಶ್ರಣ ಮಾಡಿ ಸರಬರಾಜು ಮಾಡಿದಾಗ ಯಾವುದೇ ಸಮಸ್ಯೆ ಕಂಡಿರಲಿಲ್ಲ. ಯರಗೋಳ್ ನೀರು ವಾರಕ್ಕೆ ಮೂರು ದಿನ ಸರಬರಾಜು ಮಾಡಿದಾಗ ಮಾತ್ರ ಸಮಸ್ಯೆ ಕಾಣುತ್ತಿದೆ ಎಂಬ ಆರೋಪವೂ ಇದೆ. ಯರಗೋಳ್ ನೀರು ಕಂದು ಬಣ್ಣಕ್ಕೆ ತಿರುಗುತ್ತಿರುವುದರಿಂದ ಈ ನೀರು ಬಳಸಲು ನಾಗರಿಕರು ಭಯಪಡುತ್ತಿದ್ದಾರೆ.

**ಪಟ್ಟಣದ ಶಾಂತಿನಗರದ ಶಿಕ್ಷಕ ಮಂಜುನಾಥ್ ಎಂಬುವರು ತಮ್ಮ ಮನೆಗೆ ಪೂರೈಕೆಯಾದ ನೀರು ತಳದಲ್ಲಿ ಕಂದ ಬಣ್ಣದಲ್ಲಿರುವುದನ್ನು ಪತ್ರಕರ್ತರಿಗೆ ತೋರಿಸಿದರು. ಅದೇ ರೀತಿ ಪಟ್ಟಣದ ಎಲ್ಲಾ ಮನೆಗಳಿಗೆ ಸರಬರಾಜು ಆಗುತ್ತಿದೆಯಾಗಿದೆ. ಆದರೆ, ನಾಗರಿಕರು ಯಾರೂ ಸಹ ಪ್ರಶ್ನಿಸುವ ಧೈರ್ಯ ತೋರದೆ, ಮೌನಕ್ಕೆ ಶರಣಾಗಿದ್ದಾರೆ.**

ಈ ಕುರಿತು ಶಿಕ್ಷಕ ಮಂಜುನಾಥ್, ಯರಗೋಳ್ ಜಲಾಶಯದ ನೀರು ಶುದ್ಧೀಕರಿಸಿದ್ದರೆ, ನೀರು ಯಾಕೆ ಕಂದುಬಣ್ಣಕ್ಕೆ ತಿರುಗುತ್ತಿದೆ ಎಂದು ಪ್ರಶ್ನಿಸಿ, ಸಾಮಾಜಿಕ ಜಾಲತಾಣದಲ್ಲಿ ಕಂದುಬಣ್ಣಕ್ಕೆ ತಿರುಗಿದ ನೀರಿನ ವಿಡಿಯೋ ಹಾಕಿದ್ದಾರೆ. ಆ ಬಳಿಕ ಇತರ ನಾಗರಿಕರು ತಮ್ಮ ಮನೆಯಲ್ಲೂ ಇದೇ ಪರಿಸ್ಥಿತಿ ಎಂದು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.

# 62 ದಿನದ ಬಳಿಕ ಅದ್ಧೂರಿ ಗಣಪತಿ ವಿಸರ್ಜನೆ

• ಉದಯವಾಹಿನಿ, ಶನಿವಾರಸಂತೆ

ಸ್ಥಳೀಯ ಏಕದಂತ ಟ್ರಾಕ್ಟರ್ ಮಾಲೀಕರ ಸಂಘದ ವತಿಯಿಂದ ಕಳೆದ 62 ದಿನಗಳ ಹಿಂದೆ ಗೌರಿ ಗಣೇಶ ಹಬ್ಬದ ಪ್ರಯುಕ್ತ ಪಟ್ಟಣದ ಚಂಗಡಹಳ್ಳಿ ರಸ್ತೆ ಬಳಿ ಪ್ರತಿಷ್ಠಾಪಿಸಿದ್ದ ಗೌರಿ-ಗಣಪತಿ ಮೂರ್ತಿಯನ್ನು ಅದ್ದೂರಿ ಮೆರವಣಿಗೆಯೊಂದಿಗೆ ವಿಸರ್ಜನೆ ಮಾಡಲಾಯಿತು.ಏಕದಂತ ಟ್ರಾಕ್ಟರ್ ಮಾಲೀಕರ ಸಂಘದ ವತಿಯಿಂದ ಗೌರಿ, ಗಣೇಶ ಹಬ್ಬದ ಪ್ರಯುಕ್ತ ಬೃಹತ್ ವೇದಿಕೆಯಲ್ಲಿ 12 ಅಡಿ ಎತ್ತರದ ಗಣಪತಿ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿತ್ತು.

ಇಲ್ಲಿ ಪ್ರತಿದಿನ ಪೂಜಾ ಕಾರ್ಯಗಳು ಹಾಗೂ ವಿಶೇಷ ಪೂಜೆಗಳನ್ನು ನಡೆಸಲಾಗುತ್ತಿತ್ತು.

ಗೌರಿ, ಗಣಪತಿ ಮೂರ್ತಿಗೆ ವಿಶೇಷ ಪೂಜೆ ಹೋಮ ಕಾರ್ಯವನ್ನು ನೆರವೇರಿಸಲಾಯಿತು. ಸಂಜೆ ವಿಸರ್ಜನೆ ಮೆರವಣಿಗೆಯ ಸಲುವಾಗಿ ವಾಹನದಲ್ಲಿ ವಿದ್ಯುತ್ ದೀಪಗಳಿಂದ ಅಲಂಕರಿಸಿದ ಬೃಹತ್ ಮಂಟಪದಲ್ಲಿ ಕ್ರೇನ್ ಮೂಲಕ 12 ಅಡಿಯ ಗಣಪತಿ ಮೂರ್ತಿಯನ್ನು ಕೂರಿಸಲಾಯಿತು. ಸಂಜೆ 5ರಿಂದ ಗೌರಿ, ಗಣಪತಿ ವಿಸರ್ಜನಾ ಮೆರವಣಿಗೆಯು ಪಟ್ಟಣದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಿಂದ


ಉದಯವಾಹಿನಿ ಚಿತ್ರ

ಮುಖ್ಯ ರಸ್ತೆ ಮೂಲಕ ಗುಡುಗಳಲೆ ಜಂಕ್ಷನ್ ವರೆಗೆ ತೆರಳಿತು. ನಂತರ, ಇದೆ ರಸ್ತೆ ಮೂಲಕ ಶೋಭಯಾತ್ರೆಯು ಚಂಗಡಹಳ್ಳಿ-ಸುಬ್ರಮಣ್ಯ ರಸ್ತೆ ಮೂಲಕವಾಗಿ ಸಾಗಿತು ತದನಂತರ ರಾತ್ರಿ ಕಾಜೂರು ನದಿಯಲ್ಲಿ ಗೌರಿ ಗಣಪತಿ ಮೂರ್ತಿಯನ್ನು ವಿಸರ್ಜನೆ ಮಾಡಲಾಯಿತು.

ವಾದ್ಯಗೋಷ್ಠಿ, ಕೀಲು ಕುದುರೆ, ಬಾಳುಪೇಟೆಯ ಹಿಂದೂ ಟೈಗರ್ಸ್ ತಂಡವರಿಂದ ನಾಸಿಕ್ ಬ್ಯಾಂಡ್, ಹೊದ್ದೂರಿನ ಕಲಾತಂಡದವರಿಂದ ವೀರಗಾಸೆ ಕುಣಿತ, ದುದ್ದಾಪುರದ ಮಂಜುಶ್ರೀ ಜಾನಪದ ಕಲಾತಂಡದವರಿಂದ ಜಾನಪದ ನೃತ್ಯ, ಪುರುಷಕೋಡಿಯ ಕಾಳಿಕಾಂಭ ಗೊಂಬೆ ಬಳಗದವರಿಂದ ಗೊಂಬೆ ನೃತ್ಯ ಪ್ರದರ್ಶನದೊಂದಿಗೆ ಮೆರವಣಿಗೆ ಸಾಗಿತು.

# ಸರ್.ಎಂ.ವಿ ಸ್ಮರಿಸುವ ಜಾಗಕ್ಕೂ 'ವಕ್ಫ್' ಮುದ್ರೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಅವರ ಬಾಲ್ಯ ಸ್ಮರಿಸುವಾಗ ಬರುವ ನಗರದ ಕಂದವಾರ ಸರ್ಕಾರಿ ಪ್ರಾಥಮಿಕ ಶಾಲೆ ಪಹಣಿಯಲ್ಲಿ ನಮೂದಾಗಿರುವ 'ವಕ್ಫ್' ಹೆಸರು ಮತ್ತೆ ಚರ್ಚೆಗೆ ಕಾರಣವಾಗಿದೆ.

**ವಕ್ಫ್ ಹೆಸರು ಮತ್ತೆ ಚರ್ಚೆಗೆ**

ಕಂದವಾರ ಗ್ರಾಮದ ಸರ್ವೆ ನಂ 1ರಲ್ಲಿ 19ಗುಂಟೆ ಜಮೀನಿದೆ. ಹಲವು ದಶಕಗಳಿಂದ ಈ ಜಮೀನಿನ ಪಹಣಿಯಲ್ಲಿ 'ಶಾಲೆ' ಎಂದೇ ಬರುತ್ತಿತ್ತು.

2014-15 ನಂತರ 'ದಾವೂದ್ ಷಾ ವಲ್ಲೀ ದರ್ಗಾ ಸುನ್ನಿ ವಕ್ಫ್ ಆಸ್ತಿ' ಎಂದು ನಮೂದಾಗಿದೆ. ಈಗಲೂ ಪಹಣಿಯಲ್ಲಿ ಇದೇ ಹೆಸರು ಬರುತ್ತಿದೆ.

ವಿಶ್ವೇಶ್ವರಯ್ಯ ಅವರು ಬಾಲ್ಯದಲ್ಲಿ ಮುದ್ದೇನಹಳ್ಳಿಯಿಂದ ಚಿಕ್ಕಬಳ್ಳಾಪುರಕ್ಕೆ ಪ್ರಾಥಮಿಕ ಶಿಕ್ಷಣಕ್ಕೆ ಬರುವಾಗ ಈ ಸ್ಥಳದಲ್ಲಿ ಕೆಲ ಸಮಯ ವಿಶ್ರಾಂತಿ ಪಡೆಯುತ್ತಿದ್ದರು ಎನ್ನಲಾಗುತ್ತಿದೆ. ಆ ಕಾರಣದಿಂದ ಶಾಲೆ ಆವರಣದಲ್ಲಿ 'ವಿಶ್ವೇಶ್ವರಯ್ಯ ತಂಗುದಾಣ' ಹೆಸರಿನ ಕೊಠಡಿಯೂ ಇದೆ.

ಕಂದವಾರದ ಸರ್ವೆ ನಂ 200ರಲ್ಲಿ ದರ್ಗಾಕ್ಕೆ ಸೇರಿದ 15★19 ಜಾಗವಿದೆ. ಇದು ವಕ್ಫ್ ಜಾಗ. ಇದಕ್ಕೆ ಹೊಂದಿಕೊಂಡಿರುವ ಸರ್ವೆ ನಂ 1ರಲ್ಲಿ ಶಾಲೆ ಹೆಸರಿನಲ್ಲಿದ್ದ 19 ಗುಂಟೆ ಜಾಗ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಈ ಬಗ್ಗೆ ಗ್ರಾಮಸ್ಥ ರಾಮಸ್ವಾಮಿ ಮತ್ತಿತರರು ಹೋರಾಟ ನಡೆಸಿದ್ದರು.

2022-23ರಲ್ಲಿ ನ್ಯಾಯಾಧೀಶರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದರು. ಆಗ ವಕ್ಫ್ ಬೋರ್ಡ್‌ನವರನ್ನು ಕರೆಸಿದ್ದರು. ಆಗ ವಕ್ಪ್ ಬೋರ್ಡ್‌ನವರು, ತಪ್ಪಾಗಿದೆ. ನಮ್ಮದು 15★19 ಜಾಗ' ಎಂದು ಹೇಳಿದ್ದರು.

ಆದರೆ, ಇಂದಿಗೂ ಶಾಲೆ ಪಹಣಿಯಲ್ಲಿರುವ 'ವಕ್ಫ್' ಹೆಸರು ತೆರವಾಗಿಲ್ಲ ಎಂದು ಶಾಲೆಯ ಈ ಹಿಂದಿನ ಮುಖ್ಯ ಶಿಕ್ಷಕ ಕೆ.ಜಿ ಶ್ರೀನಿವಾಸ್ ತಿಳಿಸಿದರು.


# ಕಾಡಾನೆ ಹಾವಳಿ ತಡೆಯಲು ಇಲಾಖೆ ವಿಫಲ

• ಉದಯವಾಹಿನಿ, ವಿರಾಜಪೇಟೆ

ಗ್ರಾಮಸ್ಥರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಹಾಗೂ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಗ್ರಾಮ ಸಭೆ ಮಹತ್ವವಹಿಸುತ್ತದೆ ಎಂದು ಕ್ಷೇತ್ರ ಶಿಕ್ಷಣ ಅಧಿಕಾರಿ ರವಿ ಹೇಳಿದರು.

ಸಮೀಪದ ರಾಮನಗರದ ಪುದುಪಾಡಿ ಶ್ರೀ ಅಯ್ಯಪ್ಪ ಸಭಾ ಭವನದಲ್ಲಿ ಬೇಟೋಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಚ್ಚಪಂಡ ಎಂ.ಬೋಪಣ್ಣ ಅಧ್ಯಕ್ಷತೆಯಲ್ಲಿ ನಡೆದ ಗ್ರಾಮ ಸಭೆಯಲ್ಲಿ ಅವರು ಮಾತನಾಡಿದರು. ಬದುಕಿನಲ್ಲಿ ಸಾಧಿಸಲು ಮುಖ್ಯವಾಗಿ ಶಿಕ್ಷಣ ಅವಶ್ಯಕ. ಗ್ರಾಮೀಣ ಭಾಗದ ಕಡು ಬಡಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು' ಎಂದರು.

ಗ್ರಾಮಸ್ಥ ಅಚ್ಚಪಂಡ ಹರೀಶ್ ಮಾತನಾಡಿ, 'ಅರಣ್ಯ ಇಲಾಖೆ ಅಧಿಕಾರಿಗಳು ಸೂಕ್ಷ್ಮ ಪ್ರದೇಶವೆಂದು ಹೇಳಿ 80 ವರ್ಷಗಳಿಂದ ವಾಸಿಸುತ್ತಿರುವ ನಿವಾಸಿಗಳಿಗೆ ಈಚೆಗೆ ನೋಟಿಸ್ ನೀಡುತ್ತಿದ್ದಾರೆ. ಕಾಡಾನೆಗಳು ನಿತ್ಯ ಬೆಳೆ ನಷ್ಟ ಮಾಡುತ್ತಿದ್ದು, ಅರಣ್ಯ ಇಲಾಖೆ ಇದನ್ನು ಸಮರ್ಥವಾಗಿ ನಿಭಾಯಿಸುತ್ತಿಲ್ಲ' ಎಂದು


ಉದಯವಾಹಿನಿ ಚಿತ್ರ

ಆರೋಪಿಸಿದರು. ಉಪ ವಲಯ ಅರಣ್ಯಾಧಿಕಾರಿ ದೇವಯ್ಯ ಮತ್ತು ನಾರಾಯಣ ಅವರು ಮಾತನಾಡಿ, 'ಈ ಹಿಂದೆ 1991ರಲ್ಲಿ ಕೇಂದ್ರ ಸರ್ಕಾರ ಮಾಡಿರುವ ಯೋಜನೆಯನ್ವಯ ಇದೀಗ ನೋಟಿಸ್ ನೀಡಲು ಆದೇಶಿಸಿದ್ದಾರೆ. ಗ್ರಾಮಸ್ಥರು ಈ ಕುರಿತು ಆಕ್ಷೇಪ ಸಲ್ಲಿಸುವ ಅವಕಾಶವಿದೆ. ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯ ನಡೆಸಲಾಗಿದೆ' ಎಂದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಣಿ ಅವರು ಮಾತನಾಡಿ, 'ಉದ್ಯೋಗ ಖಾತ್ರಿ ಯೋಜನೆಯಡಿ ಬೇಟೋಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ತೋಡು, ಕಾಲುವೆಗಳ ಹೂಳೆತ್ತುವ ಕಾರ್ಯ ನಡೆಸಲಾಗಿದೆ. ಎಲ್ಲಾ ಶಾಲೆಗಳಿಗೂ ಆವರಣ ಗೋಡೆಯನ್ನು ನಿರ್ಮಿಸಿ ಕೊಡಲಾಗಿದೆ' ಎಂದರು.

**ಜಾನುವಾರು ರೋಗಮುಕ್ತ ಮಾಡಬೇಕೆಂಬುದು ಸರ್ಕಾರದ ಆದೇಶ. ಆದರೆ ಸಿಬ್ಬಂದಿ ಕೊರತೆಯಿದೆ. ಗ್ರಾಮೀಣ ಪ್ರದೇಶದ ಜನರಿಗೆ ಜಾನುವಾರು ಸಾಕಾಣಿಕೆಗೆ ಬ್ಯಾಂಕ್‌ಗಳು ಸಬ್ಸಿಡಿ ರೂಪದಲ್ಲಿ ಸಾಲ ನೀಡಲು ಮುಂದೆ ಬಂದಿದ್ದು, ಗ್ರಾಮಸ್ಥರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕು**

**-ಡಾ. ರಾಕೇಶ್, ಪಶು ಸಂಗೋಪನ ಇಲಾಖೆ**

ಸಭೆಯಲ್ಲಿ ಕಂದಾಯ ಇಲಾಖೆ, ಅರಣ್ಯ ಇಲಾಖೆ, ತೋಟಗಾರಿಕೆ, ಸೆಸ್ಕ್, ಪೊಲೀಸ್, ಶಿಕ್ಷಣ, ಆರೋಗ್ಯ ಇಲಾಖೆ ಸೇರಿದಂತೆ ಮತ್ತಿತರ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಭಾಗವಹಿಸಿದ್ದರು.


# ಸುಂಟಿಕೊಪ್ಪ ಆರೋಗ್ಯ ಕೇಂದ್ರ: ಸಮಸ್ಯೆಗೆ ಪರಿಹಾರದ ಭರವಸೆ

• ಉದಯವಾಹಿನಿ, ಸುಂಟಿಕೊಪ್ಪ

ಇಲ್ಲಿನ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸತೀಶ್ ಮತ್ತು ಅಧಿಕಾರಿಗಳು ಭೇಟಿ ನೀಡಿ ಸಮಸ್ಯೆಯನ್ನು ಪರಿಶೀಲಿಸಿದರು. ರಾತ್ರಿ ಪಾಳಯದಲ್ಲಿ ಕರ್ತವ್ಯ ನಿರ್ವಹಿಸಲು ನುರಿತ ವೈದ್ಯರು ಹಾಗೂ ಹಗಲಿನಲ್ಲೂ ವೈದ್ಯಾಧಿಕಾರಿಗಳಿಲ್ಲದೆ ಬಡ ರೋಗಿಗಳು ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ಅನಿವಾರ್ಯತೆ ಎದುರಾಗಿದೆ.

ಶುಶ್ರೂಷಕಿಯರು ಹಾಗೂ ಸಿಬ್ಬಂದಿ ಕೊರತೆಯೂ ಇದ್ದು, ಸಾರ್ವಜನಿಕರ ದೂರಿನ ನ್ವಯ ಡಿಎಚ್‌ಒ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಚರ್ಚಿಸಿದರು.

ಒಂದು ತಿಂಗಳೊಳಗೆ ಸಮಸ್ಯೆ ಪರಿಹರಿಸದಿದ್ದಲ್ಲಿ ಸುಂಟಿಕೊಪ್ಪ ಪ್ರಾಥಮಿಕ ಆರೋಗ್ಯ ಕೇಂದ್ರದ ಮುಂಭಾಗ ಎಸ್‌ಡಿಟಿಯು ಸಂಘಟನೆ ನೇತೃತ್ವದಲ್ಲಿ ಗ್ರಾಮಸ್ಥರ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಕಾರದೊಂದಿಗೆ ಪ್ರತಿಭಟನೆ ನಡೆಸುವುದಾಗಿ ಮುಖಂಡರಾದ ಕೆ.ಎ.ಲತೀಫ್, ಜಿಲ್ಲಾ ಘಟಕದ ಅಧ್ಯಕ್ಷ ಅಣ್ಣಾ ಶರೀಫ್, ಉದ್ಯಮಿ


ಉದಯವಾಹಿನಿ ಚಿತ್ರ

**ಸುಂಟಿಕೊಪ್ಪ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಾತ್ರ ಒಂದು ಕಾನೂನು ಇತರೆ ಆರೋಗ್ಯ ಕೇಂದ್ರಗಳಿಗೆ ಕಾನೂನು ಬದಲಿಸಲಾಗಿದೆಯೇ ಎಂದು ಫಿರೋಜ್ ಪ್ರಶ್ನಿಸಿದರು.**

ಫೈರೋಜ್ ಎಚ್ಚರಿಸಿದರು. 'ಅತೀ ಹೆಚ್ಚು ಮಂದಿ ಕೂಲಿ ಕಾರ್ಮಿಕರೇ ನೆಲೆಸಿರುವ ಈ ಪ್ರದೇಶದಲ್ಲಿ ತುರ್ತು ಚಿಕಿತ್ಸೆಗೆ ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನೇ ಅವಲಂಭಿಸಿದ್ದು, ದಿನವೊಂದಕ್ಕೆ ಕನಿಷ್ಠ 150ಕ್ಕೂ ಅಧಿಕ ಕೂಲಿ ಕಾರ್ಮಿಕರು ಇಲ್ಲಿಗೆ ಬರುತ್ತಿದ್ದಾರೆ. ಆದರೆ ವೈದ್ಯರ ಬದಲಿಗೆ ನುರಿತ ಶೂಶ್ರಷಕಿಯರಿಂದ ಕನಿಷ್ಠ ಪ್ರಾಥಮಿಕ ಚಿಕಿತ್ಸೆ ದೊರೆಯುತ್ತಿದೆ. ಅಲ್ಲದೆ ತಿಂಗಳಿಗೆ ಕನಿಷ್ಠ 10 ಪ್ರಸೂತಿ ಕಾರ್ಯವು ನಡೆಯುತ್ತಿದೆ. ಆದರೆ ಇಲ್ಲಿರುವ ಶೂಶ್ರೂಷಿಕಿಯರನ್ನು ವರ್ಗಾವಣೆಗೊಳಿಸಲಾಗಿದ್ದು, ತೆರವಾದ ಸ್ಥಾನಕ್ಕೆ ಸಿಬ್ಬಂದಿಯನ್ನು ನಿಯೋಜಿಸದೆ ಇರುವುದು ಸಮಸ್ಯೆಗೆ ಕಾರಣವಾಗಿದೆ' ಎಂದು ಅಧಿಕಾರಿಗಳ ಗಮನಕ್ಕೆ ತಂದರು.

ಪ್ರಾಥಮಿಕ ಆರೋಗ್ಯ ಆರೋಗ್ಯ ಕೇಂದ್ರದ ಆವರಣದಲ್ಲಿ ಗಿಡಗಂಟಿಗಳು ಬೆಳೆದಿದ್ದು, ಪಾಳು ವಸತಿಗೃಹಗಳಲ್ಲಿ ಹಾವು, ಮುಂಗುಸಿ, ಚೇಳುಗಳಂತಹ ವಿಷಕಾರಿ ಪ್ರಾಣಿಗಳು ವಾಸಿಸುತ್ತಿವೆ. ಗಿಡಗಂಟಿಗಳನ್ನು ತೆರವುಗೊಳಿಸಬೇಕು. 6 ತಿಂಗಳ ಹಿಂದೆಯೇ 108 ಆಯಂಬುಲೆನ್ಸ್ ಅಪಘಾತಕ್ಕೀಡಾಗಿದ್ದು, ಬದಲಿ ಆಯಂಬುಲೆನ್ಸ್ ವ್ಯವಸ್ಥೆ ಮಾಡಿಲ್ಲ. ಈ ಹಿಂದೆ ಇದ್ದ ಆಯಂಬುಲೆನ್ಸ್ ಅಂಬುಲೆನ್ಸ್ ಅನ್ನು ಮಂಗಳೂರಿಗೆ ಕಳುಹಿಸಿದ್ದು, ವಾಪಸ್ ತರಿಸುವಂತೆ ಅಣ್ಣಾ ಶರೀಫ್ ಹಾಗೂ ಲತೀಫ್ ಒತ್ತಾಯಿಸಿದರು.ಕೆಲವು ಸಿಬ್ಬಂದಿ ರೋಗಿಗಳೊಂದಿಗೆ ಅನುಚಿತ ವರ್ತನೆ ತೋರುತ್ತಿದ್ದು, ಕೂಡಲೇ ಅವರನ್ನು ಇಲ್ಲಿಂದ ವರ್ಗಾಯಿಸಿ ಬದಲಿ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡಿಕೊಂಡರು.

# ಕೊಳ್ಳೇಗಾಲ ನಗರಸಭೆ ಸಿಬ್ಬಂದಿ ಎಡವಟ್ಟು: ಮೃತಪಟ್ಟಿದ್ದು ತಾಯಿ-ಮರಣ ಪ್ರಮಾಣ ಪತ್ರದಲ್ಲಿ ಮಗನ ಹೆಸರು

• ಉದಯವಾಹಿನಿ, ಚಾಮರಾಜನಗರ

ಸಾಮಾನ್ಯವಾಗಿ ಮರಣ ಹೊಂದಿದವರ ಮರಣ ಪತ್ರವನ್ನು ಕೊಡಲಾಗುತ್ತಿದೆ. ಆದರೆ ಇದೀಗ ವಿಚಿತ್ರ ಎಂಬಂತೆ ಎದುರಿಗೆ ಕುಳಿತ ವ್ಯಕ್ತಿಗೆ ಮರಣ ಪ್ರಮಾಣ ಪತ್ರ ಕೊಟ್ಟು ಎಲ್ಲರನ್ನೂ ಹೌಹಾರುವಂತೆ ಮಾಡಿರುವ ಘಟನೆ ಕೊಳ್ಳೇಗಾಲ ನಗರಸಭೆಯಲ್ಲಿ ನಡೆದಿದೆ.

ಹಾಗಾದರೆ ಮುಂದಾಗಿದ್ದೇನು ಎನ್ನುವ ಮಾಹಿತಿಯನ್ನು ಇಲ್ಲಿ ತಿಳಿಯಿರಿ.

ಕೊಳ್ಳೇಗಾಲ ನಗರಸಭೆ ಸಿಬ್ಬಂದಿಯ ಎಡವಟ್ಟು ಕಂಡು ದಾಖಲೆಯಲ್ಲಿ ಮೃತಪಟ್ಟು ದೈಹಿಕವಾಗಿ ಬದುಕಿರುವ ವ್ಯಕ್ತಿ ಸಿಬ್ಬಂದಿ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಕೊಳ್ಳೇಗಾಲದ ಕುರುಬರ ಬೀದಿ ನಿವಾಸಿಯಾದ ಶಂಕರ ಎಂಬವರು, ನಿಧನ ಹೊಂದಿದ ತಮ್ಮ ತಾಯಿ ಪುಟ್ಟಮ್ಮ ಮರಣ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ್ದರು. ಆದರೆ, ಕೊಳ್ಳೇಗಾಲ



ಉದಯವಾಹಿನಿ ಚಿತ್ರ

ನಗರಸಭೆಯ ಜನನ-ಮರಣ ನೋಂದಣಿ ವಿಭಾಗದ ಮಹಾದೇವಸ್ವಾಮಿ ಎಂಬವರು ನಿಧನ ಹೊಂದಿದ ಪುಟ್ಟಮ್ಮ ಬದಲಾಗಿ ಬದುಕಿರುವ ಶಂಕರ್‌ಗೆ ಮರಣ ಪ್ರಮಾಣ ಪತ್ರ ಕೊಟ್ಟು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ಬಳಿ ಆಕ್ರೋಶಗೊಂಡ ಶಂಕರ್ ಆತನ ಮುಂದೆ ಜೀವಂತವಾಗಿ ಕೂತಿದ್ದರೂ, ಅರ್ಜಿಯಲ್ಲಿ ಪುಟ್ಟಮ್ಮ ಎಂದು ಬರೆಯಲಾಗಿತ್ತು. ಆದರೂ ಕರ್ತವ್ಯ ಲೋಪ ಎಸಗಿ ಮರಣ ಪ್ರಮಾಣ ಪತ್ರ ಕೊಟ್ಟಿದ್ದನ್ನು ಕೂಡಲೇ ಸರಿಪಡಿಸಬೇಕು ಎಂದು ಎಚ್ಚರಿಕೆ ನೀಡಿದ್ದಾರೆ.

# ಮತದಾನದ ಹಕ್ಕು ಸ್ವಾಭಿಮಾನದ ಪ್ರತೀಕ, ಯಾರೂ ಮಾರಿಕೊಳ್ಳುವುದಿಲ್ಲ

## • ನಮ್ಮಿಂದ ಸಾಧ್ಯವಾಗಿದ್ದು, ಕುಮಾರಸ್ವಾಮಿಯಿಂದ ಸಾಧ್ಯವಾಗಲಿಲ್ಲ ಯಾಕೆ?: ಡಿಸಿಎಂ ಡಿ.ಕೆ ಶಿವಕುಮಾರ್ ಪ್ರಶ್ನೆ

• ಉದಯವಾಹಿನಿ ರಾಮನಗರ

ನಾನು ಇಂಧನ ಸಚಿವನಾಗಿದ್ದಾಗ 10 ಕಡೆಗಳಲ್ಲಿ ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಿದ್ದೇನೆ. ಪ್ರತಿ ಹಳ್ಳಿಯಲ್ಲಿ ಪ್ರತಿ ಇಬ್ಬರು ರೈತರಿಗೆ ಹೆಚ್‌ವಿಡಿ ಯೋಜನೆಯಡಿ ಟ್ರಾನ್ಸ್‌ಫಾರ್ಮರ್ಸ್ ಅಳವಡಿಸಿಕೊಟ್ಟಿದ್ದೇನೆ. ಈ ಕೆಲಸ ಕುಮಾರಸ್ವಾಮಿಯಿಂದ ಯಾಕೆ ಸಾಧ್ಯವಾಗಿಲ್ಲ?

ಕುಮಾರಸ್ವಾಮಿ ಕ್ಷೇತ್ರದಲ್ಲಿ ಯಾರಿಗಾದರೂ ಒಬ್ಬರಿಗೆ ನಿವೇಶನ ಹಂಚಿದ್ದಾರಾ? ನಾವು ನಿವೇಶನ ನೀಡಲು ಬಂದಾಗ, ಜಿಲ್ಲಾಧಿಕಾರಿಗೆ ಕರೆ ಮಾಡಿ ನನ್ನ ಅವಧಿಯಲ್ಲಿ ಈ ಕೆಲಸ ಮಾಡಲು ಆಗಿಲ್ಲ, ಈಗ ಯಾಕೆ ಮಾಡುತ್ತಿದ್ದೀರಾ ಎಂದು ಬೆದರಿಕೆ ಹಾಕಿದ್ದಾರೆ. ಕುಮಾರಣ್ಣ ನಿನಗೆ ಬಡವರ ಬಗ್ಗೆ ವಿಶ್ವಾಸ ಇರಲಿಲ್ಲ, ಅದಕ್ಕೆ ನೀನು ಮಾಡಲಿಲ್ಲ ಎಂಬುದಾಗಿ ಡಿಸಿಎಂ ಡಿ.ಕೆ ಶಿವಕುಮಾರ್ ಗುಡುಗಿದರು.

ನಗರದಲ್ಲಿ ಚುನಾವಣಾ ಪ್ರಚಾರದಲ್ಲಿ ತೊಡಗಿ ಮಾತನಾಡಿದಂತ ಅವರು, ಮಹಿಳೆಯರದ್ದು ಹೆಂಗರುಳು, ಅವರಿಗೆ ಸಹಾಯ ಮಾಡಿದರೆ ಅವರು ಋಣ ತೀರಿಸುತ್ತಾರೆ. ಹೀಗಾಗಿ ಅವರಿಗೆ ಹೆಚ್ಚು ಕಾರ್ಯಕ್ರಮ ನೀಡಿದ್ದೇವೆ.

ರಾಮಲಿಂಗಾ ರೆಡ್ಡಿ ಅವರು ಶಕ್ತಿ ಯೋಜನೆ ನೀಡಿದ್ದು, ನೀವು ಯಾವುದೇ ಪುಣ್ಯಕ್ಷೇತ್ರಕ್ಕೆ ಉಚಿತವಾಗಿ ಹೋಗಬಹುದು. ಈ ಯೋಜನೆಯಿಂದ ನಮ್ಮ ದೇವಾಲಯಗಳ ಹುಂಡಿಯಲ್ಲಿ ಹಣ ಹೆಚ್ಚಾಗುತ್ತಿದೆ ಎಂದು ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗಡೆಯವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ ಎಂದರು.

ರಾಮನಗರದಲ್ಲಿ ಕುಮಾರಸ್ವಾಮಿ ಅವರೂ ಶಾಸಕರಾಗಿದ್ದರು, ಮುಖ್ಯಮಂತ್ರಿಯೂ ಆದರು. ಅವರ ಧರ್ಮಪತ್ನಿ ಅನಿತಾ ಕುಮಾರಸ್ವಾಮಿ ಅವರು ಕೂಡ ಶಾಸಕರಾಗಿದ್ದರು. ಆದರೂ ನಿಖಿಲ್ ರಾಮನಗರ ದಲ್ಲಿ ಯಾಕೆ ಸೋತರು? ಅವರು ಕೆಲಸ ಮಾಡಿದ್ದರೆ ಜನ ಸೋಲಿಸುತ್ತಿದ್ದರಾ? ಕೆಲಸ ಮಾಡಿ, ಜನರ ಸೇವೆ ಮಾಡಿದ್ದರೆ ಸೋಲುತ್ತಿರಲಿಲ್ಲ. 5 ವರ್ಷಕ್ಕೊಮ್ಮೆ ಬಂದು ಮತ ನೀಡಿ ಎಂದರೆ ಹೇಗೆ? ಮತದಾರರು ಏನು ಕೂಲಿಕಾರ್ಮಿಕರೇ? ಮತದಾನದ ಹಕ್ಕು ಸ್ವಾಭಿಮಾನದ ಪ್ರತೀಕ. ಅದನ್ನು ಯಾರೂ ಮಾರಿಕೊಳ್ಳುವುದಿಲ್ಲ.

ಕೊಟ್ಟ ಕುದುರೆ ಏರಲು ಅರಿಯದೆ ಮತ್ತೊಂದು ಕುದುರೆ ಏರಲು ಬಯಸುವವನು ವೀರನೂ ಅಲ್ಲ, ಶೂರನೂ ಅಲ್ಲ ಎಂದು ಅಲ್ಲಮಪ್ರಭುಗಳು ಹೇಳಿದ್ದಾರೆ. ಅಧಿಕಾರ ಇದ್ದಾಗ ಈ ಕ್ಷೇತ್ರದ ಹಳ್ಳಿಗಳಿಗೆ ಹೋಗಿ ಬಡವರಿಗೆ ಸಹಾಯ ಮಾಡದಿದ್ದರೆ, ಜನರಿಗೆ ನೆರವಾಗದಿದ್ದರೆ, ಶಾಸಕನಾಗಿ ಒಂದೇ ಒಂದು ಬಗರ್ ಹುಕ್ಕುಂ ಸಭೆ ಮಾಡಲಿಲ್ಲ. ಈ ಕ್ಷೇತ್ರದಲ್ಲಿ ಒಮ್ಮೆಯೂ ರಾಷ್ಟ್ರಧ್ವಜ, ಕನ್ನಡ ಧ್ವಜ ಹಾರಿಸಲಿಲ್ಲ. ಈ ದೇಶಕ್ಕೆ ಗೌರವ ಕೊಡದಿದ್ದರೆ, ಜನರಿಗೆ ಗೌರವ ಕೊಡುತ್ತಾರಾ? ಕುಮಾರಸ್ವಾಮಿಗೆ ಅವರಾಯ್ತು, ಅವರ ಕುಟುಂಬವಾಯ್ತು.

**ನಿಮ್ಮ ಕಷ್ಟ ಸುಖಕ್ಕೆ ಆಗುವವರು ನಾವು**



### ನಿಮ್ಮ ಸೇವೆ ಮಾಡುತ್ತೇವೆ

**ಇಡೀ ಸರ್ಕಾರ ಯೋಗೇಶ್ವರ್ ಹಾಗೂ ನಿಮ್ಮ ಜತೆಗಿದೆ. ಈ ಅವಕಾಶವನ್ನು ನೀವು ಬಿಡುತ್ತೀರಾ? ಜೆಡಿಎಸ್ ನವರು ಅತ್ತರೆ ಅಳಲಿ, ಕುಣಿದರೆ ಕುಣಿಯಲಿ, ಏನಾದರೂ ಮಾಡಿಕೊಳ್ಳಲಿ. ನಿಮ್ಮ ಕಷ್ಟ ಸುಖಕ್ಕೆ ಆಗುವವರು ನಾವು, ನಿಮ್ಮ ಋಣ ತೀರಿಸುವವರು ನಾವು. ನಾವು ನಿಮ್ಮನ್ನು ಹಾಗೂ ಈ ಜಿಲ್ಲೆ ಬಿಟ್ಟು ಹೋಗುವುದಿಲ್ಲ. ನಿಮ್ಮ ಸೇವೆ ಮಾಡುತ್ತೇವೆ. ಹೀಗಾಗಿ ನೀವು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಮತ ನೀಡಿ, ಆಶೀರ್ವಾದ ಮಾಡಿ. ನಿಮ್ಮ ಜತೆಗೆ ನಾವು ನಿಂತು ನಿಮ್ಮ ಸೇವೆ ಮಾಡುತ್ತೇವೆ.**

**ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ. ಈ ಕೈಗೆ ಅಧಿಕಾರ ಸಿಕ್ಕ ಕಾರಣಕ್ಕೆ ನಾವು ಗ್ಯಾರಂಟಿ ಯೋಜನೆ ನೀಡಿದ್ದೇವೆ. ಐದು ಬೆರಳು ಸೇರಿ ಕೈ ಮುಷ್ಠಿಯಾಯಿತು, ಐದು ಗ್ಯಾರಂಟಿ ಸೇರಿ ಕೈ ಗಟ್ಟಿಯಾಯಿತು. ನಿಮ್ಮ ಕೈಗಳು ಬಲಿಷ್ಠವಾದವು ಎಂದರು**

**-ಡಿ.ಕೆ ಶಿವಕುಮಾರ್, ಡಿಸಿಎಂ**

## ಮಿನಿ ನ್ಯೂಸ್

### ಎತ್ತಿನಹೊಳೆ ಕಾಮಗಾರಿ ಗುಂಡಿಗೆ ಬಿದ್ದು ಇಬ್ಬರು ಬಾಲಕರು ಸಾವು

• ಉದಯವಾಹಿನಿ, ತುಮಕೂರು

ಎತ್ತಿನಹೊಳೆ ಕಾಮಗಾರಿ ಗುಂಡಿಗೆ ಬಿದ್ದು ಇಬ್ಬರು ಬಾಲಕರು ಸಾವನ್ನಪ್ಪಿದ ಘಟನೆ ತಿಪಟೂರು ತಾಲ್ಲೂಕಿನ ಹುಚ್ಚನಹಟ್ಟಿ ಗ್ರಾಮದ ಸಮೀಪ ನಡೆದಿದೆ.ಎತ್ತಿನಹೊಳೆ ನಾಲೆಯ ಕಾಮಗಾರಿಗೆ ತೆಗೆದಿದ್ದ ಗುಂಡಿಗೆ ಬಿದ್ದು ಇಬ್ಬರು ಮೃತಪಟ್ಟಿದ್ದಾರೆ.ಹುಚ್ಚನಹಟ್ಟಿ ಗ್ರಾಮದ ಯದುವೀರ್ (8) ಮನೋಹರ್ (10) ಮೃತರು ಎಂದು ಗುರುತಿಸಲಾಗಿದೆ. ಹುಚ್ಚನಹಟ್ಟಿ ಗ್ರಾಮದ ಬಳಿ ಎತ್ತಿನಹೊಳೆ ಕಾಮಗಾರಿ ನಡೆಯುತ್ತಿದ್ದು, ಆಟವಾಡುತ್ತಾ ಹೋದ ಮಕ್ಕಳು ಗುಂಡಿಗೆ ಬಿದ್ದಿರುವ ಶಂಕೆ ವ್ಯಕ್ತವಾಗಿದೆ. ಶಾಲೆಗೆ ಹೋಗಿದ್ದ ಮಕ್ಕಳು ನಾಪತ್ತೆಯಾಗಿದ್ದರು. ಆತಂಕಗೊಂಡ ಪೋಷಕರು ತಿಪಟೂರು ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ನಂತರ ಶೋಧ ನಡೆಸಿದಾಗ ಬಾಲಕರ ಶವ ಪತ್ತೆಯಾಗಿದೆ.

### 3 ಅಂತಸ್ತಿನ ಕಟ್ಟಡ ಏಕಾಏಕಿ ಕುಸಿತ

• ಉದಯವಾಹಿನಿ, ಬಂಗಾರಪೇಟೆ

ವಾಲಿದ್ದ ಮನೆಯು ಶುಕ್ರವಾರ ಏಕಾಏಕಿ ಕುಸಿದು ಬಿದ್ದಿದೆ.ಮೂರು ಅಂತಸ್ತಿನ ಕಟ್ಟಡ ಇದಾಗಿದ್ದು, ಮೊದಲೇ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದರಿಂದ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಪಟ್ಟಣದ ಕೆಇಬಿ ರಸ್ತೆಯಲ್ಲಿದ್ದ ಬೂದಿಕೋಟೆ ರಾಜ್ ಕುಮಾರ್ ಎಂಬುವರಿಗೆ ಸೇರಿದ ಕಟ್ಟಡ ಇದಾಗಿದೆ. ಮುಂಜಾನೆ ಕಟ್ಟಡ ವಾಲುತ್ತಿದ್ದಂತೆ ಮನೆಯಲ್ಲಿದ್ದವರು ಹೊರಗೆ ಓಡಿ ಬಂದಿದ್ದಾರೆ. ಮೂರು ಕುಟುಂಬಗಳು ನೆಲೆಸಿದ್ದವು.ಅಲ್ಲದೇ, ಅಗ್ನಿಶಾಮಕ ಸಿಬ್ಬಂದಿ ಹಾಗೂ ಬೆಸ್ಕಾಂ ಸಿಬ್ಬಂದಿಗೂ ಮಾಹಿತಿ ನೀಡಿದ್ದಾರೆ. ತಕ್ಷಣ ಸ್ಥಳಕ್ಕೆ ಭೇಟಿ ನೀಡಿದ ಅಗ್ನಿಶಾಮಕ ಸಿಬ್ಬಂದಿ ಹಾಗೂ ಪೊಲೀಸರು ಸುತ್ತಮುತ್ತ ಇದ್ದ ಜನರನ್ನು ದೂರ ಕಳುಹಿಸಿದರು.

### ಬಸ್ ಪಲ್ಟಿ: 10ಕ್ಕೂ ಹೆಚ್ಚು ಜನರಿಗೆ ಗಾಯ

• ಉದಯವಾಹಿನಿ ಹನೂರು

ಕಾರಿನ ಮೇಲೆ ಖಾಸಗಿ ಬಸ್ ಪಲ್ಟಿಯಾದ ಪರಿಣಾಮ 10ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ಶುಕ್ರವಾರ ತಾಲ್ಲೂಕಿನ ಲೊಕ್ಕನಹಳ್ಳಿ ಗ್ರಾಮದ ಸಮೀಪದಲ್ಲಿರುವ ಹೊಸದೊಡ್ಡಿಯಲ್ಲಿ ನಡೆದಿದೆ. ಒಡೆಯರ ಪಾಳ್ಯದಿಂದ ಹನೂರು ಕೊಳ್ಳೇಗಾಲ ಮಾರ್ಗವಾಗಿ ತೆರಳುತ್ತಿದ್ದ ಭ್ರಮರಾಂಭ ಹೆಸರಿನ ಖಾಸಗಿ ಬಸ್ ರಾಮಪುರದಿಂದ ತಮಿಳುನಾಡಿನ ಕಡೆಗೆ ತೆರಳುತ್ತಿದ್ದ ಕಾರಿನ ಮೇಲೆ ಪಲ್ಟಿಯಾಗಿದೆ.

ಹೊಸದೊಡ್ಡಿ ಸಮೀಪದ ತಿರುವಿನಲ್ಲಿ ಬಸ್ ಚಾಲಕನ ನಿಯಂತ್ರಣ ತಪ್ಪಿದ್ದು ದುರ್ಘಟನೆಗೆ ಕಾರಣ ಎನ್ನಲಾಗಿದೆ.

ಘಟನೆಯಲ್ಲಿ ಕಾರು, ಬಸ್‌ನಲ್ಲಿದ್ದ ಹಲವರಿಗೆ ಗಾಯಗಳಿವೆ. ಅವರನ್ನು ಹೋಲಿಕ್ರಾಸ್ ಆಸ್ಪತ್ರೆ ಹಾಗೂ ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆಗೆ ದಾಖಲಿಸಲಾಗಿದೆ.ಅಪಘಾತ ಸುದ್ದಿ ತಿಳಿಯುತ್ತಿದ್ದಂತೆ ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆಗೆ ಜಿಲ್ಲಾ ವೈದ್ಯಾಧಿಕಾರಿ ಡಾ.ಚಿದಂಬರಂ ಭೇಟಿನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು.ಒಬ್ಬರಿಗೆ ತಲೆಯ ಭಾಗಕ್ಕೆ ಗಂಭೀರ ಪೆಟ್ಟಾಗಿದ್ದು ಉಳಿದವರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ ಎಂದು ವೈದ್ಯರು ತಿಳಿಸಿದ್ದಾರೆ.ಹನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮಂಡ್ಯ ಜಿಲ್ಲಾ ಪೊಲೀಸ್ ಇಲಾಖೆಯಿಂದ ಕ್ರೈಂ ತಡೆಗೆ 'ಹೆಲ್ಪ್‌ಲೈನ್' ಆರಂಭ

• ಉದಯವಾಹಿನಿ ಮಂಡ್ಯ

ಜಿಲ್ಲಾ ಪೊಲೀಸ್ ಇಲಾಖೆಯಿಂದ ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇರಿಸಿದೆ. ಮಂಡ್ಯ ಜಿಲ್ಲಾ ಪೊಲೀಸ್ ಇಲಾಖೆಯಿಂದ ಇದಕ್ಕಾಗಿ ಹೆಲ್ಪ್ ಲೈನ್ ನಂಬರ್ ಆರಂಭಿಸಿದೆ. ಈ ಬಗ್ಗೆ ಮಂಡ್ಯ ಜಿಲ್ಲಾ ಪೊಲೀಸ್ ಇಲಾಖೆಯಿಂದ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, ಜಿಲ್ಲೆಯಾದ್ಯಂತ ಕಾನೂನು ಬಾಹಿರವಾಗಿ ಇಸ್ಪಿಟ್, ಜೂಜಾಟ, ಕ್ರಿಕೆಟ್ ಬೆಟ್ಟಿಂಗ್, ಗಾಂಜಾ ಸೇರಿದಂತೆ ಇತರೆ ಮಾದಕ ವಸ್ತುಗಳ ಮಾರಾಟ ಮತ್ತು ಮದ್ಯ ಮಾರಾಟ ಮಾಡುವವರ ಮಾಹಿತಿಗಳನ್ನು ಸಾರ್ವಜನಿಕರು ನೀಡಲು ಹೆಲ್ಪ್ ಲೈನ್ ನಂಬರ್ ಆರಂಭಿಸಿರುವುದಾಗಿ ತಿಳಿಸಿದೆ.

ಸಾರ್ವಜನಿಕರು ಜಿಲ್ಲಾ ಪೊಲೀಸ್ ಕಚೇರಿಯ 08232-227100 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ, ಜಿಲ್ಲೆಯಲ್ಲಿನ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಸಹಕರಿಸುವಂತೆ ಕೋರಿದ್ದಾರೆ. ಮಾಹಿತಿ ನೀಡುವವರ ಹೆಸರುಗಳನ್ನು ಗೌಪ್ಯವಾಗಿ ಇಡಲಾಗುವುದು ಎಂಬುದಾಗಿ ಜಿಲ್ಲಾ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

### ಯೋಗ ಶಿಕ್ಷಕಿಯ ಮೇಲೆ ಅತ್ಯಾಚಾರವಾಗಿಲ್ಲ ಎಸ್.ಪಿ ಕುಶಲ್ ಚೌಕ್ಸೆ ಸ್ಪಷ್ಟನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ



ಬೆಂಗಳೂರು ಮೂಲದ ಯೋಗ ಶಿಕ್ಷಕಿಯನ್ನು ಅಪಹರಿಸಿ ಬಳಿಕ ಅತ್ಯಾಚಾರಕ್ಕೆ ಯತ್ನಿಸಿ ಗುಂಡಿ ತೋಡಿ ಜೀವಂತ ಸಮಾಧಿ ಮಾಡಿರುವ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ಚಿಕ್ಕಬಳ್ಳಾಪುರದ ಎಸ್ ಪಿ ಕುಶಲ್ ಚೌಕ್ಸೆ ಅವರು, ಯೋಗ ಶಿಕ್ಷಕಿಯ ಮೇಲೆ ಅತ್ಯಾಚಾರ ನಡೆದಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಯೋಗ ಶಿಕ್ಷಕಿಯನ್ನು ಅಪಹರಿಸಿ ಜೀವಂತ ಸಮಾಧಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ದೂರುದಾರ ಮಹಿಳೆ ಯೋಗ ಶಿಕ್ಷಕಿಯ ಮೇಲೆ ಅತ್ಯಾಚಾರವಾಗಿಲ್ಲ. ದೂರುದಾರ ಮಹಿಳೆಗೆ ಆ ಸಂದರ್ಭದಲ್ಲಿ ಶವಾಸನ ನೆರವಾಗಿದೆ. ಆರೋಪಿಗಳು ಕತ್ತು ಹಿಸುಕಿದಾಗ ಉಸಿರಾಟ ನಿಲ್ಲಿಸಿದಂತೆ ಶಿಕ್ಷಕಿ ನಟಿಸಿದ್ದಾರೆ.ಮಹಿಳೆಯ ಗುರುತು ಸಿಗದಂತೆ ಬಟ್ಟೆ ಮತ್ತು ಚಿನ್ನಾಭರಣ ಕಿತ್ತುಕೊಂಡಿದ್ದರು. ರಾತ್ರಿ ಆಗಿದ್ದರಿಂದ ಚಿಕ್ಕದಾಗಿ ಗುಂಡಿ ತೋಡಿ ಮುಚ್ಚಿ ಅಲ್ಲಿಂದ ಪರಾರಿಯಾಗಿದ್ದಾರೆ. ಪರಾರಿಯಾಗಿದ್ದ ಸತೀಶ್ ರೆಡ್ಡಿ, ಬಿಂದು, ರಮಣರೆಡ್ಡಿ, ರವಿಚಂದ್ರನ್, ನಾಗೇಂದ್ರ ಹಾಗೂ ಬಾಲಕನನ್ನು ಬಂಧಿಸಿರುವಾಗಿ ಚಿಕ್ಕಬಳ್ಳಾಪುರ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ಮಾಹಿತಿ ನೀಡಿದ್ದಾರೆ.

ನಾಲ್ಕು ಜನ ದುಷ್ಕರ್ಮಿಗಳ ತಂಡ ಈ ಯೋಗ ಶಿಕ್ಷಕಿಯನ್ನು ಬೆಂಗಳೂರಿನ ಕೆಆರ್ ಪುರಂನಲ್ಲಿ ಅಪಹರಣ ಮಾಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದ್ದು, ಸಂಜೆಯ ತನಕ ಬೆಂಗಳೂರನ್ನು ಸುತ್ತಾಡಿದ್ದಾರೆ. ಇದಾದ ಬಳಿಕ ಆಕೆಯ ಮೇಲೆ ಅತ್ಯಾಚಾರಕ್ಕೆ ಪ್ರಯತ್ನಿಸಿದ್ದಾರೆ. ಈ ರೀತಿ ಒಂಟಿ ಮಹಿಳೆಯನ್ನು ಅಪಹರಣ ಮಾಡಿ, ಅತ್ಯಾಚಾರಕ್ಕೆ ಪ್ರಯತ್ನಿಸಿ ಆಕೆಯ ಮೇಲೆ ನಾಲ್ವರ ಗುಂಪು ಹಲ್ಲೆ ಮಾಡಿ, ಆಕೆಯನ್ನು ಜೀವಂತ ಸಮಾಧಿ ಮಾಡಿದ ವೇಳೆ, ಯುವತಿ ಪ್ರಾಣ ಹೋದಂತೆ ನಟಿಸಿದ್ದಾರೆ. ಆ ನಂತರ ಸಮಾಧಿಯಿಂದ ಎದ್ದು ಬಂದಿದ್ದಾರೆ.ತನ್ನನ್ನು ಅಪಹರಿಸಿದ್ದ ನಾಲ್ವರು ಅಲ್ಲಿಂದ ಹೊರಟ ನಂತರ, ಅರೆ ಬೆತ್ತಲಾಗಿಯೇ ರಾತ್ರಿಯಿಡಿ ನಡೆದುಕೊಂಡು ಸನಿಹದ ದಿಬ್ಬೂರಹಳ್ಳಿಗೆ ಶಿಕ್ಷಕಿ ಬಂದಿದ್ದಾರೆ.

# ಅಂತರಾಳದಿಂದ.. EDITORIAL

## ಗವಾಕ್ಷಿಯೊಳಗಿಂದ ಬಂದ ಟ್ರಂಪ್

ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಅವರ ಬೆಂಬಲಿಗರು ಸಂಸತ್‌ಗೆ ನುಗ್ಗುವ ಪ್ರಯತ್ನ ನಡೆಸಿದ್ದರು. ಈ ಸಂಬಂಧವಾಗಿ ಟ್ರಂಪ್ ಬಳಿಕ ಸುದೀರ್ಘ ವಿಚಾರಣೆಯನ್ನು ಎದುರಿಸಿದ್ದರು. ಸಂಸತ್‌ನಲ್ಲಿ ವಾಗ್ದಂಡನೆಯ ಅವಮಾನದಿಂದ ಕೊನೆಯ ಕ್ಷಣದಲ್ಲಿ ಪಾರಾಗಿದ್ದರು. ಯಾವ ಜನಾದೇಶವನ್ನು ಟ್ರಂಪ್ ಪ್ರಶ್ನಿಸಿ ಪ್ರಜಾಪ್ರಭುತ್ವವನ್ನು ಬುಡಮೇಲು ಮಾಡಲು ಯತ್ನಿಸಿ ದ್ದರೋ ಅದೇ ಜನಾದೇಶದ ಬಲದಿಂದ ಟ್ರಂಪ್ ಎಲ್ಲಾ ಕಳಂಕಗಳಿಂದ ಮುಕ್ತರಾಗಿ ಅಮೆರಿಕದ 47ನೇ ಅಧ್ಯಕ್ಷರಾಗಿ ಮತ್ತೆ ಆಯ್ಕೆಯಾಗಿದ್ದಾರೆ. ಅಮೆರಿಕದ ಇತಿಹಾಸದಲ್ಲಿಯೇ, ಅಧ್ಯಕ್ಷನಾಗಿ ಬಳಿಕ ಚುನಾವಣೆಯಲ್ಲಿ ಸೋತು, ಮತ್ತೆ ಸ್ಪರ್ಧಿಸಿ ಅಮೆರಿಕದ ಅಧ್ಯಕ್ಷ ಹುದ್ದೆಯನ್ನು ತನ್ನದಾಗಿಸಿಕೊಂಡ ದಾಖಲೆಯನ್ನು ಟ್ರಂಪ್ ಬರೆದಿದ್ದಾರೆ. ಅತ್ಯಂತ ಹಿರಿಯ ವಯಸ್ಸಿನ ಅಧ್ಯಕ್ಷನಾಗಿಯೂ ಟ್ರಂಪ್ ಗುರುತಿಸಲ್ಪಟ್ಟಿದ್ದಾರೆ.ಪ್ರಧಾನಿ ಮೋದಿಯವರು ಅಮೆರಿಕದ ಸ್ನೇಹಕ್ಕಾಗಿ ಈ ಹಿಂದೆ ಟ್ರಂಪ್‌ನ್ನು ಬಲವಾಗಿ ನೆಚ್ಚಿಕೊಂಡಿದ್ದರು. ಮೋದಿಯವರ ಟ್ರಂಪ್ ಓಲೈಕೆಗೆ ಅಮೆರಿಕದಲ್ಲಿರುವ ಅನಿವಾಸಿ ಭಾರತೀಯರು ತೀವ್ರ ಮುಜುಗರವನ್ನು ಅನುಭವಿಸಿದ್ದರು. ಜಗತ್ತನ್ನು ಕೊರೋನ ಕಾರ್ಮೋಡ ಕವಿದಿದ್ದಾಗ, ನಮಸ್ತೆ ಟ್ರಂಪ್‌ಗಾಗಿ ಭಾರತದ ಅಂತರ್‌ರಾಷ್ಟ್ರೀಯ ಹೆಬ್ಬಾಗಿಲನ್ನು ಕೊರೋನಕ್ಕೆ ತೆರೆದಿಟ್ಟವರು ಪ್ರಧಾನಿ ಮೋದಿ, ಭಾರತ ಅದಕ್ಕಾಗಿ ಬಳಿಕ ಭಾರೀ ಬೆಲೆಯನ್ನು ತೆತ್ತಿತು. ನಮಸ್ತೆ ಟ್ರಂಪ್ ಬಳಿಕ 'ನಮಸ್ತೆ ಕೊರೋನಾ' ಆಟ ಕುಖ್ಯಾತವಾಯಿತು.

> **ಹೋದೆಯಾ ಎಂದು ಕೇಳಿದರ್ ಬಂದೆ ಗವಾಕ್ಷಿಯಿಂದ ಎಂದರಂತೆ ಡೊನಾಲ್ಡ್ ಟ್ರಂಪ್. 2020ರ ನವೆಂಬರ್‌ನಲ್ಲಿ ಅಮೆರಿಕದಲ್ಲಿ ನಡೆದ ಚುನಾವಣೆಯಲ್ಲಿ ಭಾರತದ ಪ್ರಧಾನಿ ತನ್ನ ಸ್ಥಾನದ ಘನತೆಯನ್ನು ಮರೆತು, 'ಅಬ್ ಕಿ ಬಾರ್ ಟ್ರಂಪ್ ಸರಕಾರ್ ಎಂದು ಸಾಮಾನ್ಯ ಕಾರ್ಯಕರ್ತನಾಗಿ ಟ್ರಂಪ್ ಪರ ದುಡಿದಿದ್ದರೂ, ಅಲ್ಲಿನ ಜನತೆ ಸಾರಾಸಗಟಾಗಿ ತಿರಸ್ಕರಿಸಿದ್ದರು. ಟ್ರಂಪ್ ವಿರುದ್ಧ ಡೆಮಾಕ್ರಟಿಕ್ ಪಕ್ಷದ ಜೋ ಬೈಡನ್ ಭಾರೀ ವಿಜಯವನ್ನು ಸಾಧಿಸಿದ್ದರು. ಇಷ್ಟಾದರೂ, ಜನಾದೇಶವನ್ನು ಒಪ್ಪಲು ಟ್ರಂಪ್ ಸಿದ್ಧರಿರಲಿಲ್ಲ. ತನ್ನ ಬೆಂಬಲಿಗರ ಬಲದಿಂದ ಸಂಸತ್ ನಲ್ಲಿ ಬೇರೂರುವ ಪ್ರಯತ್ನ ನಡೆಸಿದ್ದರು.**

ಮೋದಿಯೂ ಇದಕ್ಕಾಗಿ ಸಾಕಷ್ಟು ಟೀಕೆಗಳನ್ನು ಎದುರಿಸಿದ್ದರು. ತನ್ನ ಮೊದಲ ಅಧಿಕಾರಾವಧಿಯಲ್ಲಿ ಟ್ರಂಪ್ ಮೇಲ್ನೋಟಕ್ಕೆ ಭಾರತದ ಮಿತ್ರನಂತೆ ವರ್ತಿಸಿದ್ದರೂ, ಅಮೆರಿಕದ ಹಿತಾಸಕ್ತಿಯನ್ನು ಎತ್ತಿಹಿಡಿಯುವ ಸಂದರ್ಭದಲ್ಲಿ ಯಾವ ರಾಜಿಯನ್ನು ಮಾಡಿಕೊಂಡಿರಲಿಲ್ಲ. ತೈಲ ಒಪ್ಪಂದ, ರಕ್ಷಣಾ ಇಲಾಖೆಗೆ ಸಂಬಂಧಿಸಿದ ಒಪ್ಪಂದಗಳಲ್ಲಿ ಭಾರತ ತಟಸ್ಥ ನೀತಿಯನ್ನು ಅನುಸರಿಸುತ್ತಾ ಬಂದಿದೆ. ಆದರೆ ಇದು ಟ್ರಂಪ್‌ಗೆ ಇಷ್ಟದ ಸಂಗತಿಯಾಗಿರಲಿಲ್ಲ ಮಾತ್ರವಲ್ಲ ಯುಎಸ್ ತಂತ್ರಜ್ಞಾನ ಮತ್ತು ರಕ್ಷಣಾ ಇಲಾಖೆಗೆ ಸಂಬಂಧಿಸಿದ ಒಪ್ಪಂದಗಳಿಗೆ ಸಹಿ ಹಾಕಲು ಅವರು ಭಾರತಕ್ಕೆ ಪರೋಕ್ಷ ಒತ್ತಡಗಳನ್ನು ಹೇರುತ್ತಾ ಬಂದಿದ್ದರು. ರತ್ನ, ಇರಾನ್ ಜೊತೆಗೆ ತೈಲ ಸಂಬಂಧಿ ಒಪ್ಪಂದಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು. ಅಮೆರಿಕದ ಉತ್ಪನ್ನಗಳಿಗೆ ಮುಕ್ತ ಮಾರುಕಟ್ಟೆಯನ್ನು ತೆರೆದಿಡುವ ಬಗ್ಗೆಯೂ ದೊಡ್ಡಣ್ಣನಂತೆ ವರ್ತಿಸಿದ್ದರು. ಟ್ರಂಪ್‌ನ ಸ್ನೇಹ ಭಾರತಕ್ಕೆ ನಿರೀಕ್ಷಿಸಿದ ಫಲವನ್ನು ನೀಡಿಲ್ಲ ಎನ್ನುವುದು ಮೋದಿ ಸರಕಾರಕ್ಕೂ ಅರ್ಥವಾದಂತಿದೆ. ಅದುದರಿಂದಲೇ ಟ್ರಂಪ್ ಗೆಲುವು ಮೋದಿ ಪಾಳೆಯದಲ್ಲಿ ಈ ಬಾರಿ ವಿಶೇಷ ಸಂಭ್ರಮವನ್ನೇನು ಸೃಷ್ಟಿಸಿಲ್ಲ. ಹಾಗೆ ನೋಡಿದರೆ ಟ್ರಂಪ್‌ಗೆ ಎದುರಾಳಿಯಾಗಿದ್ದವರು ಭಾರತೀಯ ಮೂಲದ ಕಮಲಾ ಹ್ಯಾರಿಸ್ ಅವರು ಗೆದ್ದಿದ್ದರೆ, ಅದು ಪರೋಕ್ಷವಾಗಿ ಭಾರತಕ್ಕೆ ಪೂರಕವಾಗಿರುತ್ತಿತ್ತು. ಆದರೆ ಅಮೆರಿಕದ ಬಿಳಿಯ ಜನರು ಕಮಲಾ ಅವರನ್ನು ಸೋಲಿಸುವ ಮೂಲಕ ಕಂದು ವರ್ಣೀಯರನ್ನೂ ಪರೋಕ್ಷವಾಗಿ ತಿರಸ್ಕರಿಸಿದ್ದಾರೆ. ಬಿಳಿ ಜನಾಂಗೀಯವಾದಕ್ಕೆ ಈ ಮೂಲಕ ಬಲ ಬಂದಿದೆ ಎನ್ನುವ ವಾದವೂ ಇದೆ. ಮಧ್ಯಪ್ರಾಚ್ಯದ ರಾಜಕೀಯ ಬೆಳವಣಿಗೆಗಳೂ ಈ ಬಾರಿಯ ಚುನವಾವಣೆಯಲ್ಲಿ ಪರಿಣಾಮವನ್ನು ಬೀರಿವೆ ಬೈಡನ್‌ನ ಇಸ್ರೇಲ್ ಪರವಾದ ನಿರ್ಲಜ್ಜ ನೀತಿಗೆ ದಕ್ಕಿದ ಸೋಲು ಇದು ಎಂದೂ ಫಲಿತಾಂಶವನ್ನು ವಿಶ್ಲೇಷಿಸಲಾಗುತ್ತದೆ. ಅಮೆರಿಕದ ಸರ್ವ ಹಿತಾಸಕ್ತಿಗಳನ್ನು ಬಲಿಕೊಟ್ಟು ಇಸ್ರೇಲ್‌ನ ಯುದ್ಧದಾಹಿ ನಡೆಯ ಜೊತೆಗೆ ಹೆಜ್ಜೆ ಹಾಕಿರುವುದು ಡೆಮಾಕ್ರಟಿಕ್ ಪಕ್ಷದ ಜನರನ್ನು ತೀವ್ರ ಕಳವಳಕ್ಕೀಡು ಮಾಡಿತ್ತು.

ಇದು ಅಮೆರಿಕದ ಹಿತಾಸಕ್ತಿಯನ್ನು ಬಲಿಕೊಡಬಹುದು ಎನ್ನುವ ಆತಂಕ ಅಲ್ಲಿನ ಬಹುತೇಕ ಜನರನ್ನು ಕಾಡಿತ್ತು. ಬೈಡನ್‌ಗೆ ಹೋಲಿಸಿದರೆ, ಅಮೆರಿಕದ ಬಂಡವಾಳ ಶಾಹಿ ಹಿತಾಸಕ್ತಿಗೆ ಪೂರಕವಾಗಿ ನಿರ್ಧಾರಗಳನ್ನು ತಳೆಯುತ್ತಾ ಬಂದಿರುವ ಟ್ರಂಪ್ ಎಷ್ಟೋ ವಾಸಿ ಎಂದು ಅವರಿಗೆ ಅನ್ನಿಸಿದರೆ ಅಚ್ಚರಿಯಿಲ್ಲ ಮಧ್ಯಪ್ರಾಚ್ಯದ ಯುದ್ಧ ದಿನೇ ದಿನೇ ಹೊಸ ಹೊಸ ತಿರುವುಗಳನ್ನು ಪಡೆಯುತ್ತಾ ಬರುತ್ತಿತ್ತು ಯಾವತ್ತು ಬೇಕಾದರೂ ಅದು ಮೂರನೇ ಮಹಾಯುದ್ಧಕ್ಕೆ ಜಗತ್ತನ್ನು ತಳ್ಳಬಹುದು ಎನ್ನುವ ಆತಂಕ ಬಹುತೇಕ ಜನರಾಗಿತ್ತು. ಅಮೆರಿಕದ ಉದ್ಯಮ ಪತಿಗಳಿಗೆ ತಮ್ಮ ಹಿತಾಸಕ್ತಿಗೆ ಪೂರಕವಾದ ನೀತಿಗಳ ಅಗತ್ಯವಿದೆಯೇ ಹೊರತು, ಅನಗತ್ಯ ಯುದ್ಧಗಳಿಂದ ಎದುರಾಗುವ ಆರ್ಥಿಕ ಬಿಕ್ಕಟ್ಟು ಬೇಡವಾಗಿತ್ತು. ಈ ಹಿಂದೆ, ಅಮೆರಿಕಕ್ಕೆ ಪೂರಕವಾಗಿ ಮಧ್ಯಪ್ರಾಚ್ಯವನ್ನು ಟ್ರಂಪ್ ನಿಭಾಯಿಸಿದ ರೀತಿ ಅಲ್ಲಿನ ಕಾರ್ಪೊರೇಟ್ ಶಕ್ತಿಗಳಿಗೆ ಇಷ್ಟವಾಗಿತ್ತು. ಆದರೆ ಬೈಡನ್‌ನ ನಿಲುವು ಇಡೀ ಜಗತ್ತನ್ನು ನಿಧಾನಕ್ಕೆ ಅಮೆರಿಕದ ವಿರುದ್ಧ ನಿಲ್ಲುವಂತೆ ಮಾಡುವ ಸಾಧ್ಯತೆಗಳಿದ್ದವು. ಇರಾನ್- ಇಸ್ರೇಲ್ ನಡುವಿನ ಯುದ್ಧ ಸ್ಫೋಟಗೊಂಡದ್ದೇ ಆದರೆ, ಅದು ಅಮೆರಿಕದ ಮೇಲೆಯೂ ಪರಿಣಾಮ ಬೀರಲಿತ್ತು ಕಳೆದ ಜುಲೈ ತಿಂಗಳಲ್ಲಿ ಟ್ರಂಪ್ ಬಹಿರಂಗವಾಗಿಯೇ ಯುದ್ಧ ನಿಲ್ಲಬೇಕು ಎಂದು ಕರೆ ನೀಡಿದ್ದರು. ಆದರೆ ಯುದ್ಧಕ್ಕೆ ಸಂಬಂಧಿಸಿ ಬೈಡನ್ ನಿಲುವು ಭಿನ್ನವಾಗಿತ್ತು. ತನ್ನ ಅಧಿಕಾರದ ಅವಧಿಯಲ್ಲಿ ಫೆಲೆಸ್ತೀನ್ ವಿವಾದವನ್ನು ಮುನ್ನೆಲೆಗೆ ಬರದಂತೆ ನೋಡಿಕೊಂಡು ಇಸ್ರೇಲನ್ನು ಅರಬ್ ಜಗತ್ತಿನ ಜೊತೆಗೆ ಜೋಡಿಸಲು ಸಾಕಷ್ಟು ತಂತ್ರಗಳನ್ನು ಹೆಣೆದವರು ಟ್ರಂಪ್ ಅಮೆರಿಕಕ್ಕೆ ಬೇಕಾಗಿದ್ದು ಕೂಡ ಇದೇ ಆಗಿತ್ತು ಅಮೆರಿಕದ ನೇತೃತ್ವದಲ್ಲಿ ಇಸ್ರೇಲ್ ಮತ್ತು ಅರಬ್ ಒಕ್ಕೂಟಗಳ ನಡುವೆ ನಡೆದ ಒಪ್ಪಂದಗಳು ಪಶ್ಚಿಮ ಏಶ್ಯದ ಮೇಲೆ ನಿಯಂತ್ರಣ ಸಾಧಿಸಲು ಬಹುದೊಡ್ಡ ರಾಜತಂತ್ರ ನಡೆಯಾಗಿತ್ತು ಇರಾನ್-ರಶ್ಯ-ಚೀನಾ ಇವುಗಳ ನಡುವಿನ ಮೈತ್ರಿಗೆ ಪ್ರತಿಯಾಗಿ ಅವರು ಇಸ್ರೇಲ್‌ನ್ನು ಅರಬ್ ರಾಷ್ಟ್ರಗಳಿಗೆ ಹತ್ತಿರವಾಗಿಸುವ ಅವರ ಪ್ರಯತ್ನ ಭವಿಷ್ಯದಲ್ಲಿ ಎಷ್ಟರಮಟ್ಟಿಗೆ ಸಾಧ್ಯವಾಗಲಿದೆ ಎನ್ನುವುದನ್ನು ಕಾದು ನೋಡಬೇಕು.

## ನಾನು ಅನ್ನುವುದನ್ನು ಬಿಟ್ಟಾಗ, ವ್ಯಕ್ತಿ ಪರಿಪೂರ್ಣನಾಗುತ್ತಾನೆ..!



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



**ಸಾಧನೆಯ ಬಗ್ಗೆ ಅತೀವ ಅಭಿಮಾನ**

ಅಹಂಕಾರವನ್ನು ಗೆಲ್ಲದೇ ಹೋದರೆ, ಎಷ್ಟೇ ಸಾಧನೆ ಮಾಡಿದರೂ ಅದು ಕ್ಷುಲ್ಲಕವೇ ಆಗುತ್ತದೆ. ಯಾವುದೇ ಸಾಧಕನಿಗೆ ಅಹಂಕಾರ ಅತಿ ದೊಡ್ಡ ತೊಡಕು. ಈ ನಿಟ್ಟಿನಲ್ಲಿ ನಾರದರ ಅಹಂಕಾರ ಕರಗಿದ ಸ್ವಾರಸ್ಯಕರ ಕತೆಯೊಂದು ಇಲ್ಲಿದೆ. ಇದು ನಮಗೆಲ್ಲ ಪಾಠವಾಗಲಿ.

ಒಮ್ಮೆ ದೇವರ್ಷಿ ನಾರದರಿಗೆ ತಮ್ಮ ಸಾಧನೆಯ ಬಗ್ಗೆ ಅತೀವ ಅಭಿಮಾನ ಉಂಟಾಯಿತು.

ತನ್ನಂಥ ಭಕ್ತರೂ ತಾಪಸಿಗರೂ ಯಾರಿಲ್ಲವೆಂಬ ಸ್ವಪ್ರಶಂಸೆ ಆರಂಭಿಸಿದರು. ಕಂಡವರೆಲ್ಲರ ಎದುರು ತಾವು ಸದಾ ಕಾಲ ಶ್ರೀ ಹರಿಯ ಧ್ಯಾನ ಮಾಡುವುದನ್ನೂ ಆ ಮೂಲಕ ಸಷ್ಟಿಯಲ್ಲೇ ಇನ್ನಾರೂ ಸಂಪಾದಿಸದಷ್ಟು ಪುಣ್ಯ ಸಂಪಾದನೆ ಮಾಡಿರುವುದನ್ನೂ ಹೇಳಿಕೊಳ್ಳುತ್ತಿದ್ದರು.

ಮೊದಮೊದಲು ನಾರದರ ಮಾತುಗಳನ್ನು ಕೇಳಿ ಸ್ಪಂದಿಸುತ್ತಿದ್ದವರಿಗೆ ಬರಬರುತ್ತ ಆ ಬಗ್ಗೆ ಜುಗುಪ್ಸೆ ಉಂಟಾಗತೊಡಗಿತು. ನಾರದರ ಈ ವರ್ತನೆಯ ಬಗ್ಗೆ ಶ್ರೀಮನ್ನಾರಾಯಣನವರೆಗೂ ದೂರು ಹೋಯಿತು. ಲೋಕ ಸಂಚಾರಿಯಾಗಿದ್ದ ನಾರದರು ಬಹಳ ದಿನಗಳ ನಂತರ ವೈಕುಂಠಕ್ಕೆ ಬಂದರು. ಕ್ಷೀರಸಾಗರದಲ್ಲಿ ಆದಿಶೇಷನ ಮೇಲೆ ಪವಡಿಸಿದ್ದ ಲಕ್ಷ್ಮೀ ನಾರಾಯಣರಿಗೆ ಕೈಮುಗಿದು ಯಥಾಪ್ರಕಾರ ತನ್ನದೇ ಗುಣಗಾನಕ್ಕೆ ಶುರುವಿಟ್ಟರು. ಆಗ ಲಕ್ಷ್ಮೀ ದೇವಿಯು, '' ನಾರದಾ, ನಿನ್ನನ್ನು ಮೀರಿಸಿದ ಭಕ್ತರಿಲ್ಲವೆಂದು ಅಷ್ಟು ದೃಢವಾಗಿ ಹೇಗೆ ಹೇಳುತ್ತೀ? '' ಎಂದು ಕೇಳಿದಳು. ಆಗ ನಾರದರು, ತಾಯಿ, ಬೇಕಿದ್ದರೆ ಪರೀಕ್ಷಿಸಿ ನೋಡಿ. ನನಗಿಂತ ದೊಡ್ಡ ಹರಿಭಕ್ತ ಸಿಕ್ಕರೆ ನೀವು ಹೇಳುವುದೆಲ್ಲ ಮಾಡಿಯೇನು, ಎಂದುಬಿಟ್ಟರು.

ಆಗ ನಾರಾಯಣನು ನಡೆ ಹಾಗಾದರೆ, ದೇವತೆಗಳನ್ನು ಒರೆಗೆ ಹಚ್ಚುವ.. ಭೂಲೋಕದಲ್ಲಿ ಒಂದು ಸುತ್ತು ಹೊಡೆದುಬರೋಣ, ಎನ್ನುತ್ತ ನಾರದರೊಟ್ಟಿಗೆ ಹೊರಟನು.

> **ಅವರಿಬ್ಬರೂ ವೇಷ ಮರೆಸಿಕೊಂಡು ಒಬ್ಬ ರೈತನ ಮನೆಗೆ ಹೋದರು. ಅವನೊಬ್ಬ ಭಕ್ತರೈತ. ಇವರನ್ನು ಪ್ರೀತಿಯಿಂದ ಉಪಚರಿಸಿ ಆಶ್ರಯ ಕೊಟ್ಟನು. ಅವನು ಸದಾ ನಾರಾಯಣ ನಾರಾಯಣ '' ಎನ್ನುತ್ತ ನಾಮಸ್ಮರಣೆ ಮಾಡುತ್ತಿದ್ದನು. ಅದನ್ನು ತೋರಿಸುತ್ತಾ ಶ್ರೀಹರಿಯು '' ನೋಡಿದೆಯಾ ನಾರದಾ, ನೀನೊಬ್ಬನೇ ಅಲ್ಲ ! ಎಂದನು.**

ಆಗ ನಾರದ ತಾನು ನಿದ್ದೆಯನ್ನೂ ಮಾಡದೆ ನಾಮಸ್ಮರಣೆ ಮಾಡುವ ಹೆಚ್ಚುಗಾರಿಕೆ ತೋಡಿಕೊಂಡನು.

ರೈತನು ಹೊಲ ಉಳುವಾಗ, ನೀರು ಸೇದುವಾಗ ಹೀಗೆ ಪ್ರತಿಯೊಂದು ಕೆಲಸದ ನಡುವೆಯೂ ನಾಮಸ್ಮರಣೆ ಮಾಡುತ್ತಿದ್ದನು. ಇವನ್ನೆಲ್ಲ ನೋಡಿದ ನಾರದ, '' ಇದೇನು ಮಹಾ ಎನ್ನುತ್ತ ಶ್ರೀಹರಿ ತೋರಿದ ನಿದರ್ಶನವನ್ನು ಅವಗಣಿಸಿದನು. ಆಗ ನಾರಾಯಣನು ಒಂದು ನೀರು ತುಂಬಿದ ಗಡಿಗೆಯನ್ನು ನಾರದನ ತಲೆಮೇಲಿಟ್ಟು ಒಂದು ಹನಿಯೂ ಚೆಲ್ಲದಂತೆ ಈ ಬೆಟ್ಟಕ್ಕೆ ಸುತ್ತು ಹೊಡೆದು ಬಾ, ಎಂದನು. ನಾರದರು ಅದರಂತೆ ಗಡಿಗೆಯನ್ನು ಹೊತ್ತು ಜಾಗರೂ ಕತೆಯಿಂದ, ಸ್ವಲ್ಪವೂ ನೀರು ತುಳುಕದ ಹಾಗೆ ಸವಾಲು ಪೂರೈಸಿ ಹೆಮ್ಮೆಯಿಂದ ಬೀಗಿದರು.

ಆಗ ಶ್ರೀ ಹರಿಯು,'' ನಾರದಾ, ಈ ನಡುವೆ ನನ್ನನ್ನು ಎಷ್ಟು ಬಾರಿ ನೆನೆಸಿಕೊಂಡೆ ? ಎಂದು ಕೇಳಿದನು. '' ಒಮ್ಮೆಯೂ ಇಲ್ಲ. ಅದು ಹೇಗೆ ನೆನೆಯಲಿ ? ಗಮನವೆಲ್ಲ ಗಡಿಗೆ ಮೇಲೆಯೇ ಇತ್ತು ! '' ಎಂದನು. ಆಗ ಶ್ರೀಹರಿಯು ರೈತನು ಎಂತಹ ಕಠಿಣ ಕೆಲಸದಲ್ಲಿ ತೊಡಗಿದ್ದಾಗಲೂ ನಾಮಸ್ಮರಣೆ ಮಾಡುವುದನ್ನು ನೆನಪಿಸಿಕೊಟ್ಟನು.

ನಾರದರ ಅಹಂಕಾರ ಕರಗಿತು. ಅಂದಿನಿಂದ ಅವರು ತಮ್ಮನ್ನು ತಿದ್ದಿಕೊಂಡು ಪರಿಪೂರ್ಣ ಸಾಧಕರಾದರು

## ದಯಾನಂದನಗರ ವಾರ್ಡ್‌ನಲ್ಲಿ ಸಕ್ರಿಯ
### ಬಿಜೆಪಿ ಕಾರ್ಯಕರ್ತರಿಗೆ ಸನ್ಮಾನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಶಾಸಕರಾದ ಎಸ್.ಸುರೇಶ್ ಕುಮಾರ್ ರವರ ನೇತೃತ್ವದಲ್ಲಿ ದಯಾನಂದನಗರ ವಾರ್ಡ್ ನಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ ಯಶಸ್ವಿ

**ರಾಜಾಜಿನಗರ ವಿಧಾನಸಭಾ ಕ್ಷೇತ್ರ:** ದಯಾನಂದನಗರ ವಾರ್ಡ್ ನಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನವನ್ನು ಮಾಜಿ ಶಿಕ್ಷಣ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರ ನೇತೃತ್ವದಲ್ಲಿ ಯಶಸ್ವಿಯಾಗಿ ನಡೆಯುತ್ತಿದೆ ಈ ಸಂದರ್ಭದಲ್ಲಿ ಸಕ್ರಿಯ ಸದಸ್ಯತ್ವ ಪಡೆದ 63 ಸದಸ್ಯರಿಗೆ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮ.

ಶ್ರೀಮತಿ ಸಾವಿತ್ರಿ ಸುರೇಶ್ ಕುಮಾರ್ ರವರು ಮತ್ತು ಬಿಬಿಎಂಪಿ ಮಾಜಿ ಸದಸ್ಯರುಗಳಾದ ಎಂ.ಮುನಿರಾಜುರವರು, ಶ್ರೀಮತಿ ಶಕೀಲ ಮುನಿರಾಜುರವರು ಸಕ್ರಿಯ ಬಿಜೆಪಿ ಸದಸ್ಯರಿಗೆ ಪ್ರಮಾಣಪತ್ರ ನೀಡಿದರು. ಮಂಡಲ ಅಧ್ಯಕ್ಷರಾದ ಸುದರ್ಶನ್, ಪ್ರಧಾನ ಕಾರ್ಯದರ್ಶಿ ಗಿರೀಶ್ ಗೌಡ, ಸಹ ಸಂಚಾಲಕ ಆನಂದ್, ಸಂಚಾಲಕರು ಪ್ರವೀಣ್ ರವರು ಉಪಸ್ಥಿತರಿದ್ದರು. ವಿಶ್ವದ ಅತಿದೊಡ್ಡ ಸದಸ್ಯರನ್ನು ಹೊಂದಿರುವ ಪಕ್ಷ ಬಿಜೆಪಿ ಪ್ರಧಾನಿ ನರೇಂದ್ರಮೋದಿರವರು, ಬಿಜೆಪಿ ರಾಷ್ಟ್ರಧ್ಯಕ್ಷ ಜೆ.ಪಿ.ನಡ್ಡಾರವರ ಆದೇಶದ ಮೇರೆಗೆ ಬಿಜೆಪಿ ಸದಸ್ಯತ್ವ ನೋಂದಾಣೆಗೆ ಚಾಲನೆ ನೀಡಿದ ನಂತರ ರಾಜಾಜಿನಗರ ವಿಧಾನಸಭಾ ಕ್ಷೇತ್ರದ ದಯಾನಂದನಗರ ವಾರ್ಡ್ ನಲ್ಲಿ ಪ್ರತಿ ಮನೆಗಳಿಗೆ ಭೇಟಿ ನೀಡಿ ಕೇಂದ್ರ ಬಿಜೆಪಿ ಸರ್ಕಾರದ ಸಾಧನೆ ಮತ್ತು ಯೋಜನೆಗಳು ಕುರಿತು ತಿಳಿಸಿ, ದೇಶ ಅಭಿವೃದ್ಧಿಗೆ ಬಲಿಷ್ಠ ಭಾರತ ನಿರ್ಮಾಣದಲ್ಲಿ ಬಿಜೆಪಿ ಕೇಂದ್ರ ಸರ್ಕಾರದಿಂದ ಮಾತ್ರ ಸಾಧ್ಯ ಎಂದು ತಿಳಿಸಿ ಬಿಜೆಪಿ ಸದಸ್ಯತ್ವ ಮೊಬೈಲ್ ಆಪ್ ನೋಂದಾಣೆ ಮಾಡಲಾಯಿತು. ಬಿಜೆಪಿ ಸದಸ್ಯತ್ವ ಪಡೆದ ಕಾರ್ಯಕರ್ತ ನೂರು ಜನರನ್ನು ಬಿಜೆಪಿ ಸದಸ್ಯರನ್ನ ನೋಂದಾಣೆ ಮಾಡಿದವರನ್ನು ಸಕ್ರಿಯ ಸದಸ್ಯ ಎಂದು ಗುರುತಿಸ ಲಾಗಿದೆ. 100ಸದಸ್ಯರನ್ನು ಬಿಜೆಪಿ ಸದಸ್ಯರನ್ನಾಗಿ ಮಾಡಿದ ಸಕ್ರಿಯ ಸದಸ್ಯನಿಗೆ ಪ್ರಮಾಣ ಪತ್ರ ಮತ್ತು ಅಭಿನಂದನೆ ಕಾರ್ಯಕ್ರಮ. ಬಿಜೆಪಿ ಪಕ್ಷಕ್ಕೆ ಕಾರ್ಯಕರ್ತರೆ ಶಕ್ತಿ, ಸಕ್ರಿಯ ಸದಸ್ಯತ್ವ ಪಡೆದ ಬಿಜೆಪಿ ಕಾರ್ಯಕರ್ತರು ಪಕ್ಷ ಸಂಘಟನೆಗಾಗಿ ಅವರ ಶ್ರಮ ಅಪಾರ.



ಉದಯವಾಹಿನಿ ಚಿತ್ರ

## ಅಮೃತ ಕಲಾ ಮಂದಿರದ 15ನೇ ವಾರ್ಷಿಕೋತ್ಸವದ ಸಂಭ್ರಮ



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

• ಉದಯವಾಹಿನಿ, ವಿಶೇಷ

ಭರತನಾಟ್ಯ ಕ್ಷೇತ್ರದಲ್ಲಿ ಹಲವಾರು ವರ್ಷಗಳಿಂದ ಸಾಧನೆ ಮಾಡುತ್ತಾ ಖ್ಯಾತಿ ಗಳಿಸಿರುವ ವಿದುಷಿ. ಹೆಚ್. ಹರಿಣಿ ಅವರ ಹೆಸರು ಬದ್ಧತೆಯ ನೃತ್ಯ ಗುರುವಾಗಿ, ಉತ್ತಮ ಕಲಾವಿದೆಯಾಗಿ ಮನೆ ಮಾತಾಗಿದೆ.

ನೃತ್ಯಾಭಿನಯದ ವೈಶಿಷ್ಟ್ಯತೆಯಿಂದ ದೇಶದಾದ್ಯಂತ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿರುವ ಹರಿಣಿ ಅವರು ಈಗಾಗಲೇ ಅಸಂಖ್ಯಾತ ನೃತ್ಯ ಕಲಾವಿದರಿಗೆ ಮಾರ್ಗದರ್ಶಕರಾಗಿ ಹೊಸ ಪ್ರತಿಭೆಗಳಿಗೆ ಉತ್ತಮ ತರಬೇತಿ ನೀಡಿ ಉದಯೋನ್ಮುಖ ಕಲಾವಿದರನ್ನು ರೂಪಿಸುತ್ತಿದ್ದಾರೆ.

ಈಗಾಗಲೇ ಅನೇಕ ಪ್ರಶಸ್ತಿಗಳಿಂದ ಪುರಸ್ಕೃತರಾದ ಹರಿಣಿ ಯುವ ಕಲಾವಿದರಿಗೆ ಉತ್ತಮ ಮೇಲ್ಪಂಕ್ತಿಯನ್ನು ಹಾಕಿಕೊಟ್ಟಿದ್ದಾರೆ. ಬಾಲ ಪ್ರತಿಭೆಯಾಗಿದ್ದಾಗಿನಿಂದ ಕಲಾರಸಿಕರ ಗಮನ ಸೆಳೆದಿರುವ ವಿ. ಹರಿಣಿ ನೇತೃತ್ವದ 'ಅಮೃತ ಕಲಾ ಮಂದಿರ' ಕಳೆದ 15 ವರ್ಷಗಳಿಂದ ನಿರಂತರವಾಗಿ ನೃತ್ಯ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದ್ದು, ಉದಯೋನ್ಮುಖ ಕಲಾವಿದರಿಗೆ ವೇದಿಕೆಗಳನ್ನು ಒದಗಿಸಿ ಪ್ರೋತ್ಸಾಹ ನೀಡುತ್ತ ಬಂದಿದೆ. ಹಲವಾರು ರಂಗಪ್ರವೇಶಗಳನ್ನೂ ಮಾಡಿಸಿರುವ ಹರಿಣಿ, ಇದೀಗ ಇದೇ ತಿಂಗಳ 9ನೇ ತಾ. ಶನಿವಾರ ಸಂಜೆ 4. 30ಕ್ಕೆ ನಯನ ಆಡಿಟೋರಿಯಂನಲ್ಲಿ ತಮ್ಮ ನೃತ್ಯಸಂಸ್ಥೆ ಅಮೃತ ಕಲಾ ಮಂದಿರದ 15ನೇ ವಾರ್ಷಿ ಕೋತ್ಸವದ ನೃತ್ಯ ಸಂಭ್ರಮವನ್ನು ಹಮ್ಮಿಕೊಂಡಿದ್ದಾರೆ.

ಅಂದು- ವಿವಿಧ ವಯೋಮಾನದ ಕಲಾವಿದರ ಪ್ರತಿಭೆಯ ಅನಾವರಣವಾಗಲಿದ್ದು, ಸುಮನೋಹರ ನೃತ್ಯಾವಳಿಗಳಿಂದ ಕಲಾರಸಿಕರ ಕಣ್ಮನ ತುಂಬುವ ಈ ವರ್ಣರಂಜಿತ ಕಾರ್ಯಕ್ರಮಕ್ಕೆ ಎಲ್ಲರಿಗೂ ಸುಸ್ವಾಗತ.




## ನ. 11 ಶ್ರೀ ವಿಜಯದಾಸರ ಆರಾಧನೆ ಭಜನೆ, ಪ್ರವಚನ, ದಾಸವಾಣಿ

• ಉದಯವಾಹಿನಿ, ಬೆಂಗಳೂರು

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ನವೆಂಬರ್ 11, ಸೋಮವಾರದಂದು 'ಚಿಪ್ಪಗಿರಿಯ ತಪೋಮೂರ್ತಿ' ಶ್ರೀ ವಿಜಯದಾಸರ ಆರಾಧನೆಯ ಪ್ರಯುಕ್ತ ಅಂದು ಬೆಳಗ್ಗೆ ಫಲಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ವಿಜಯ ವಿಠಲ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ಮ||ಶಾ||ಸಂ|| ಡಾ|| ವೆಂಕಟನರಸಿಂಹಾಚಾರ್ಯರಿಂದ ಶ್ರೀ ವಿಜಯದಾಸರ ಮಹಿಮೆಗಳು. ವಿಷಯವಾಗಿ ಧಾರ್ಮಿಕ ಪ್ರವಚನ, ಮಹಾಮಂಗಳಾರತಿ.

**ವಿಜಯರಾಯರ ಭಜಿಸೋ :** ಸಂಜೆ 6-30ಕ್ಕೆ ಶ್ರೀಮತಿ ರೂಪಾ ಪ್ರಭಂಜನ ಮತ್ತು ಶ್ರೀಮತಿ ರಮ್ಯಾ ಸುಧೀರ್ ಇವರಿಂದ ವಿಜಯರಾಯರ ಭಜಿಸೋ ಎಂಬ ಶೀರ್ಷಿಕೆಯಲ್ಲಿ ಶ್ರೀ ವಿಜಯದಾಸರು ರಚಿಸಿದ ಕೃತಿಗಳನ್ನೂ ಮತ್ತು ಇತರ ಹರಿದಾಸರುಗಳು ವಿಜಯದಾಸರನ್ನು ಕುರಿತು ರಚಿಸಿರುವ ಕೃತಿಗಳನ್ನೂ ಹಾಡಲಿದ್ದಾರೆ. ಇವರ ಗಾಯನಕ್ಕೆ ಕೀ-ಬೋರ್ಡ್ ವಾದನದಲ್ಲಿ ಶ್ರೀ ಅಮಿತ್ ಶರ್ಮಾ ಹಾಗೂ ತಬಲಾ ವಾದನದಲ್ಲಿ ಶ್ರೀ ಶ್ರೀನಿವಾಸ್ ಕಾಖಂಡಕಿ ಸಾಥ್ ನೀಡಲಿದ್ದಾರೆಂದು ಶ್ರೀಮಠದ ಗೌರವ ಕಾರ್ಯದರ್ಶಿಗಳಾದ ಶ್ರೀ ನರಹರಿ ರಾವ್ ತಿಳಿಸಿದ್ದಾರೆ. ಕಾರ್ಯಕ್ರಮ ನಡೆಯುವ ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003



ಉದಯವಾಹಿನಿ ಚಿತ್ರ

## ಇಡೀ ಅಧಿಕಾರಿಗಳ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ರದ್ದುಗೊಳಿಸಿದ ಹೈಕೋರ್ಟ್!

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಂತಹ ಕೋಟ್ಯಂತರ ರೂಪಾಯಿ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಜಾರಿ ನಿರ್ದೇಶನಾಲಯದ ಇಬ್ಬರು ಅಧಿಕಾರಿಗಳ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಅನ್ನು ರದ್ದುಗೊಳಿಸಿ ಹೈಕೋರ್ಟ್ ಮಹತ್ವದ ಆದೇಶ ಹೊರಡಿಸಿದೆ.

ಪ್ರಕರಣದ ವಿಚಾರಣೆಯ ವೇಳೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯೊಬ್ಬರಿಗೆ ಇಬ್ಬರು ಇಡೀ ಅಧಿಕಾರಿಗಳು ಬೆದರಿಕೆ ಹಾಕಿದ್ದರು ಎಂದು ಆರೋಪಿಸಿ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ತಮ್ಮ ವಿರುದ್ಧದ ಪ್ರಕರಣ ರದ್ದುಪಡಿಸಬೇಕು ಎಂದು ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ನ ನ್ಯಾ. ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠವು ವಿಚಾರಣೆ ನಡೆಸಿ ಈ ಬಗ್ಗೆ ಆದೇಶಿಸಿದೆ. ಜಾರಿ ನಿರ್ದೇಶನಾಲಯದ ಡೆಪ್ಯೂಟಿ ಡೈರೆಕ್ಟರ್ ಮನೋಜ್ ಮಿತ್ತಲ್ ಹಾಗೂ ಮತ್ತೋರ್ವ ಇ.ಡಿ.ಅಧಿಕಾರಿ ಮುರಳಿ ಕಣ್ಣನ್ ವಿರುದ್ಧ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣ ಇದೀಗ ಹೈಕೋರ್ಟ್ ರದ್ದುಗೊಳಿಸಿದೆ. ಇವರು ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಹೇಳಿಕೆ ನೀಡುವಂತೆ ಇಡಿ ಅಧಿಕಾರಿಗಳು ಬೆದರಿಕೆ ಹಾಕಿದ್ದರು ಎಂದು ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಕಲ್ಲೇಶ್ ಎನ್ನುವವರು ಎಫ್‌ಐಆರ್ ದಾಖಲಿಸಿದ್ದರು.



**ವಾಲ್ಮೀಕಿ ನಿಗಮದ ಹಗರಣ**

## ಬೆಂಗಳೂರಿನಲ್ಲಿ ಆಕಾಶ ಗೋಪುರ ನಿರ್ಮಾಣದ ಸ್ಥಳ ಬದಲಾವಣೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಆಕಾಶ ಗೋಪುರ ನಿರ್ಮಾಣದ ಸ್ಥಳ ಬದಲಾವಣೆ ಮಾಡಲು ಚಿಂತನೆಗಳು ನಡೆದಿವೆ. ಬೆಂಗಳೂರಿನಲ್ಲಿ ಆಕಾಶ ಗೋಪುರ ನಿರ್ಮಾಣ ಮಾಡಲು ನಿರ್ಧರಿಸಿದ ಬಿಬಿಎಂಪಿ ನೈಸ್ ಕ್ಲೋವರ್ ಲೀಫ್ ಹತ್ತಿರದ ಹೆಮ್ಮಿಗೆಪುರ ಜಾಗವನ್ನು ಗುರುತಿಸಿತ್ತು.ಆದರೀಗ ಅದು ಬದಲಾವಣೆಯಾಗುವ ಸಾಧ್ಯತೆ ಇದೆ.

ರಾಮನಗರದಲ್ಲಿ ಏರ್‌ಪೋರ್ಟ್ ನಿರ್ಮಾಣಗೊಳ್ಳುವ ಮಾತುಗಳು ಕೇಳಿ ಬಂದಿದ್ದು ಕನಕಪುರಕ್ಕೆ ಆಕಾಶ ಗೋಪುರ ಶಿಫ್ಟ್ ಆಗುವ ಲಕ್ಷಣಗಳು ಇವೆ. ಉನ್ನತ ಮೂಲಗಳು ತಿಳಿಸಿವೆ. ನಗರದಲ್ಲಿ ಕೆಂಪೇಗೌಡ ವಿಮಾನ ನಿಲ್ದಾಣದ ಮೇಲಿನ ಒತ್ತಡ ನಿವಾರಣೆಗೆ ಮತ್ತೊಂದು ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸರ್ಕಾರ ಚಿಂತನೆ ನಡೆಸಿದೆ. ಇದಕ್ಕಾಗಿ ಬಿಡದಿ ಸೇರಿದಂತೆ ರಾಮನಗರ ಜಿಲ್ಲೆ ವ್ಯಾಪ್ತಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ಚಿಂತನೆ ನಡೆಯುತ್ತಿದೆ. ಈ ಕಾರಣಕ್ಕೆ ಆಕಾಶ ಗೋಪುರ ಅಥವಾ ಸ್ಕೈಡೆಕ್ ಸ್ಥಳಾಂತರವಾಗುವ ವಿಚಾರ ಮುನ್ನೆಲೆಗೆ ಬಂದಿದೆ.

ಬಿಬಿಎಂಪಿ ನಗರವನ್ನು ಆಕರ್ಷಕವಾಗಿಸಲು ಹಾಗೂ ಪ್ರವಾಸಿಗರನ್ನು ಸೆಳೆಯಲು ಆಕಾಶ ಗೋಪುರ ನಿರ್ಮಾಣಕ್ಕೆ ಸಿದ್ಧತೆ ನಡೆಸಿದೆ. ಇದಕ್ಕಾಗಿ ಕೆಂಗೇರಿ ಬಳಿಯ ಹೆಮ್ಮಿಗೆಪುರದಲ್ಲಿ ಸ್ಥಳವನ್ನು ಗುರುತಿಸಲಾಗಿದೆ. ಕೆಲ ದಿನಗಳ ಹಿಂದೆಯಷ್ಟೇ ಬಿಬಿಎಂಪಿ ಈ ಸ್ಥಳದ ಬಗ್ಗೆ ಸಾರ್ವಜನಿಕರ ಆಕ್ಷೇಪಣೆಯನ್ನು ಆಹ್ವಾನಿಸಿತ್ತು. ಈ ನಡುವೆ ರಾಮನಗರ ವ್ಯಾಪ್ತಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣವಾಗಬೇಕು ಎನ್ನುವ ಮಾತುಗಳು ಕೇಳಿ ಬಂದಿವೆ. ಹೀಗಾದಲ್ಲಿ ವಿಮಾನ ನಿಲ್ದಾಣದ ಬಳಿ ಯಾವುದೇ ಗೋಪುರ ನಿರ್ಮಾಣಕ್ಕೆ ಅವಕಾಶಗಳು ಇರುವುದಿಲ್ಲ.



ಉದಯವಾಹಿನಿ ಚಿತ್ರ

ವಿಮಾನ ನಿಲ್ದಾಣದ 25ಕಿ.ಮೀ ಸುತ್ತಳತೆಯಲ್ಲಿ ಯಾವುದೇ ಹೈ ರೈಸ್ ಕಟ್ಟಡ ನಿರ್ಮಿಸಲು ಅನುಮತಿಯಿಲ್ಲ.

ಅಷ್ಟಕ್ಕೂ ಬಿಬಿಎಂಪಿ ಆಕಾಶ ಗೋಪುರ ನಿರ್ಮಾಣಕ್ಕೆ ಹೆಮ್ಮಿಗೆಪುರದ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಲು ಪ್ರಮುಖ ಕಾರಣವೊಂದು ಇದೆ. ಹೆಮ್ಮಿಗೆಪುರ(ನೈಸ್ ಕ್ಲೋವರ್ ಲೀಫ್ ಹತ್ತಿರ) ಜಾಗಕ್ಕೆ ತುಮಕೂರು, ಕನಕಪುರ, ಮೈಸೂರು, ಹೊಸೂರು ರಸ್ತೆಗಳಿಂದ ನೈಸ್ ರಸ್ತೆ ಮುಖೇನ ಸುಗಮ ಸಂಪರ್ಕವಿದ್ದು ಜಾಗವು ಹೊರ ವಯಲಯದ ವ್ಯಾಪ್ತಿಯಲ್ಲಿರುವುದರಿಂದ ಪ್ರಸ್ತಾಪಿತ ಆಕಾಶಗೋಪರ ನಿರ್ಮಿಸುವ ಸಮಯದಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುವ ಸಂಭವ ಕಡಿಮೆ ಇದೆ.ಜೊತೆಗೆ ತುರಹಳ್ಳಿ ಕಾಡಿನ ಪ್ರದೇಶ ಹಸಿರು ನೋಟದೊಂದಿಗೆ ಬೆಂಗಳೂರನ್ನು ವೀಕ್ಷಿಸಬಹುದಾಗಿದೆ. ಈ ಹಿನ್ನೆಲೆಯಲ್ಲಿ ಹೆಮ್ಮಿಗೆಪುರ (ನೈಸ್ ರಸ್ತೆ ಹತ್ತಿರ) ಜಾಗವನ್ನು ಪ್ರಥಮವಾಗಿ ಪ್ರಸ್ತಾಪಿಸಲಾಗಿತ್ತು.

ಹೀಗಾಗಿ ಹೆಮ್ಮಿಗೆಪುರ (ನೈಸ್ ಕ್ಲೋವರ್ ಲೀಫ್ ಹತ್ತಿರ) ಜಾಗದಲ್ಲಿ ಆಕಾಶ ಗೋಪುರ ನಿರ್ಮಿಸುವ ಪ್ರಸ್ತಾವನೆಗೆ ಸಾರ್ವಜನಿಕರಿಂದ ಆಕ್ಷೇಪಣೆಗಳು ಅಥವ ಸಲಹೆಗಳು ಇದ್ದಲ್ಲಿ bbmpeepc3@gmail.com ಮುಖೇನ ಲಿಖಿತ ರೂಪದಲ್ಲಿ ಮುಖ್ಯ ಆಯುಕ್ತರಿಗೆ ತಿಳಿಸುವಂತೆ ಬಿಬಿಎಂಪಿ ಸೂಚನೆ ಕೂಡ ನೀಡಿತ್ತು.

# ರಾಮಾಯಣ
## ಕುಶ ನಾಭನ ವೃತ್ತಾಂತ



• ಹಿಂದಿನ ಸಂಚಿಕೆಯಿಂದ 21ನೆಯ ಅಧ್ಯಾಯ

ನೀವು ಧರ್ಮಿಷ್ಠರಾಗಿ ಭೂಮಿಯನ್ನು ಪರಿಪಾಲಿಸಿ' ಎಂದು ಆಜ್ಞಾಪಿಸಿದನು ಆ ಮಾತನ್ನು ಕೇಳಿ ಆ ನಾಲ್ಕು ಮಕ್ಕಳೂ ತಮ್ಮ ತಮ್ಮ ಹೆಸರಿನಿಂದ ಒಂದೊಂದು ಪಟ್ಟಣವನ್ನು ನಿರ್ಮಿಸಿದರು. ಆ ನಾಲ್ವರೂ ಮಹಾಸಮರ್ಥರಾಗಿ ಕುಶನೆಂಬ ಆ ರಾಯನ ಮನೋರಥಗಳೋ ಎಂಬ ಹಾಗಿದ್ದರು. ಆ ಮಕ್ಕಳೊಳಗೆ ಅತಿತೇಜಸ್ವಿಯಾದ ಕುಶಾಂಬನು ಕೌಶಾಂಬೀಪಟ್ಟಣವನ್ನೂ ಕುಶನಾಭನು ಮಹೋದಯವೆಂಬ ಪಟ್ಟಣವನ್ನೂ ಅಧೂರ್ತರಜನು ಧರ್ಮಾರಣ್ಯವೆಂಬ ಪಟ್ಟಣವನ್ನೂ ವಸುವು ಗಿರಿವ್ರಜವೆಂಬ ಪಟ್ಟಣವನ್ನೂ ನಿರ್ಮಿಸಿದರು. ಈ ಭೂಮಿಯು ವಸುವೆಂಬ ಆ ನಾಲ್ಕನೇ ಕುಮಾರನ ವಶವಾಗಿರುವುದು. ಇಗೋ, ಇಲ್ಲಿ ಕಾಣಬರುವುದು ಮಗಧೆ ಎಂಬ ನದಿಯು. ಈ ನದಿಯು ಮಗಧದೇಶದಲ್ಲಿ ಪ್ರಸಿದ್ಧವಾಗಿರುವ ಐದು ಪರ್ವತಗಳ ಮಧ್ಯದಲ್ಲಿ ಹರಿದು ಆ ಪರ್ವತಗಳಿಗೆ ಕಂಠಮಾಲೆಯ ರೀತಿಯಲ್ಲಿ ಒಪ್ಪುತ್ತ ಮೂಡಣ ಸಮುದ್ರಕ್ಕೆ ಹೋಗಿ ಕೂಡುವುದು. ಈ ನದಿಯ ತೀರಗಳಲ್ಲಿ ತೋಟ ಗದ್ದೆಗಳು ವಿಧವಿಧವಾದ ಪೈರುಗಳಿಂದ ಒಪ್ಪುತ್ತಿರುವುವು. ಕುಶನಾಭನು ತನ್ನ ಹೆಂಡತಿಯಾದ ಘೃತಾಚೀ ಎಂಬವಳಲ್ಲಿ ನೂರು ಮಂದಿ ಹೆಣ್ಣು ಮಕ್ಕಳನ್ನು ಪಡೆದನು. ಹೆಣ್ಣು ಮಕ್ಕಳು ರೂಪಲಾವಣ್ಯ ಸೌಂದರ್ಯವುಳ್ಳವರೂ ಮನೋಹರಾಕಾರರೂ ಯೌವನಸ್ಥರೂ ಸರ್ವಾಭರಣಭೂಷಿತೆಯರೂ ಆಗಿ ವರ್ಷಾಕಾಲದ ಮಿಂಚಿನಂತೆ ತಮ್ಮ ತನುಕಾಂತಿಯಿಂದ ಒಪ್ಪುತ್ತ ವೀಣಾದಿಗಾನಗಳನ್ನು ಮಾಡುತ್ತ, ಅತ್ಯಂತ ಹರ್ಷದಿಂದ ಉದ್ಯಾನವನದ ಮಧ್ಯದಲ್ಲಿ ಅಂತರಿಕ್ಷ ಮಾರ್ಗದಲ್ಲಿರುವ ನಕ್ಷತ್ರಗಳ ಹಾಗೆ ಬೆಳಗುತ್ತಿದ್ದರು. ಆ ಸಮಯದಲ್ಲಿ ಸಮಸ್ತ ಪ್ರಾಣಿಗಳ ದೇಹದಲ್ಲಿಯೂ ಚರಿಸುವ ವಾಯುದೇವನು ಅವರನ್ನು ಕಂಡು ಮೋಹಿತನಾಗಿ ಅವರನ್ನು ಕುರಿತು ಕನ್ಯಾಶಿರೋಮಣಿಗಳಿರಾ, ನೀವೆಲ್ಲರೂ ನನ್ನನ್ನು ವರಿಸಿ ನನಗೆ ಪತ್ನಿಯರಾಗಿರಿ. ಈ ಮನುಷ್ಯ ಸ್ವರೂಪವನ್ನು ಬಿಟ್ಟು ದೀರ್ಘಾಯುಷ್ಯವನ್ನು ಪಡೆಯಿರಿ. ಯೌವನವೆಂಬುದು ಮನುಷ್ಯಜನ್ಮದಲ್ಲಿ ಸ್ಥಿರವಲ್ಲ. ಆದ್ದರಿಂದ ನೀವು ದೇವತ್ವವನ್ನು ಪಡೆದು ಎಂದಿಗೂ ಅಳಿವಿಲ್ಲದ ಯೌವನವನ್ನು ಪಡೆಯಿರಿ !' ಎಂದು ಹೇಳಿದನು. ಮಹಾತ್ಮನಾದ ವಾಯುದೇವನ ಮಾತನ್ನು ಕೇಳಿ ಕುಶನಾಭನ ನೂರುಮಂದಿ ಕುಮಾರಿಯರೂ ಹಾಸ್ಯಮಾಡುತ್ತ ಆತನನ್ನು ಕುರಿತು ' ಎಲೈ ಮಾರುತನೆ, ನೀನು ಸಮಸ್ತ ಪ್ರಾಣಿಗಳ ಅಂತರಂಗದಲ್ಲಿ ಚರಿಸುವವನಾಗಿದ್ದೂ ನಮಗೆ ಯಾವ ಕಾರಣದಿಂದ ಅಪಕೀರ್ತಿಯನ್ನುಂಟುಮಾಡುತ್ತೀಯೆ ? ನಾವು ಕುಶನಾಭನ ಕುಮಾರಿಯರು. ನಮ್ಮ ಧರ್ಮವನ್ನು ಕಾದುಕೊಂಡಿದ್ದೇವೆ. ನಾವು ನಿನ್ನನ್ನೂ ಈ ಸ್ಥಾನದಿಂದ ಕದಲಿಸುವುದಕ್ಕೆ ಸಮರ್ಥೆಯರು. ನಮ್ಮ ತಂದೆಯಾದ ಕುಶನಾಭನು ಮಹಾ ಸತ್ಯವಾದಿಯು, ಆತನನ್ನು ನೀನು ತಿರಸ್ಕರಿಸಿದರೆ ಆತನೇ ನಿನಗೆ ಮೃತ್ಯುವಾಗುವನು. ನಾವು ಧರ್ಮಮಾರ್ಗದಿಂದ ಸ್ವಯಂವರಕ್ಕಾಗಿ ಕಾಯುತ್ತಿದ್ದೇವೆ.

ಮುಂದುವರಿಯುವುದು...

## ಇನ್ಮುಂದೆ ಮನೆ ಬಾಗಿಲಿಗೆ ಬರಲಿದೆ ದೇವಸ್ಥಾನದ ಪ್ರಸಾದ
### ಹೊಸ ಯೋಜನೆ ಜಾರಿಗೆ ಮುಜರಾಯಿ ಇಲಾಖೆ ಚಿಂತನೆ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಮುಜರಾಯಿ ಸಚಿವರ ಜೊತೆ ಚರ್ಚೆ**

ಕರ್ನಾಟಕದ ಪ್ರತಿಷ್ಠಿತ ದೇವಸ್ಥಾನಗಳ ಪ್ರಸಾದವನ್ನು ರಾಜ್ಯದ ಮನೆ ಮನೆಯ ಬಾಗಿಲಿಗೆ ತಲುಪಿಸಲು ಮುಜರಾಯಿ ಇಲಾಖೆ ಚಿಂತನೆ ನಡೆಸಿದ್ದು, ಆ ಮೂಲಕ ಹೊಸ ಯೋಜನೆ ಜಾರಿಗೆ ತರುವ ನಿಟ್ಟಿನಲ್ಲಿ ಇಲಾಖೆ ಚಿಂತನೆ ನಡೆಸುತ್ತಿದೆ ಎಂದು ತಿಳಿದುಬಂದಿದೆ.

ಈ ಕುರಿತಾಗಿ ಇಲಾಖೆಯ ಆಯುಕ್ತ ವೆಂಕಟೇಶ್ ಮಾಹಿತಿ ನೀಡಿದ್ದು, ಮುಜರಾಯಿ ಸಚಿವರ ಜೊತೆ ಚರ್ಚೆ ಮಾಡಿ ಶೀಘ್ರದಲ್ಲೇ ಜಾರಿ ಮಾಡಲಾಗುವುದು ಎಂದರು.

ಕರ್ನಾಟಕ ರಾಜ್ಯ ವ್ಯಾಪಿ ಇರುವ ಯಾವುದೇ ದೇವಸ್ಥಾನ ಪ್ರಸಾದವನ್ನ ಆನ್ ಲೈನ್‌ಲ್ಲಿ ಬುಕ್ ಮಾಡಿದರೆ ಮನೆ ಬಾಗಿಲಿಗೆ ಪ್ರಸಾದ ತಂದು ಕೊಡುವ ಯೋಜನೆ ಶೀಘ್ರವೇ ಜಾರಿಗೆ ತರಲು ಚಿಂತನೆ ನಡೆದಿದೆ.


ಈ ಕುರಿತಾಗಿ ಅಂಚೆ ಇಲಾಖೆ ಮತ್ತು ಖಾಸಗಿ ಕಂಪನಿಗಳ ಜೊತೆ ಮಾತುಕತೆ ನಡೆಯುತ್ತಿದೆ. ಪ್ರಸಾದಕ್ಕೆ ಎಷ್ಟು ದರ ಇದೆಯೋ ಅದರ ಜೊತೆಗೆ ಡೆಲಿವರಿ ದರ ಸೇರಿಸಿ ಮನೆ ಬಾಗಿಲಿಗೆ ಪ್ರಸಾದ ನೀಡುವ ದರವನ್ನು ನಿಗದಿ ಮಾಡಲಾಗುತ್ತಿದೆ.

ಸದ್ಯ ಮುಜರಾಯಿ ಇಲಾಖೆ ಹೊಸ ಹೊಸ ತಂತ್ರಜ್ಞಾನವನ್ನ ಅಳವಡಿಸಿಕೊಂಡು ಜನರಿಗೆ ಸೇವೆ ನೀಡಲು ಹಲವಾರು ಪ್ಲ್ಯಾನ್ ಮಾಡಿಕೊಳ್ಳುತ್ತಿದೆ.

ಈಗಾಗಲೇ ಆನ್ ಲೈನ್ ಸೇವೆ, ಬುಕ್ಕಿಂಗ್ ಅಂತಾ ಜಾರಿ ಆಗಿದೆ.

ಈಗ ಮತ್ತೊಂದು ಹೊಸ ಯೋಜನೆ ಜಾರಿಗೆ ಪ್ಲ್ಯಾನ್ ಮಾಡಲಾಗುತ್ತಿದೆ. ಇನ್ನು ಈ ಹೊಸ ಯೋಜನೆಯಿಂದ ಮನೆಯಲ್ಲೇ ಕುಳಿತು ಪ್ರಸಿದ್ದ ದೇವಾಲಯಗಳ ಪ್ರಸಾದವನ್ನ ಸ್ವೀಕರಿಬಹುದಾಗಿದೆ.

## ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

**ದಿನಕ್ಕೊಂದು ಮುಕ್ತಕ -19**

ಹನಿಯಾಗಿ ಬೀಳುತಿರೆ ನೀರಿನಲಿ ಸಂಗ್ರಹವು
ದನಿಗಾಗಿ ಪರಿತಪಿಸೆ ಮನುಜ ಧರ್ಮ
ಸನಿಹಕ್ಕೆ ಬರದವರ ಕರೆಯದಿರು ಎಂದಿಗೂ
ಇನಿದನಿಯ ರೂಪವೇ ಲಕ್ಷ್ಮಿದೇವಿ.....

**ಭಾವಾರ್ಥ :** ಹನಿಯಾಗಿ ಬೀಳುತ್ತಿರೆ ನೀರಿನಲ್ಲಿ ಸಂಗ್ರಹವು. ಹನಿ ಹನಿ ಗೂಡಿದರೆ ಹಳ್ಳವದುವೆ ಎಂಬಂತೆ ಹನಿ ಎಂದು ನಿರ್ಲಕ್ಷಿಸದೆ ಸಂಗ್ರಹಿಸಿದರೆ ಸಂಗ್ರಹದ ನಂತರ ತಿಳಿಯುತ್ತದೆ. ಹನಿ ಹನಿಗೂಡಿದರೆ ಹಳ್ಳವೆಂದು. ಯಾರೇ ಆಗಲಿ ಪ್ರೀತಿಯ ದನಿಯಲ್ಲಿ ಕೂಗುವುದನ್ನು, ಮತ್ತು ಪ್ರೀತಿಯಿಂದ ಸಣ್ಣದನಿಯಲ್ಲಿ ಕರೆದರೂ ಸಹ ವಿಶ್ವಾಸವಿದ್ದರೆ ಅದು ನಿಜವಾದ ಬಾಂಧವ್ಯವಾಗಿರುತ್ತದೆ.

ಆದರೆ ಒಂದು ದನಿಗಾಗಿ ಪರಿತಪಿಸುವ ಮನುಜನು ಹತ್ತಿರಕ್ಕೆ ಬಾರದೆ ನಮ್ಮನ್ನು ನಿರ್ಲಕ್ಷಿಸಿದರೆ ಅವರಿಂದ ದೂರ ಇದ್ದುಬಿಡಬೇಕು. ಅವರನ್ನು ಹತ್ತಿರಕ್ಕೂ ಸೇರಿಸಿಕೊಳ್ಳಬಾರದು. ಇನಿದನಿಯ ರೂಪವಾಗಿ ಒಳ್ಳೆಯತನದವರೊಂದಿಗೆ ಹೊಂದಿಕೊಂಡು ಜೀವನದಲ್ಲಿ ಸಾಗಬೇಕು.





ಹ್ಯಾಪಿ ಬರ್ತ್‌ಡೇ ಗೊಲ್ಲು

# ಸಹೋದರನಿಗೆ ರಾಧಿಕಾ ಪಂಡಿತ್ ಲವ್ಲಿ ವಿಶ್

ಸ್ಯಾಂಡಲ್‌ವುಡ್ ನಟಿ ರಾಧಿಕಾ ಪಂಡಿತ್ ಇದೀಗ ಸಹೋದರ ಗೌರಂಗ್‌ಗೆ ವಿಶೇಷವಾಗಿ ಶುಭಕೋರಿದ್ದಾರೆ. ಗೌರಂಗ್ ಜೊತೆಗಿನ ಫೋಟೋ ಹಂಚಿಕೊಂಡು, ಪ್ರೀತಿಯಿಂದ ರಾಧಿಕಾ ವಿಶ್ ಮಾಡಿದ್ದಾರೆ. ನಿನ್ನಂತ ಸಹೋದರನನ್ನು ಪಡೆಯಲು ನಾನು ಪುಣ್ಯ ಮಾಡಿದ್ದೆ ಗೌರಂಗ್. ಹುಟ್ಟುಹಬ್ಬದ ಶುಭಾಶಯಗಳು ಗೊಲ್ಲು, ಲವ್ ಯೂ ಎಂದು ನಟಿ ಶುಭಹಾರೈಸಿದ್ದಾರೆ. ನಟಿಯ ಸಹೋದರನಿಗೆ ಅಭಿಮಾನಿಗಳು ಕೂಡ ಶುಭಕೋರಿದ್ದಾರೆ. ಇನ್ನೂ ಗೌರಂಗ್ ಪತ್ನಿ ಮತ್ತು ಮಕ್ಕಳೊಂದಿಗೆ ವಿದೇಶದಲ್ಲಿ ನೆಲೆಸಿದ್ದಾರೆ.

ಅಂದಹಾಗೆ, 2019ರಲ್ಲಿ 'ಆದಿ ಲಕ್ಷ್ಮಿ ಪುರಾಣ' ಚಿತ್ರದಲ್ಲಿ ಕಡೆಯದಾಗಿ ರಾಧಿಕಾ ಪಂಡಿತ್ ನಟಿಸಿದರು. ಯಶ್ ಜೊತೆ ಆಡ್ ಶೂಟ್‌ಗಳಲ್ಲಿ ನಟಿ ಕಾಣಿಸಿಕೊಳ್ತಿದ್ದಾರೆ. ಆದರೆ ಅವರು ಮತ್ತೆ ಸಿನಿಮಾ ಮಾಡಲಿ ಎಂಬುದು ಅಭಿಮಾನಿಗಳ ಆಶಯ. ರಾಧಿಕಾ ಕೂಡ ಉತ್ತಮ ಕಥೆ ಸಿಕ್ಕರೆ, ಖಂಡಿತಾ ನಟಿಸುತ್ತೇನೆ ಎಂದು ಹೇಳಿದ್ದರು.

ಇನ್ನೂ ಇತ್ತೀಚೆಗೆ ಅವರು ಹೊಸ ಫೋಟೋಶೂಟ್‌ಗಳ ಮೂಲಕ ಗಮನ ಸೆಳೆದಿದ್ದರು. ಈ ಮೂಲಕ ಸ್ಯಾಂಡಲ್‌ವುಡ್‌ಗೆ ನಟಿ ಮತ್ತೆ ಕಮ್ ಬ್ಯಾಕ್ ಆಗುವ ನಿರೀಕ್ಷೆಯನ್ನಿಟ್ಟುಕೊಂಡಿದ್ದಾರೆ ಫ್ಯಾನ್ಸ್. ಎಲ್ಲಾದ್ದಕ್ಕೂ ನಟಿಯ ಕಡೆಯಿಂದ ಅಧಿಕೃತ ಮಾಹಿತಿ ಸಿಗುವವರೆಗೂ ಕಾದುನೋಡಬೇಕಿದೆ.



# ಥಗ್ ಲೈಫ್ ಟೀಸರ್ ಔಟ್


ಮಾಸ್ ಆಗಿ ಎಂಟ್ರಿ ಕೊಟ್ಟ ಕಮಲ್ ಹಾಸನ್

ತಮಿಳಿನ ಸ್ಟಾರ್ ನಟ ಕಮಲ್ ಹಾಸನ್ ನಟನೆಯ 'ಥಗ್ ಲೈಫ್' ಸಿನಿಮಾದ ಮೊದಲ ಟೀಸರ್ ರಿಲೀಸ್ ಆಗಿದೆ. ಪಕ್ಕಾ ಮಾಸ್ ಆಗಿ ನಟ ಎಂಟ್ರಿ ಕೊಟ್ಟಿದ್ದಾರೆ. ಕಮಲ್ ಹಾಸನ್ ಹುಟ್ಟುಹಬ್ಬದಂದು (ನ.7) ಚಿತ್ರದ ಟೀಸರ್ ರಿವೀಲ್ ಮಾಡುವ ಮೂಲಕ ಅವರ ಅಭಿಮಾನಿಗಳಿಗೆ ಚಿತ್ರತಂಡ ಸರ್ಪ್ರೈಸ್ ಗಿಫ್ಟ್ ಕೊಟ್ಟಿದೆ.

ರಿಲೀಸ್ ಆಗಿರುವ ಟೀಸರ್‌ನಲ್ಲಿ ಕಮಲ್ ಹಾಸನ್ ಮಾಸ್ ಕ್ಲಾಸ್ ಆಗಿ ಎಂಟ್ರಿ ಕೊಟ್ಟಿದ್ದಾರೆ. ವಿಕ್ರಮ್ ಸಿನಿಮಾದ ನಂತರ ಮತ್ತೆ ಖಡಕ್ ಅವತಾರ ತಾಳಿದ್ದಾರೆ.

ಈ ಚಿತ್ರದಲ್ಲಿ ಸಿಂಬು, ತ್ರಿಷಾ ಕೂಡ ನಟಿಸಿದ್ದಾರೆ. 'ಥಗ್ ಲೈಫ್' ಚಿತ್ರವನ್ನು ಮಣಿರತ್ನಂ ನಿರ್ದೇಶನ ಮಾಡಿದ್ದಾರೆ. 'ಥಗ್ ಲೈಫ್' ಚಿತ್ರ ತಮಿಳು, ಕನ್ನಡ ಸೇರಿದಂತೆ ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. ಮುಂದಿನ ವರ್ಷ ಜೂನ್ 5ರಂದು ರಿಲೀಸ್ ಆಗಲಿದೆ.

ಹಲವು ವರ್ಷಗಳ ಬಳಿಕ ಕಮಲ್ ಮತ್ತು ಮಣಿರತ್ನಂ ಜೊತೆಯಾಗಿ ಕೆಲಸ ಮಾಡಿರುವ ಥಗ್ ಲೈಫ್ ಚಿತ್ರದ ಮೇಲೆ ಅಭಿಮಾನಿಗಳಿಗೆ ಬೆಟ್ಟದಷ್ಟು ನಿರೀಕ್ಷೆಯಿದೆ.





# ಹಸಿಬಿಸಿ ದೃಶ್ಯಗಳಲ್ಲಿ ಸಮಂತಾ

ನಟಿ ಸಮಂತಾ ಸದ್ಯ 'ಸಿಟಾಡೆಲ್ ಹನಿ ಬನಿ' ಸಕ್ಸಸ್ ಖುಷಿಯಲ್ಲಿದ್ದಾರೆ. ವರುಣ್ ಧವನ್ ಜೊತೆ ನಟಿಸಿದ ವೆಬ್ ಸಿರೀಸ್‌ಗೆ ಅಭಿಮಾನಿಗಳಿಂದ ಮೆಚ್ಚುಗೆ ವ್ಯಕ್ತವಾಗಿದೆ. ವರುಣ್ ಜೊತೆಗಿನ ಲಿಪ್‌ಲಾಕ್ ದೃಶ್ಯಗಳಲ್ಲಿ ಸಮಂತಾರನ್ನು ನೋಡಿ ಅಭಿಮಾನಿಗಳು ದಂಗಾಗಿದ್ದಾರೆ. ಸೌತ್ ಸಿನಿಮಾಗಳಲ್ಲಿ ಗ್ಲ್ಯಾಮರಸ್ ಪಾತ್ರಗಳ ಮೂಲಕ ಸಮಂತಾ ಸೈ ಎನಿಸಿಕೊಂಡಿದ್ದರು. ಇದೀಗ ಬಾಲಿವುಡ್‌ನ 'ಸಿಟಾಡೆಲ್ ಹನಿ ಬನಿ' ವೆಬ್ ಸಿರೀಸ್‌ನಲ್ಲಿ ನಟಿ ಸಖತ್ ಹಾಟ್ ಅವತಾರ ತಾಳಿದ್ದಾರೆ. ವರುಣ್ ಜೊತೆ ಬೋಲ್ಡ್ ದೃಶ್ಯಗಳಲ್ಲಿ ನಟಿಸಿರುವ ಸ್ಯಾಮ್ ಅವತಾರಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿವೆ.

ಇದು ನಮ್ಮ ನೆಚ್ಚಿನ ನಟಿನಾ ಎಂದು ಅಭಿಮಾನಿಗಳು ಅಚ್ಚರಿ ವ್ಯಕ್ತಪಡಿಸಿದ್ದಾರೆ. ರೊಮ್ಯಾನ್ಸ್ ಮಿತಿ ಮೀರಿದೆ ಎಂದು ನೆಟ್ಟಿಗರು ಕುಟುಕಿದ್ದಾರೆ. ಇನ್ನೂ ಕೆಲವರು ಸ್ಯಾಮ್ ಯಾವ ರೋಲ್ ಕೊಟ್ರು, ಸಖತ್ ಆಗಿ ನಟಿಸ್ತಾರೆ ಎಂದು ಮೆಚ್ಚುಗೆ ಸೂಚಿಸಿದ್ದಾರೆ. ಇನ್ನೂ ಹಾಲಿವುಡ್ ವರ್ಷನ್‌ನಲ್ಲಿ ಪ್ರಿಯಾಂಕಾ ಚೋಪ್ರಾ ನಟಿಸಿದ್ದರು. ಭಾರತೀಯ ವರ್ಷನ್‌ಗೆ ತಕ್ಕಂತೆ 'ಸಿಟಾಡೆಲ್ ಹನಿ ಬನಿ' ಚಿತ್ರೀಕರಣ ಮಾಡಿದ್ದಾರೆ. ಈ ಮೂಲಕ ಮೊದಲ ಬಾರಿಗೆ ವರುಣ್ ಮತ್ತು ಸಮಂತಾ ಜೊತೆಯಾಗಿ ನಟಿಸಿದ್ದಾರೆ.



# ಸಲ್ಮಾನ್ ಖಾನ್‌ಗೆ ಮತ್ತೆ ಜೀವ ಬೆದರಿಕೆ

ಬಿಷ್ಣೋಯ್ ಗ್ಯಾಂಗ್‌ನಿಂದ 5 ಕೋಟಿಗೆ ಬೇಡಿಕೆ

ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಮತ್ತೊಂದು ಜೀವ ಬೆದರಿಕೆ ಕರೆ ಬಂದಿದೆ. ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ಮುಂಬೈ ಪೊಲೀಸರಿಗೆ ಕೊಲೆ ಬೆದರಿಕೆಯ ಸಂದೇಶ ಬಂದಿದೆ. ರಾತ್ರಿ ಮುಂಬೈ ಸಂಚಾರ ಪೊಲೀಸರ ವಾಟ್ಸಾಪ್ ಸಹಾಯವಾಣಿಗೆ ಬೆದರಿಕೆ ಸಂದೇಶ ಕಳುಹಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸಂದೇಶ ಕಳುಹಿಸಿದವರು ನಟನಿಗೆ ಬೆದರಿಕೆ ಹಾಕಿ 5 ಕೋಟಿ ರೂ.ಗೆ ಬೇಡಿಕೆ ಇಟ್ಟಿದ್ದಾರೆ. ಇದನ್ನು ಬಿಷ್ಣೋಯ್ ಗ್ಯಾಂಗ್ ಪರವಾಗಿ ಮಾಡಲಾಗುತ್ತಿದೆ ಎಂದು ಹೇಳಿಕೊಂಡಿದ್ದಾರೆ.

ಇದಲ್ಲದೆ, ವ್ಯಕ್ತಿಯು 'ಮೈ ಸಿಕಂದರ್ ಹೂನ್' ಹಾಡಿನ ಗೀತರಚನೆಕಾರನಿಗೂ ಬೆದರಿಕೆ ಹಾಕಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ. ಸಂಚಾರ ಅಧಿಕಾರಿಗಳ ದೂರಿನ ಮೇರೆಗೆ ವರ್ಲಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಕಳೆದ ಕೆಲವು ವಾರಗಳಲ್ಲಿ, ಟ್ರಾಫಿಕ್ ಪೊಲೀಸ್ ಸಹಾಯವಾಣಿಗೆ ಸಲ್ಮಾನ್ ಖಾನ್‌ಗೆ ಹಲವು ಬೆದರಿಕೆ ಸಂದೇಶಗಳು ಬಂದಿವೆ. ಈ ಹಿಂದೆ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ಖಾನ್‌ಗೆ ಜೀವ ಬೆದರಿಕೆ ಇತ್ತು. ಕೊಲೆ ಯತ್ನ ಮತ್ತು ಸುಲಿಗೆ ಸೇರಿದಂತೆ ಪ್ರಕರಣಗಳಲ್ಲಿ ಬಿಷ್ಣೋಯ್ ಸ್ವತಃ ಅಹಮದಾಬಾದ್‌ನ ಸಾಬರಮತಿ ಜೈಲಿನಲ್ಲಿದ್ದರೆ, ಆತನ ತಂಡದ ಶಂಕಿತ ಸದಸ್ಯರು ಏಪ್ರಿಲ್‌ನಲ್ಲಿ ನಟನ ಬಾಂದ್ರಾ ಮನೆಯ ಹೊರಗೆ ಗುಂಡು ಹಾರಿಸಿದ್ದು.




# ಪ್ರಭಾಸ್ ಜೊತೆ ಬ್ಯಾಕ್ ಟು ಬ್ಯಾಕ್ ಸಿನಿಮಾ

ಕೆಜಿಎಫ್, ಕೆಜಿಎಫ್ 2, ಕಾಂತಾರ ಸಿನಿಮಾಗಳನ್ನು ನಿರ್ಮಾಣ ಮಾಡಿ ಸೈ ಎನಿಸಿಕೊಂಡಿರುವ ಹೊಂಬಾಳೆ ಫಿಲ್ಮ್ಸ್ ಇದೀಗ ಸಲಾರ್ ಬಳಿಕ ಮತ್ತೆ ಪ್ರಭಾಸ್ ಜೊತೆ ಕೈ ಜೋಡಿಸಿದೆ. ಪ್ರಭಾಸ್ ಜೊತೆ ಬ್ಯಾಕ್ ಟು ಬ್ಯಾಕ್ 3 ಸಿನಿಮಾಗಳನ್ನು ಮಾಡೋದಾಗಿ ಹೊಂಬಾಳೆ ಸಂಸ್ಥೆ ಅಧಿಕೃತವಾಗಿ ತಿಳಿಸಿದೆ.

ಈ ಹಿಂದೆ ಪ್ರಭಾಸ್ ನಟನೆಯ ಸಲಾರ್ ಚಿತ್ರವನ್ನು ಹೊಂಬಾಳೆ ಸಂಸ್ಥೆ ನಿರ್ಮಿಸಿತ್ತು. ಇದೀಗ ಮತ್ತೆ ನಟನ ಜೊತೆ 3 ಚಿತ್ರಗಳನ್ನು ಹೊಂಬಾಳೆ ಫಿಲ್ಮ್ಸ್ ನಿರ್ಮಾಣ ಮಾಡಲಿದೆ. ಮುಂದಿನ 3 ವರ್ಷಗಳಲ್ಲಿ ಅಂದರೆ 2026, 2027, ಮತ್ತು 2028ಗೆ ಸಾಲು ಸಾಲು 3 ಸಿನಿಮಾಗಳು ರಿಲೀಸ್ ಆಗಲಿದೆ ಎಂದು ಹೊಂಬಾಳೆ ಸಂಸ್ಥೆ ಘೋಷಿಸಿದೆ. ರೆಬಲ್ ಸ್ಟಾರ್ ಜೊತೆಗೆ ಕೈಜೋಡಿಸುತ್ತಿರುವುದು ನಮಗೆ ಹೆಮ್ಮೆಯ ವಿಷಯ.

ಭಾರತೀಯ ಸಿನಿಮಾದ ಸಾರವನ್ನು ಸಂಭ್ರಮಿಸುವ ಹಾಗೂ ಅದನ್ನು ವಿಶ್ವಮಟ್ಟಕ್ಕೆ ತೆಗೆದುಕೊಂಡು ಹೋಗಲು ಈ ಕೈಜೋಡಿಸುವಿಕೆ ಅತ್ಯಂತ ಮಹತ್ವದ್ದಾಗಲಿದೆ. ಸಿನಿಮಾ ಪ್ರೇಮಿಗಳಿಗೆ ಮರೆಯಲಾಗದ ಸಿನಿಮಾ ಅನುಭವವನ್ನು ಕೊಡುವುದು ನಮ್ಮ ಘೋಷಣೆಯಾಗಿದೆ. ವೇದಿಕೆ ಸಜ್ಜಾಗಿದೆ, ಮುಂದಿನ ಹಾದಿ ಮಿತಿಯಿಲ್ಲದ್ದಾಗಿದೆ. 'ಸಲಾರ್ 2' ಸಿನಿಮಾದ ಜೊತೆಗೆ ನಮ್ಮ ಈ ಪಯಣ ಪ್ರಾರಂಭ ಆಗಲಿದೆ ಎಂದು ಹೊಂಬಾಳೆ ಫಿಲ್ಮ್ಸ್ ಗುಡ್ ನ್ಯೂಸ್ ಹಂಚಿಕೊಂಡಿದೆ.

# ಡಬ್ಲ್ಯುಪಿಎಲ್‌ನ ಫ್ರಾಂಚೈಸಿಗಳ ಧಾರಣ ಪಟ್ಟಿ ಬಿಡುಗಡೆ



ಮುಂಬೈ ಇಂಡಿಯನ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರು, ಯುಪಿ ವಾರಿಯರ್ಸ್, ಗುಜರಾತ್ ಜೈಂಟ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿಗಳು ತಾವು ತಂಡದಲ್ಲೇ ಉಳಿಸಿಕೊಂಡಿರುವ ಆಟಗಾರ್ತಿಯರು ಹಾಗೂ ತಂಡದಿಂದ ಬಿಡುಗಡೆ ಮಾಡಿರುವ ಆಟಗಾರ್ತಿಯರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಆ ಪ್ರಕಾರ ಮುಂಬೈ ಇಂಡಿಯನ್ಸ್ ಹಾಗೂ ಆರ್‌ಸಿಬಿ ತಲಾ 14 ಆಟಗಾರ್ತಿಯರನ್ನು ಉಳಿಸಿಕೊಂಡಿದ್ದರೆ, ಯುಪಿ ವಾರಿಯರ್ಸ್ 15 ಆಟಗಾರ್ತಿಯರನ್ನು ಉಳಿಸಿಕೊಂಡಿದೆ. ಉಳಿದಂತೆ ದೆಹಲಿ ಒಟ್ಟು ನಾಲ್ವರು ಆಟಗಾರ್ತಿಯರನ್ನು ಬಿಡುಗಡೆ ಮಾಡಿದ್ದರೆ, ಗುಜರಾತ್ ಏಳು ಆಟಗಾರ್ತಿಯರನ್ನು ತಂಡದಿಂದ ಬಿಡುಗಡೆ ಮಾಡಿದೆ.

**ರಾಯಲ್ ಚಾಲೆಂಜರ್ಸ್ ಬೆಂಗಳೂರು**

ಉಳಿಸಿಕೊಂಡಿರುವವರು: ಸ್ಮೃತಿ ಮಂಧಾನ (ನಾಯಕಿ), ಸಬ್ಬಿನೇನಿ ಮೇಘನಾ, ರಿಚಾ ಘೋಷ್, ಎಲ್ಲಿಸ್ ಪೆರ್ರಿ, ಜಾರ್ಜಿಯಾ ವಾರೆಹಮ್, ಶ್ರೇಯಾಂಕ ಪಾಟೀಲ್, ಆಶಾ ಶೋಭನಾ, ಸೋಫಿ ಡಿವೈನ್, ರೇಣುಕಾ ಸಿಂಗ್, ಸೋಫಿ ಮೊಲಿನೆಕ್ಸ್, ಏಕ್ತಾ ಬಿಶ್ತ್, ಕೇಟ್ ಕ್ರಾಸ್, ಕನಿಕಾ ಅಹುಜಾ, ಡೇನಿಯಲ್ ವ್ಯಾಟ್. **ಬಿಡುಗಡೆಯಾದವರು:** ದಿಶಾ ಕ್ಯಾಸಟ್, ಇಂದ್ರಾಣಿ ರಾಯ್, ನಡಿನ್ ಡಿ ಕ್ಲರ್ಕ್, ಶುಭಾ ಸತೀಶ್, ಶ್ರದ್ಧಾ ಪೋಕರ್ಕರ್, ಸಿಮ್ರಾನ್ ಬಹದ್ದೂರ್, ಹೀದರ್ ನೈಟ್.

**ಮುಂಬೈ ಇಂಡಿಯನ್ಸ್: ಉಳಿಸಿಕೊಂಡಿರುವವರು:** ಹರ್ಮನ್‌ಪ್ರೀತ್ ಕೌರ್ (ನಾಯಕಿ), ಪೂಜಾ ವಸ್ತ್ರಾಕರ್, ಯಾಸ್ತಿಕಾ ಭಾಟಿಯಾ, ನೇಟ್ ಸಿವರ್-ಬ್ರಂಟ್, ಹೇಲಿ ಮ್ಯಾಥ್ಯೂಸ್, ಅಮೆಲಿಯಾ ಕೆರ್, ಕ್ಲೋಯ್ ಟ್ರಯಾನ್, ಅಮನ್‌ಜೋತ್ ಕೌರ್, ಸೈಕಾ ಇಶಾಕ್, ಜಿಂತಿಮಣಿ ಕಲಿತಾ, ಎಸ್ ಸಜ್ನಾ, ಕೀರ್ತನ್ ಬಾಲಕೃಷ್ಣನ್, ಶಬ್ನಿಮ್ ಇಸ್ಮಾಯಿಲ್. **ಬಿಡುಗಡೆಯಾದವರು:** ಪ್ರಿಯಾಂಕಾ ಬಾಲಾ, ಹುಮೈರಾ ಕಾಜಿ, ಫಾತಿಮಾ ಜಾಫರ್, ಇಸಿ ವಾಂಗ್.

**ದೆಹಲಿ ಕ್ಯಾಪಿಟಲ್ಸ್ ಉಳಿಸಿಕೊಂಡವರು:** ಶಫಾಲಿ ವರ್ಮಾ, ಜೆಮಿಮಾ ರಾಡ್ರಿಗಸ್, ತಾನಿಯಾ ಭಾಟಿಯಾ, ರಾಧಾ ಯಾದವ್, ಅರುಂಧತಿ ರೆಡ್ಡಿ, ಶಿಖಾ ಪಾಂಡೆ, ಸ್ನೇಹಾ ದೀಪ್ತಿ, ಮಿನ್ನು ಮಣಿ, ಟೈಟಾಸ್ ಸಾಧು, ಮೆಗ್ ಲ್ಯಾನಿಂಗ್, ಆಲಿಸ್ ಕ್ಯಾಪ್ಸೆ, ಮರಿಜಾನ್ನೆ ಕಪ್, ಜೆಸ್ ಜೊನಾಸೆನ್, ಅನ್ನಾಬೆಲ್ ಸದರ್ಲ್ಯಾಂಡ್.

# ಭಾರತದ ಮುಂದೆ ತಲೆಬಾಗಿದ ಪಾಕಿಸ್ತಾನ

ಹೈಬ್ರಿಡ್ ಮಾದರಿಯಲ್ಲಿ ಚಾಂಪಿಯನ್ಸ್ ಟ್ರೋಫಿ

2025 ರ ಫೆಬ್ರವರಿಯಲ್ಲಿ ನಡೆಯಲ್ಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ಪಾಕಿಸ್ತಾನ ಆತಿಥ್ಯವಹಿಸುತ್ತಿದೆ. ಆದರೆ ಈ ಟೂರ್ನಿಯ ವೇಳಾಪಟ್ಟಿಯನ್ನು ಐಸಿಸಿ ಇನ್ನೂ ಪ್ರಕಟಿಸಿಲ್ಲ. ಇದರ ಜೊತೆಗೆ ಈ ಐಸಿಸಿ ಟೂರ್ನಿಯಲ್ಲಿ ಭಾಗವಹಿಸಲು ಟೀಂ ಇಂಡಿಯಾ, ಪಾಕಿಸ್ತಾನಕ್ಕೆ ಪ್ರಯಾಣ ಬೆಳೆಸುತ್ತಾ ಎಂಬುದು ಕೂಡ ಇದುವರೆಗೆ ಖಚಿತವಾಗಿಲ್ಲ. ಸಧ್ಯದ ಪರಿಸ್ಥಿತಿಯಲ್ಲಿ ಟೀಂ ಇಂಡಿಯಾವನ್ನು ಕಳುಹಿಸಲು ಭಾರತ ಸರ್ಕಾರ ಸಿದ್ಧವಿಲ್ಲ ಎಂಬುದು ಸ್ಪಷ್ಟವಾಗಿದೆ.

ಇತ್ತ ಟೀಂ ಇಂಡಿಯಾವನ್ನು ತನ್ನ ದೇಶಕ್ಕೆ ಕರೆಸಿಕೊಳ್ಳಲು ಪಾಕಿಸ್ತಾನ ಇನ್ನಿಲ್ಲದ ಕಸರತ್ತು ಮಾಡುತ್ತಿದೆ. ಅಲ್ಲದೆ ಟೀಂ ಇಂಡಿಯಾ ಬಂದೇ ಬರುತ್ತದೆ ಎಂಬ ಭರವಸೆಯೊಂದಿಗೆ ಭಾರತ ತಂಡದ ಪಂದ್ಯಗಳನ್ನು ಲಾಹೋರ್‌ನಲ್ಲಿ ನಡೆಸುವುದಾಗಿ ಪಿಸಿಬಿ ಡ್ರಾಫ್ಟ್ ವೇಳಾಪಟ್ಟಿಯನ್ನು ಸಹ ಸಿದ್ಧಪಡಿಸಿತ್ತು. ಆದರೀಗ ಭಾರತದ ಮುಂದೆ ತಲೆಬಾಗಿರುವ ಪಾಕಿಸ್ತಾನ 2025 ರ ಚಾಂಪಿಯನ್ಸ್ ಟ್ರೋಫಿಯ ವೇಳಾಪಟ್ಟಿಯಲ್ಲಿ ಬದಲಾವಣೆಗಳನ್ನು ಮಾಡಲು ಸಿದ್ಧವಾಗಿದೆ.

ಪಿಟಿಐ ವರದಿ ಪ್ರಕಾರ, 2025ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತದ ಪಂದ್ಯಗಳು ಯುಎಇಯಲ್ಲಿ ನಡೆಯಬಹುದು. ಅಂದರೆ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ನಡೆಯಲಿದೆ. ಈ ಹಿಂದೆ 2023ರಲ್ಲಿ ನಡೆದ ಏಷ್ಯಾಕಪ್ ಕೂಡ ಹೈಬ್ರಿಡ್ ಮಾದರಿಯಲ್ಲಿ ನಡೆದಿತ್ತು. ಆಗಲೂ ಏಷ್ಯಾಕಪ್ ಆತಿಥ್ಯ ಪಾಕಿಸ್ತಾನದ ಬಳಿಯೇ ಇತ್ತಾದರೂ, ಟೀಂ ಇಂಡಿಯಾ ತನ್ನ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡಿತ್ತು.


ಇನ್ನು ಚಾಂಪಿಯನ್ಸ್ ಟ್ರೋಫಿಯನ್ನು ಹೈಬ್ರಿಡ್ ಮಾದರಿಯಲ್ಲಿ ನಡೆಸುವುದಾಗಿ ಪಿಸಿಬಿ ಚಿಂತಿಸಿದೆ ಎಂದು ಪಿಸಿಬಿಯ ವಿಶ್ವಾಸಾರ್ಹ ಮೂಲಗಳನ್ನು ಉಲ್ಲೇಖಿಸಿ ಪಿಟಿಐ ವರದಿ ಮಾಡಿದೆ. ಅದರಲ್ಲಿ ಭಾರತ ಸರ್ಕಾರ ತನ್ನ ತಂಡವನ್ನು ಪಾಕಿಸ್ತಾನ ಕಳುಹಿಸಲು ಒಪ್ಪದಿದ್ದರೆ, ಟೀಂ ಇಂಡಿಯಾದ ಪಂದ್ಯಗಳನ್ನು ದುಬೈ ಅಥವಾ ಶಾರ್ಜಾದಲ್ಲಿ ನಡೆಸಲು ಯೋಚಿಸಿದೆ. ಹೀಗಾಗಿ ಈ ಐಸಿಸಿ ಟೂರ್ನಿಯ ವೇಳಾಪಟ್ಟಿಯಲ್ಲಿ ಕೆಲವು ಬದಲಾವಣೆಗಳನ್ನು ಮಾಡಲು ಪಿಸಿಬಿ ಮುಂದಾಗಿದೆ.



ವರದಿಯ ಪ್ರಕಾರ, ಚಾಂಪಿಯನ್ಸ್ ಟ್ರೋಫಿ 2025 ರ ವೇಳಾಪಟ್ಟಿಯನ್ನು ನವೆಂಬರ್ 11 ರಂದು ಪ್ರಕಟಿಸಬಹುದು. ವಾಸ್ತವವಾಗಿ, ಮುಂದಿನ ವಾರದೊಳಗೆ ಪಂದ್ಯಾವಳಿಯ ವೇಳಾಪಟ್ಟಿಯನ್ನು ಪ್ರಕಟಿಸುವಂತೆ ಪಿಸಿಬಿ, ಐಸಿಸಿಗೆ ಒತ್ತಡ ಹೇರುತ್ತಿದೆ. ಮೂಲಗಳ ಪ್ರಕಾರ, ಕೆಲವು ತಿಂಗಳ ಹಿಂದೆಯೇ ಪಿಸಿಬಿ, ಐಸಿಸಿ ಜೊತೆಗೆ ಸಂಭವನೀಯ ವೇಳಾಪಟ್ಟಿಯ ಬಗ್ಗೆ ಚರ್ಚಿಸಿದ್ದು, ಅದೇ ವೇಳಾಪಟ್ಟಿಯನ್ನು ನವೆಂಬರ್ 11 ರಂದು ಪ್ರಕಟಿಸುವಂತೆ ಒತ್ತಾಯಿಸಿದೆ.

ಇದಲ್ಲದೆ ಚಾಂಪಿಯನ್ಸ್ ಟ್ರೋಫಿ ಆಡಲು ಟೀಂ ಇಂಡಿಯಾವನ್ನು ಪಾಕಿಸ್ತಾನಕ್ಕೆ ಕಳುಹಿಸುತ್ತೋ, ಇಲ್ಲವೋ ಎಂಬುದನ್ನು ಖಚಿತಪಡಿಸುವಂತೆ ಬಿಸಿಸಿಐಗೆ ಒತ್ತಡ ಹೇರುವಂತೆ ಪಿಸಿಬಿ ಐಸಿಸಿಯನ್ನು ಕೇಳಿದೆ ಎಂದು ಮೂಲಗಳು ತಿಳಿಸಿವೆ. ಇದರ ಜೊತೆಗೆ ಭಾರತ ತಂಡವನ್ನು ಪಾಕಿಸ್ತಾನಕ್ಕೆ ಕಳುಹಿಸಲು ತಮ್ಮ ಸರ್ಕಾರದಿಂದ ಅನುಮತಿ ಪಡೆದಿದೆಯೇ ಅಥವಾ ಇಲ್ಲವೇ ಎಂಬುದನ್ನು ಬಿಸಿಸಿಐ ಲಿಖಿತವಾಗಿ ನೀಡಬೇಕೆಂದು ಪಿಸಿಬಿ ಒತ್ತಾಯ ಮಾಡಿದೆ ಎಂದು ಹೇಳಲಾಗುತ್ತಿದೆ.

# 28 ವರ್ಷಗಳ ಬಳಿಕ ಆಸ್ಟ್ರೇಲಿಯಾದ ಅಹಂ ಮುರಿದ ಪಾಕಿಸ್ತಾನ



ಅಡಿಲೇಡ್‌ನಲ್ಲಿ ನಡೆದ ಎರಡನೇ ಏಕದಿನ ಪಂದ್ಯದಲ್ಲಿ ಆತಿಥೇಯ ಆಸ್ಟ್ರೇಲಿಯಾವನ್ನು ಏಕಪಕ್ಷೀಯ ರೀತಿಯಲ್ಲಿ ಸೋಲಿಸಿದ ಪಾಕಿಸ್ತಾನ ತಂಡ ಸರಣಿಯಲ್ಲಿ ಮೊದಲ ಗೆಲುವು ದಾಖಲಿಸಿದೆ. ಇದಕ್ಕೂ ಮುನ್ನ ಮೆಲ್ಬೋರ್ನ್‌ನಲ್ಲಿ ನಡೆದ ಮೊದಲ ಏಕದಿನ ಪಂದ್ಯದಲ್ಲಿ ಸೋಲಿನ ರುಚಿ ಕಂಡಿದ್ದ ಪಾಕಿಸ್ತಾನ ತಂಡ ಅಡಿಲೇಡ್‌ನಲ್ಲಿ ಆಸ್ಟ್ರೇಲಿಯಾವನ್ನು ಏಕಪಕ್ಷೀಯವಾಗಿ ಮಣಿಸಿ, ಸರಣಿಯನ್ನು 1-1ರಲ್ಲಿ ಸಮಬಲಗೊಳಿಸಿದೆ. ಅಡಿಲೇಡ್ ಏಕದಿನ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ಪೂರ್ಣ 50 ಓವರ್‌ಗಳನ್ನು ಆಡಲು ಸಾಧ್ಯವಾಗದೇ ಕೇವಲ 35 ಓವರ್‌ಗಳಲ್ಲಿ 163 ರನ್ ಗಳಿಗೆ ಆಲೌಟ್ ಆಯಿತು. ಇದಕ್ಕೆ ಉತ್ತರವಾಗಿ ಗುರಿ ಬೆನ್ನಟ್ಟಿದ ಪಾಕಿಸ್ತಾನ ತಂಡ 26.3 ಓವರ್‌ಗಳಲ್ಲಿ ಕೇವಲ 1 ವಿಕೆಟ್ ಕಳೆದುಕೊಂಡು ಜಯದ ನಗೆ ಬೀರಿತು. ಈ ಮೂಲಕ ಅಡಿಲೇಡ್ ಮೈದಾನದಲ್ಲಿ 28 ವರ್ಷಗಳ ನಂತರ ಆಸ್ಟ್ರೇಲಿಯಾವನ್ನು ಸೋಲಿಸಿದ ಹೆಗ್ಗಳಿಕೆಗೆ ಪಾಕಿಸ್ತಾನ ಪಾತ್ರವಾಗಿದೆ. ಇದಕ್ಕೂ ಮುನ್ನ 1996ರಲ್ಲಿ ಅಡಿಲೇಡ್‌ನಲ್ಲಿ ನಡೆದ ಏಕದಿನ ಪಂದ್ಯದಲ್ಲಿ ಪಾಕಿಸ್ತಾನ ಕೊನೆಯ ಬಾರಿಗೆ ಆಸ್ಟ್ರೇಲಿಯಾವನ್ನು ಸೋಲಿಸಿತ್ತು.

**ಹ್ಯಾರಿಸ್ ರೌಫ್ ಮಾರಕ ದಾಳಿ** ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ಪಾಕ್ ವೇಗಿಗಳಾದ ಹ್ಯಾರಿಸ್ ರೌಫ್ ಹಾಗೂ ಶಾಹೀನ್ ಅಫ್ರಿದಿ ದಾಳಿಗೆ ತತ್ತರಿಸಿ ಹೋಯಿತು. ಈ ಇಬ್ಬರ ದಾಳಿಯ ಮುಂದೆ ನಿಯಮಿತ ಅಂತರದಲ್ಲಿ ವಿಕೆಟ್ ಕಳೆದುಕೊಳ್ಳುತ್ತಾ ಸಾಗಿದ ಆಸೀಸ್‌ಗೆ ಬೃಹತ್ ಮೊತ್ತ ಕಲೆಹಾಕಲು ಸಾಧ್ಯವಾಗಲಿಲ್ಲ. ತಂಡದ ಪರ ಸ್ಟೀವ್ ಸ್ಮಿತ್ ಕಲೆಹಾಕಿದ 35 ರನ್‌ಗಳೇ ಅತ್ಯಧಿಕ ಸ್ಕೋರ್ ಆಗಿತ್ತು. ಉಳಿದಂತೆ ಭಾಗಶಃ ಆಟಗಾರರ ಎರಡಂಕಿ ಮೊತ್ತ ದಾಖಲಿಸಿದರಾದರೂ ಅದನ್ನು ಬಿಗ್ ಇನ್ನಿಂಗ್ಸ್ ಆಗಿ ಪರಿವರ್ತಿಸುವಲ್ಲಿ ಎಡವಿದರು. ತಂಡದ 8 ಆಟಗಾರರು 10 ಕ್ಕಿಂತ ಹೆಚ್ಚು ರನ್ ಕಲೆಹಾಕಿದರು. ಇದರಲ್ಲಿ ಸ್ಮಿತ್ ಹೊರತುಪಡಿಸಿ ಉಳಿದವರೆಲ್ಲ ಕೇವಲ 20 ರನ್‌ಗಳೊಳಗೆ ಪೆವಿಲಿಯನ್ ಸೇರಿಕೊಂಡರು.



# ಕನ್ನಡಿಗನ ಹೆಗಲೇರಿದ ಕಳಪೆ ಫಾರ್ಮ್ ಭೂತ

ಏನಾಯ್ತು ರಾಹುಲ್..

ಕೆಲವೇ ಕೆಲವು ತಿಂಗಳುಗಳ ಹಿಂದೆ ಟೀಂ ಇಂಡಿಯಾದ ಭರವಸೆ ಬ್ಯಾಟ್ಸ್‌ಮನ್‌ಗಳ ಪಟ್ಟಿಯಲ್ಲಿ ಕಾಣಿಸಿಕೊಳ್ಳುತ್ತಿದ್ದ ಕನ್ನಡಿಗ ಕೆಎಲ್ ರಾಹುಲ್, ಅದ್ಯಾಕೋ ಇತ್ತೀಚೆಗೆ ಬ್ಯಾಟಿಂಗ್ ಮರೆತವರಂತೆ ವರ್ತಿಸುತ್ತಿದ್ದಾರೆ. ಟೀಂ ಇಂಡಿಯಾದಲ್ಲಿ ಸ್ಥಾನ ಪಡೆಯಲು ಎಷ್ಟು ಸರ್ಕಸ್ ಮಾಡಬೇಕು ಎಂಬುದನ್ನು ಹೊಸದಾಗಿ ಹೇಳಬೇಕಿಲ್ಲ, ಆದಾಗ್ಯೂ ಅವಕಾಶಗಳ ಮೇಲೆ ಅವಕಾಶಗಳನ್ನು ನೀಡುತ್ತಿದ್ದರೂ ರಾಹುಲ್‌ಗೆ ಮಾತ್ರ ಆಯ್ಕೆ ಮಂಡಳಿ ಮೆಚ್ಚುವಂತಹ ಇನ್ನಿಂಗ್ಸ್ ಆಡಲು ಸಾಧ್ಯವಾಗುತ್ತಿಲ್ಲ. ಇನ್ನಿಂಗ್ಸ್ ಕಥೆ ಹಾಗಿರಲಿ, ರಾಹುಲ್‌ಗೆ ಚೆಂಡನ್ನು ಹೇಗೆ ಎದುರಿಸಬೇಕು ಎಂಬುದೇ ಮರೆತು ಹೋಗಿರುವಂತೆ ತೋರುತ್ತಿದೆ. ಇದಕ್ಕೆ ಉದಾಹರಣೆಯಾಗಿ ಪ್ರಸ್ತುತ ಆಸ್ಟ್ರೇಲಿಯಾ ವಿರುದ್ಧದ ಅಭ್ಯಾಸ ಪಂದ್ಯದಲ್ಲಿ ರಾಹುಲ್ ಔಟಾದ ರೀತಿಯೇ ನಮ್ಮ ಕಣ್ಣ ಮುಂದಿದೆ.

**ರಾಹುಲ್‌ಗೆ ಕ್ರಿಕೆಟ್ ಮರೆತು ಹೋಗಿದ್ಯಾ**

ಈ ಮುಂಚೆ ಸ್ಪಿನ್ ಬೌಲರ್‌ಗಳನ್ನು ಸಮರ್ಥವಾಗಿ ಎದುರಿಸುತ್ತಿದ್ದ ರಾಹುಲ್ ಇದೀಗ ಸಾಕಷ್ಟು ಕಷ್ಟ ಪಡುತ್ತಿದ್ದಾರೆ. ವಾಸ್ತವವಾಗಿ ಆಸ್ಟ್ರೇಲಿಯಾ ವಿರುದ್ಧದ ಐದು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯಕ್ಕೆ ನಾಯಕ ರೋಹಿತ್ ಅಲಭ್ಯರಾಗುವ ಸಾಧ್ಯತೆಗಳಿವೆ. ಹೀಗಾಗಿ ರಾಹುಲ್‌ರನ್ನು ಆರಂಭಿಕರನ್ನಾಗಿ ಕಣಕ್ಕಿಳಿಸುವ ಇರಾದೆಯೊಂದಿಗೆ ಬಿಸಿಸಿಐ, ರಾಹುಲ್‌ರನ್ನು ಆಸ್ಟ್ರೇಲಿಯಾ ಎ ವಿರುದ್ಧ ಅಭ್ಯಾಸ ಪಂದ್ಯವನ್ನಾಡಲು ಆಸ್ಟ್ರೇಲಿಯಾಕ್ಕೆ ಕಳುಹಿಸಿತ್ತು. ಆದರೆ ಸಿಕ್ಕ ಅವಕಾಶವನ್ನು ಉಪಯೋಗಿಸಿಕೊಳ್ಳುವಲ್ಲಿ ಎಡವಿದ ರಾಹುಲ್, ಮೊದಲ ಇನ್ನಿಂಗ್ಸ್‌ನಲ್ಲಿ 4 ರನ್‌ಗಳಿಗೆ ಸುಸ್ತಾದರೆ, ಎರಡನೇ ಇನ್ನಿಂಗ್ಸ್‌ನಲ್ಲಿ ಕೇವಲ 10 ರನ್ ಬಾರಿಸಲಷ್ಟೇ ಶಕ್ತರಾದರು. ಆದರಲ್ಲೂ ಎರಡನೇ ಇನ್ನಿಂಗ್ಸ್‌ನಲ್ಲಿ ರಾಹುಲ್ ವಿಕೆಟ್ ಕಳೆದುಕೊಂಡ ರೀತಿಗೆ ಟೀಂ ಇಂಡಿಯಾ ಫ್ಯಾನ್ಸ್ ಅಚ್ಚರಿಗೊಂಡಿರುವುದಲ್ಲದೆ, ರಾಹುಲ್‌ಗೆ ಕ್ರಿಕೆಟ್ ಮರೆತು ಹೋಗಿದ್ಯಾ ಎಂದು ಸೋಶಿಯಲ್ ಮೀಡಿಯಾದಲ್ಲಿ ಪ್ರಶ್ನೆಗಳನ್ನು ಎತ್ತುತ್ತಿದ್ದಾರೆ.

ಎರಡನೇ ಇನ್ನಿಂಗ್ಸ್‌ನಲ್ಲಿ ರಾಹುಲ್ ಆಫ್ ಸ್ಪಿನ್ನರ್ ರೋಚಿಸಿಯೋಲಿ ಎಸೆತದಲ್ಲಿ ಬೌಲ್ಡ್ ಆದರು. ರೋಚಿಸಿಯೋಲಿ ಬೌಲ್ ಮಾಡಿದ ತೀರಾ ಸಾಮಾನ್ಯ ಚೆಂಡು ಮಧ್ಯದ ಸ್ಟಂಪ್‌ನಲ್ಲಿ ಬಿದ್ದು ರಾಹುಲ್ ಕಡೆಗೆ ಹೋಯಿತು. ಆದರೆ ರಾಹುಲ್ ಈ ಚೆಂಡನ್ನು ಬ್ಯಾಟ್‌ನಲ್ಲಿ ಆಡುವ ಬದಲು, ತನ್ನ ಕಾಲಿನಿಂದ ಆಡಿದರು. ಆ ಬಳಿಕ ಚೆಂಡು, ರಾಹುಲ್ ಅವರ ಕಾಲಿಗೆ ಬಡಿದು ಸ್ಟಂಪ್‌ಗೆ ಹೋಯಿತು. ಇಷ್ಟು ಸಾಮಾನ್ಯ ಎಸೆತದಲ್ಲಿ ರಾಹುಲ್ ಬೌಲ್ಡ್ ಆಗಿದ್ದು, ಆಸ್ಟ್ರೇಲಿಯಾದ ವೀಕ್ಷಕ ವಿವರಣೆಗಾರರಿಗೂ ಅಚ್ಚರಿ ಮೂಡಿಸಿತು. ರಾಹುಲ್ ಕೂಡ ತುಂಬಾ ನಿರಾಶೆಗೊಂಡಿದಲ್ಲದೆ, ನೋವಿನೊಂದಿಗೆ ಪೆವಿಲಿಯನ್‌ತ್ತ ಹೆಜ್ಜೆ ಹಾಕಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966